Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕನ್ನಡ ದಿನಪತ್ರಿಕೆಗಳ ತುಣಕು

## 31-12-2020



# ಪರಿವಿಡಿ

1. ಪ್ರಜಾ ವಾಣಿ
2. ಕನ್ನಡ ಪ್ರಭ
3. ವಿಜಯ ಕರ್ನಾಟಕ
4. ವಿಜಯ ವಾಣಿ
5. ವಿಶ್ವ ವಾಣಿ
6. ಉದಯ ವಾಣಿ
7. ಸಂಯುಕ್ತ ಕರ್ನಾಟಕ
8. ಹೊಸ ದಿಗಂತ
9. ವಾರ್ತಾ ಭಾರತಿ
10. ಸಂಜೆ ವಾಣಿ
11. ಈ ಸಂಜೆ

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

### ಸೋಂಕು ದೃಢಪಟ್ಟವರು ಆಸ್ಪತ್ರೆಗೆ ದಾಖಲು, ನೇರ–ಪರೋಕ್ಷ ಸಂಪರ್ಕಿತರಿಗೆ ಹೋಟೆಲ್‌ನಲ್ಲಿ ಕ್ವಾರಂಟೈನ್

# ಬ್ರಿಟನ್‌ನಿಂದ ಬಂದ 18 ಮಂದಿಗೆ ಸೋಂಕು

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಬ್ರಿಟನ್‌ನಿಂದ ಇಲ್ಲಿಗೆ ವಾಪಸ್ ಆದವರಲ್ಲಿ ಬುಧವಾರ ಮತ್ತೊಬ್ಬರು ಕೋವಿಡ್ ಪೀಡಿತರಾಗಿದ್ದಾರೆ. ಇದರಿಂದಾಗಿ ಈವರೆಗೆ ಅಲ್ಲಿಂದ ಬಂದ ವಲಸಿಗರಲ್ಲಿ ಸೋಂಕಿತರಾದವರ ಸಂಖ್ಯೆ 18ಕ್ಕೆ ಏರಿಕೆಯಾಗಿದೆ.

ಕೋವಿಡ್ ಪೀಡಿತರ 54 ಮಂದಿ ನೇರ ಸಂಪರ್ಕಿತರು ಹಾಗೂ 92 ಮಂದಿ ದ್ವಿತೀಯ ಸಂಪರ್ಕಿತರನ್ನು ಬಿಬಿಎಂಪಿ ಸಿಬ್ಬಂದಿ ಪತ್ತೆ ಮಾಡಿದ್ದಾರೆ. ಸೋಂಕು ದೃಢಪಟ್ಟವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ನೇರ ಮತ್ತು ಪರೋಕ್ಷ ಸಂಪರ್ಕಿತರನ್ನು ಪಾಲಿಕೆ ಗುರುತಿಸಿರುವ ಹೋಟೆಲ್‌ಗಳಲ್ಲಿ ಸಾಂಸ್ಥಿಕ ಕ್ವಾರಂಟೈನ್‌ಗೆ ಒಳಪಡಿಸಲಾಗಿದೆ.

ಕಳೆದ ನ.22ರಿಂದ ನಗರಕ್ಕೆ ಬ್ರಿಟನ್‌ನಿಂದ 1,433 ಮಂದಿ ಬಂದಿದ್ದು, ಅವರಲ್ಲಿ 1,382 ಮಂದಿಯನ್ನು ಪತ್ತೆ ಮಾಡಲಾಗಿದೆ. ಇದರಲ್ಲಿ 1,293 ಮಂದಿ ಕೋವಿಡ್ ಪರೀಕ್ಷೆ ಮಾಡಿಸಿಕೊಂಡಿದ್ದಾರೆ. ಈಗಾಗಲೇ 1,090 ಮಂದಿಯ ಪರೀಕ್ಷೆಯ ಫಲಿತಾಂಶ ಬಂದಿದೆ. ಕೋವಿಡ್ ದೃಢಪಟ್ಟ 18 ಮಂದಿಯ ಮಾದರಿಯನ್ನು ಜೆನೆಟಿಕ್ ಸೀಕ್ವೆನ್ಸ್ ಪರೀಕ್ಷೆಗೆ ನಿಮ್ಹಾನ್ಸ್ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. 185 ಮಂದಿ ಫಲಿತಾಂಶಕ್ಕೆ ಎದುರುನೋಡುತ್ತಿದ್ದಾರೆ. ಈವರೆಗೆ ಮೂವರಿಗೆ ಹೊಸ ಸ್ವರೂಪದ ಕೊರೊನಾ ವೈರಾಣು ತಗುಲಿರುವುದು ದೃಢಪಟ್ಟಿದ್ದು, ಉಳಿದವರ ವರದಿ ಬರಬೇಕಿದೆ.




ಬ್ರಿಟನ್ ರೂಪಾಂತರ ಸೋಂಕು ತಗುಲಿರುವ ತಾಯಿ ಮತ್ತು ಮಗು ವಾಸವಿದ್ದ ಬೆಂಗಳೂರಿನ ಕುಮಾರಸ್ವಾಮಿ ಬಡಾವಣೆಯ ವಿಠ್ಠಲನಗರದ ಅಪಾರ್ಟ್‌ಮೆಂಟ್ ಅನ್ನು ಸೀಲ್ ಡೌನ್ ಮಾಡಲಾಗಿದೆ ಪ್ರಜಾವಾಣಿ ಚಿತ್ರ/ ರಂಜು ಪಿ

**ಭಿತ್ತಿ ಪತ್ರ ಅಳವಡಿಕೆ:** ಕೋವಿಡ್ ಕಾಣಿಸಿಕೊಂಡ ಪ್ರಾರಂಭಿಕ ದಿನಗಳಲ್ಲಿ ಸೋಂಕಿತರ ಮನೆಗೆ ಭಿತ್ತಿ ಪತ್ರವನ್ನು ಅಂಟಿಸಿ, ಅವರ ಕೈಗೆ ಮುದ್ರೆ ಹಾಕಲಾಗುತ್ತಿತ್ತು. ಅಧಿಕ ಪ್ರಕರಣಗಳು ನಿಗದಿತ ಸ್ಥಳದಲ್ಲಿ ವರದಿಯಾದಲ್ಲಿ ಬ್ಯಾರಿಕೇಡ್ ಹಾಕಿ, ನಿರ್ಬಂಧಿತ ಸ್ಥಳ ಎಂದು ಗುರುತಿಸಲಾಗುತ್ತಿತ್ತು. ಇದರಿಂದ ರೋಗಿಗಳನ್ನು ಕಳಂಕಿತರ ರೀತಿಯಲ್ಲಿ ಸುತ್ತಮುತ್ತಲಿನ ನಿವಾಸಿಗಳು ನೋಡುತ್ತಾರೆ ಎಂಬ ಕಾರಣಕ್ಕೆ ಈ ನಿರ್ಬಂಧಗಳನ್ನು ಸಂಪೂರ್ಣವಾಗಿ ಸಡಿಲಿಸಲಾಗಿತ್ತು. ಆದರೆ, ಈಗ ಹೊಸ ಸ್ವರೂಪದ ಕೊರೊನಾ ವೈರಾಣು ನಗರದಲ್ಲಿ ಪತ್ತೆಯಾದ ಕಾರಣ ಬಿಬಿಎಂಪಿಯು ಮತ್ತೆ ಭಿತ್ತಿ ಪತ್ರಗಳನ್ನು ಅಂಟಿಸಿ, ಬ್ಯಾರಿಕೇಡ್ ಹಾಕಲಾರಂಭಿಸಿದೆ.

ಬಿಬಿಎಂಪಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ರಾಜೇಂದ್ರ ಚೋಳನ್, 'ಸೋಂಕಿತರ ಕುಟುಂಬದ ಸದಸ್ಯರು ಹೋಟೆಲ್‌ಗೆ ಸ್ಥಳಾಂತರವಾಗಲು ನಿರಾಕರಿಸಿದ ಕಾರಣ ಬ್ಯಾರಿಕೇಡ್ ಹಾಕಿ, ಭಿತ್ತಿಪತ್ರವನ್ನು ಅಂಟಿಸಲಾಗಿದೆ. ಸೋಂಕಿತರನ್ನು ಕ್ವಾರಂಟೈನ್‌ಗೆ ಒಳಪಡಿಸಲು ಐದು ಹೋಟೆಲ್‌ಗಳನ್ನು ಗುರುತಿಸಲಾಗಿದೆ. ಆ ಹೋಟೆಲ್‌ಗಳ ಮುಂದೆ ಬ್ಯಾರಿಕೇಡ್ ಹಾಕಲಾಗಿದೆ. ಮನೆಗಳಿಗೆ ಬ್ಯಾರಿಕೇಡ್ ಹಾಕದಂತೆ ಸೂಚನೆ ನೀಡಲಾಗಿದೆ' ಎಂದು ಹೇಳಿದರು.

## ಲಸಿಕೆಗೆ ಅನುಮೋದನೆ: ನಾಳೆ ಮತ್ತೆ ಸಭೆ

**ನವದೆಹಲಿ (ಪಿಟಿಐ):** ದೇಶದಲ್ಲಿ ಕೋವಿಡ್ ಲಸಿಕೆಯ ತುರ್ತು ಬಳಕೆಗೆ ಅನುಮೋದನೆ ನೀಡುವಂತೆ ಸೆರಂ ಇನ್‌ಸ್ಟಿಟ್ಯೂಟ್, ಫೈಝರ್ ಹಾಗೂ ಭಾರತ್ ಬಯೋಟೆಕ್ ಸಂಸ್ಥೆ ಸಲ್ಲಿಸಿದ್ದ ಅರ್ಜಿಗಳನ್ನು ಭಾರತೀಯ ಔಷಧ ಗುಣಮಟ್ಟ ನಿಯಂತ್ರಕರ ಸಂಘಟನೆ (ಸಿಡಿಎಸ್‌ಸಿಒ) ಬುಧವಾರ ಪರಿಶೀಲನೆ ನಡೆಸಿತು. ಜನವರಿ 1ರಂದು ಮತ್ತೆ ಸಭೆ ಸೇರಿ ಚರ್ಚೆ ಮುಂದುವರಿಸಲು ನಿರ್ಧರಿಸಿತು ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ.

ಕೋವಿಡ್-19 ಕುರಿತ ವಿಷಯ ತಜ್ಞರ ಸಮಿತಿಯು (ಎಸ್‌ಇಸಿ) ಸೆರಂ ಸಂಸ್ಥೆ (ಎಸ್‌ಐಐ) ಮತ್ತು ಭಾರತ್ ಬಯೋಟೆಕ್ ಸಲ್ಲಿಸಿದ ಹೆಚ್ಚುವರಿ ದತ್ತಾಂಶ ಮತ್ತು ಮಾಹಿತಿಯನ್ನು ಪರಿಶೀಲಿಸಿತು. ಸೆರಂ ಸಂಸ್ಥೆಯು 'ಕೋವಿಶೀಲ್ಡ್', ಭಾರತ್ ಬಯೋಟೆಕ್ ಸಂಸ್ಥೆಯು 'ಕೊವ್ಯಾಕ್ಸಿನ್' ಹೆಸರಿನ ಲಸಿಕೆಗಳನ್ನು ಉತ್ಪಾದಿಸುತ್ತಿವೆ.

'ಫೈಝರ್ ಪ್ರತಿನಿಧಿಗಳು ಹೆಚ್ಚಿನ ಸಮಯವನ್ನು ಕೋರಿದರು. ಎಸ್‌ಐಐ ಮತ್ತು ಭಾರತ್ ಬಯೋಟೆಕ್ ಸಂಸ್ಥೆಗಳು ಪ್ರಸ್ತುತಪಡಿಸಿದ ಹೆಚ್ಚುವರಿ ದತ್ತಾಂಶ ಮತ್ತು ಮಾಹಿತಿಯನ್ನು ಎಸ್‌ಇಸಿ ಪರಿಶೀಲಿಸಿತು. ಮಾಹಿತಿಯ ವಿಶ್ಲೇಷಣೆ ನಡೆಯುತ್ತಿದೆ' ಎಂದು ಸಚಿವಾಲಯ ತಿಳಿಸಿದೆ.

## ತ್ವರಿತ ಸಂಪರ್ಕ ಪತ್ತೆಗೆ ಸೂಚನೆ

ಬ್ರಿಟನ್‌ನಿಂದ ನಗರಕ್ಕೆ ಬಂದವರಲ್ಲಿ ರೂಪಾಂತರ ವೈರಾಣು ಕಾಣಿಸಿಕೊಂಡ ಕಾರಣ ಸೋಂಕಿತರ ಸಂಪರ್ಕಿತರನ್ನು ತ್ವರಿತವಾಗಿ ಪತ್ತೆಮಾಡಬೇಕು ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಹೊಸ ಸ್ವರೂಪದ ವೈರಾಣು ಕಾಣಿಸಿಕೊಂಡ ಕಾರಣ ಅವರು ಅಧಿಕಾರಿಗಳ ಜತೆಗೆ ಬುಧವಾರ ಸಭೆ ನಡೆಸಿದರು. 'ನಗರದಲ್ಲಿ ರೂಪಾಂತರ ಕೊರೊನಾ ವೈರಾಣು ಹರಡದಂತೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳಬೇಕು. ಸರ್ಕಾರದ ಪ್ರಮಾಣೀಕೃತ ಕಾರ್ಯಾಚರಣೆ ವಿಧಾನವು (ಎಸ್‌ಒಪಿ) ಪಾಲನೆಯಾಗುವಂತೆ ನೋಡಿಕೊಳ್ಳಬೇಕು' ಎಂದು ತಿಳಿಸಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

# ಮತ್ತೆ ಇಬ್ಬರು ಬ್ರಿಟನ್ ವಲಸಿಗರಿಗೆ ಸೋಂಕು

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಬ್ರಿಟನ್‌ನಿಂದ ರಾಜ್ಯಕ್ಕೆ ಬಂದವರ ಪೈಕಿ ಮತ್ತೆ ಇಬ್ಬರು ಕೋವಿಡ್ ಪೀಡಿತರಾಗಿರುವುದು(ಸಾಮಾನ್ಯ ಕೋವಿಡ್) ದೃಢಪಟ್ಟಿದೆ. ಇದರಿಂದಾಗಿ ಅಲ್ಲಿಂದ ಮರಳಿದವರಲ್ಲಿ ಈವರೆಗೆ ಸೋಂಕಿತರಾದವರ ಸಂಖ್ಯೆ 31ಕ್ಕೆ ಏರಿಕೆಯಾಗಿದೆ.

ಬ್ರಿಟನ್‌ನಿಂದ ಇಲ್ಲಿಗೆ ಬಂದವರಲ್ಲಿ 62 ಮಂದಿಗೆ ಆರ್‌ಟಿ–ಪಿಸಿಆರ್ ಪರೀಕ್ಷೆಯನ್ನು ಬುಧವಾರ ನಡೆಸಲಾಗಿದೆ. ಅದರಲ್ಲಿ 60 ಮಂದಿಗೆ ಸೋಂಕು ತಗುಲಿಲ್ಲ ಎನ್ನುವುದು ಖಚಿತಪಟ್ಟಿದೆ. ಅಲ್ಲಿಂದ ಬಂದವರಲ್ಲಿ ಈವರೆಗೆ ಒಟ್ಟು 1,965 ಮಂದಿ ಕೋವಿಡ್ ಪರೀಕ್ಷೆಗೆ ಒಳಪಟ್ಟಿದ್ದಾರೆ. ಅವರಲ್ಲಿ 1,686 ಮಂದಿಗೆ ಸೋಂಕು ತಗುಲಿಲ್ಲ ಎನ್ನುವುದು ಪರೀಕ್ಷಾ ವರದಿಯಿಂದ ದೃಢಪಟ್ಟಿದೆ. ಇನ್ನೂ 248 ಮಂದಿ ಪರೀಕ್ಷೆಯ ವರದಿಗೆ ಎದುರು ನೋಡು ತ್ತಿದ್ದಾರೆ.

ರಾಜ್ಯದಲ್ಲಿ ಹೊಸದಾಗಿ 973 ಕೋವಿಡ್ ಪ್ರಕರಣಗಳು ವರದಿಯಾಗಿವೆ. ಇಲ್ಲಿಯವರೆಗೆ ಸೋಂಕಿಗೀಡಾದವರ ಒಟ್ಟು ಸಂಖ್ಯೆ 9.18 ಲಕ್ಷ ದಾಟಿದೆ. ಈ ತಿಂಗಳ 30 ದಿನಗಳಲ್ಲಿ 33,647 ಮಂದಿ ಸೋಂಕಿತರಾಗಿರುವುದು ದೃಢಪಟ್ಟಿದೆ. ಈ ಅವಧಿಯಲ್ಲಿ ಪ್ರತಿನಿತ್ಯ ಸರಾಸರಿ 1,121 ಮಂದಿ ಕೋವಿಡ್ ಪೀಡಿತರಾಗಿದ್ದಾರೆ. ಸೋಂಕಿತರಲ್ಲಿ 7 ಮಂದಿ ಮೃತಪಟ್ಟಿದ್ದಾರೆ. ಈವರೆಗೆ ಸಾವಿಗೀಡಾದವರ ಸಂಖ್ಯೆ 12,081ಕ್ಕೆ ತಲುಪಿದೆ.

ಒಂದೇ ದಿನ 92 ಸಾವಿರ ಆರ್‌ಟಿ–ಪಿಸಿಆರ್ ಸೇರಿದಂತೆ 1.03 ಲಕ್ಷ ಕೋವಿಡ್ ಪರೀಕ್ಷೆಗಳನ್ನು ನಡೆಸಲಾಗಿದೆ. ಈವರೆಗೆ 1.39 ಕೋಟಿ ಮಂದಿ ಕೋವಿಡ್ ಪರೀಕ್ಷೆಗೆ ಒಳಪಟ್ಟಿದ್ದಾರೆ. ಕೋವಿಡ್ ಪೀಡಿತರಲ್ಲಿ 1,217 ಮಂದಿಗೆ ಕಾಯಿಲೆ ವಾಸಿಯಾಗಿದ್ದು, ಇದರಿಂದಾಗಿ ಚೇತರಿಸಿಕೊಂಡವರ ಸಂಖ್ಯೆ 8.94 ಲಕ್ಷಕ್ಕೆ ತಲುಪಿದೆ.

**ಸಕ್ರಿಯ ಪ್ರಕರಣಗಳು ಇಳಿಕೆ:** ಸಕ್ರಿಯ ಪ್ರಕರಣಗಳು ಮತ್ತಷ್ಟು ಇಳಿಕೆ ಕಂಡಿದ್ದು, ಸದ್ಯ 11,610 ಮಂದಿ ಆಸ್ಪತ್ರೆ ಸೇರಿದಂತೆ ವಿವಿಧೆಡೆ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ. ಅವರಲ್ಲಿ 202 ಮಂದಿ ತೀವ್ರ ನಿಗಾ ಘಟಕದಲ್ಲಿ (ಐಸಿಯು) ಇದ್ದಾರೆ. ಕಳೆದ 14 ದಿನಗಳ ಅವಧಿಯಲ್ಲಿ 71 ಸಾವಿರ ನೇರ ಸಂಪರ್ಕಿತರು ಹಾಗೂ 81 ಸಾವಿರ ಪರೋಕ್ಷ ಸಂಪರ್ಕಿತರನ್ನು ಪತ್ತೆ ಮಾಡಲಾಗಿದೆ.

ಬೆಂಗಳೂರಿನಲ್ಲಿ ಮತ್ತೆ 554 ಮಂದಿ ಕೋವಿಡ್ ಪೀಡಿತರಾಗಿದ್ದು, ಸೋಂಕಿತರ ಸಂಖ್ಯೆ 3.87 ಲಕ್ಷ ದಾಟಿದೆ. ಮೈಸೂರಿನಲ್ಲಿ ಮತ್ತೆ 34 ಪ್ರಕರಣಗಳು ವರದಿಯಾಗಿದೆ. ಅಲ್ಲಿ ಸೋಂಕಿತರ ಸಂಖ್ಯೆ 52,346ಕ್ಕೆ ತಲುಪಿದೆ. ಹಾಸನ, ದಕ್ಷಿಣ ಕನ್ನಡ ಹಾಗೂ ಚಿಕ್ಕಬಳ್ಳಾಪುರದಲ್ಲಿ ತಲಾ 31 ಪ್ರಕರಣಗಳು ವರದಿಯಾಗಿವೆ. ರಾಜ್ಯದ 27 ಜಿಲ್ಲೆಯಲ್ಲಿ ಹೊಸದಾಗಿ ಯಾವುದೇ ಮರಣ ಪ್ರಕರಣ ವರದಿಯಾಗಿಲ್ಲ.

ಕನ್ನಡಪ್ರಭ

## ಹೊಸ ವರ್ಷಾಚರಣೆಗೆ ಬೀದಿಗೆ ಇಳಿಯುವಂತಿಲ್ಲ

# ರಸ್ತೆಗೆ ಇಳಿದರೆ ದಂಡ, ಕೇಸು, ಲಾ

**ಕೊರೋನಾ ಹಿನ್ನೆಲೆ | ಸಾರ್ವಜನಿಕ ಸ್ಥಳಗಳಲ್ಲಿ ಅದ್ಧೂರಿ ಹೊಸ ವರ್ಷಾಚರಣೆಗೆ ಬ್ರೇಕ್ | ಇಂದು ಸಂಜೆಯಿಂದಲೇ ನಗರದೆಲ್ಲೆಡೆ ನಿಷೇಧಾಜ್ಞೆ ಜಾ**
**ಡಿಜೆ, ಅಬ್ಬರದ ಬ್ಯಾಂಡ್‌ಗೆ ಬ್ರೇಕ್ | ಮುಂಗಡ ಕಾಯ್ದಿರಿಸಿದವರಿಗೆ ಮಾತ್ರ ರೆಸಾರ್ಟ್, ಪಬ್‌ಗಳಲ್ಲಿ ಅವಕಾಶ | ನಿಯಮ ಮೀರಿದರೆ ಕಠಿಣ ಕ್ರಮ**

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೊರೋನಾ ಸೋಂಕು ಹರಡುವಿಕೆ ತಡೆಗೆ ಅದ್ದೂರಿ ಹೊಸ ವರ್ಷಾಚರಣೆ ನಡೆಯದಂತೆ ಬಿಗಿ ಕ್ರಮ ಕೈಗೊಂಡಿರುವ ನಗರ ಪೊಲೀಸರು, ಗುರುವಾರ ಸಂಜೆಯಿಂದ ಶುಕ್ರವಾರ ಮುಂಜಾನವರೆಗೆ ನಗರದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದಾರೆ.

ಈ ವೇಳೆ ಜನರು ಗುಂಪು ಸೇರಿದ್ದು ಕಂಡು ಬಂದಲ್ಲಿ ಲಾಠಿ ಬೀಸುವಂಥ ಕಠಿಣ ಕ್ರಮ ಅನುಸರಿಸಲಾಗುವುದು. ಅಲ್ಲದೆ, ಅನಗತ್ಯವಾಗಿ ಸಂಚರಿಸುವುದು ಕಂಡು ಬಂದಲ್ಲಿ ದಂಡ ವಿಧಿಸುವ ಜತೆಗೆ ಪ್ರಕರಣ ದಾಖಲಿಸಲಾಗುವುದು ಎಂದೂ ಪೊಲೀಸರು ಎಚ್ಚರಿಸಿದ್ದಾರೆ.

ಪಬ್, ಹೋಟೆಲ್, ರೆಸಾರ್ಟ್‌ಗಳಲ್ಲಿ ಮುಂಗಡವಾಗಿ ಕಾಯ್ದಿರಿಸಿದ ಅತಿಥಿಗಳಿಗೆ ಹಾಗೂ ಖಾಸಗಿ ಕ್ಲಬ್‌ಗಳಲ್ಲಿ ಸದಸ್ಯರು ಹಾಗೂ ಅಪಾರ್ಟ್‌ಮೆಂಟ್‌ಗಳ ನಿವಾಸಿಗಳಿಗೆ ಮಾತ್ರ ಆಯಾ ಪ್ರದೇಶದಲ್ಲಿ ಹೊಸ ವರ್ಷಾಚರಣೆಗೆ ಪೊಲೀಸರು ಅನುಮತಿ ನೀಡಿದ್ದಾರೆ. ಹಾಗೆಯೇ ಆಚರಣೆ ವೇಳೆ ಡಿಜೆ, ಬ್ಯಾಂಡ್ ಸೇರಿದಂತೆ ವಿಶೇಷ ಸಂಗೀತ ಕಾರ್ಯಕ್ರಮಗಳ ಆಯೋಜನೆಗೆ ಅನುಮತಿ ಇಲ್ಲ. ಕಾರ್ಯಕ್ರಮದ ಆಯೋಜಕರು ಕಡ್ಡಾಯವಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಾರಿಗೊಳಿಸಿರುವ ಕೋವಿಡ್-19 ನಿಯಮಾವಳಿಗಳನ್ನು ಪಾಲಿಸಬೇಕಾಗುತ್ತದೆ ಎಂದು ಆಯುಕ್ತ ಕಮಲ್ ಪಂತ್ ಸ್ಪಷ್ಟವಾಗಿ ಸೂಚಿಸಿದ್ದಾರೆ.

**ಎಂ.ಜಿ.ರಸ್ತೇಲಿ 2 ಸಾವಿರ ಪೊಲೀಸ್:** ನಗರದಲ್ಲಿ ಡಿ.31ರ ಗುರುವಾರ ಸಂಜೆ 6 ಗಂಟೆಯಿಂದ ಶುಕ್ರವಾರ ಬೆಳಗ್ಗೆ 6 ಗಂಟೆವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಹೀಗಾಗಿ ಐದಕ್ಕಿಂತ ಹೆಚ್ಚಿನ ಜನರ ಗುಂಪುಗೂಡುವಂತಿಲ್ಲ. ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ ಹಾಗೂ ಚರ್ಚ್ ಸ್ಟ್ರೀಟ್ ವ್ಯಾಪ್ತಿಯಲ್ಲಿ ಎರಡು ಸಾವಿರಕ್ಕೂ ಅಧಿಕ ಪೊಲೀಸರನ್ನು ಭದ್ರತೆ ನಿಯೋಜಿಸಲಾಗುತ್ತದೆ. ಅಲ್ಲದೆ, ಹಿರಿಯ-ಕಿರಿಯ ಅಧಿಕಾರಿಗಳು ಸೇರಿದಂತೆ ನಗರದ ಎಲ್ಲ ಪೊಲೀಸರು ಗುರುವಾರ ರಾತ್ರಿ ಕರ್ತವ್ಯ ನಿರತರಾಗಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪಬ್, ಕ್ಲಬ್, ಹೋಟೆಲ್, ರೆಸ್ಟೋರೆಂಟ್, ಮಾಲ್, ರೆಸಾರ್ಟ್‌ಗಳಲ್ಲಿ ಮಾರ್ಗಸೂಚಿ ಪಾಲನೆ ಮಾಡಬೇಕು. ಸ್ಯಾನಿಟೈಸರ್, ವೈಯಕ್ತಿಕ ಅಂತರ, ಮಾಸ್ಕ್, ದೇಹದ ಉಷ್ಣಾಂಶ ತಪಾಸಣೆ ಕಡ್ಡಾಯವಾಗಿ ಮಾಡಬೇಕು. ತಪ್ಪಿದರೆ ಐಪಿಸಿ ಸೆಕ್ಷನ್, ರಾಷ್ಟ್ರೀಯ ವಿಪತ್ತು ನಿರ್ವಹಣಾ ಕಾಯ್ದೆಯಡಿ ಕೇಸ್ ದಾಖಲಿಸಲಾಗುತ್ತದೆ ಎಂದು ಪೊಲೀಸರು ಎಚ್ಚರಿಸಿದ್ದಾರೆ.



**ಮುನ್ನೆಚ್ಚರಿಕೆ ಕ್ರಮವಾಗಿ ಎಂ.ಜಿ.ರಸ್ತೆ ಹಾಗೂ ಬ್ರಿಗೇಡ್ ರಸ್ತೆಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಅಧಿಕಾರಿಗಳು ವಿಡಿಯೋ ಪರಿಶೀಲಿಸಿದರು.**



ಬ್ರಿಗೇಡ್ ರಸ್ತೆಯಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸುತ್ತಿರುವುದು.

## ಮೇಲ್ಸೇತುವೆಗಳು ರಾತ್ರಿ ಬಂದ್

ಡಿ.31ರ ರಾತ್ರಿ ಎಂಟು ಗಂಟೆಯಿಂದ ಬೆಳಗಿನ ಜಾವ ಎರಡು ಗಂಟೆವರೆಗೆ ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ಮ್ಯೂಸಿಯಂ ರಸ್ತೆ, ರೆಸ್ಟ್ ಹೌಸ್ ಪಾರ್ಕ್ ರಸ್ತೆ, ರೆಸಿಡೆನ್ಸಿ ರಸ್ತೆಯಲ್ಲಿ ಪೊಲೀಸ್ ವಾಹನ, ತುರ್ತು ಸೇವಾ ವಾಹನ ಹೊರತುಪಡಿಸಿ ಇನ್ನುಳಿದ ಎಲ್ಲ ವಾಹನಗಳ ಸಂಚಾರ ನಿಷೇಧಿಸಲಾಗಿದೆ ಎಂದು ಜಂಟಿ ಪೊಲೀಸ್ ಆಯುಕ್ತ (ಸಂಚಾರ) ಡಾ.ಬಿ.ಆರ್. ಬಿ.ಆರ್. ರವಿಕಾಂತೇಗೌಡ ತಿಳಿಸಿದ್ದಾರೆ. ಅದೇ ರೀತಿ ನಗರದ ಗುರುವಾರ ರಾತ್ರಿ 10 ರಿಂದ ಶುಕ್ರವಾರ ಬೆಳಗ್ಗೆ 6 ಗಂಟೆವರೆಗೆ ನಗರದ 44 ಮೇಲ್ಸೆತುವೆಗಳಲ್ಲಿ ವಾಹನ ಸಂಚಾರವನ್ನು ನಿರ್ಬಂಧಿಸಲಾಗಿದೆ. ವರ್ಷಾಚರಣೆ ನೆಪದಲ್ಲಿ ಫ್ಲೈ ಓವರ್‌ಗಳ ಮೇಲೆ ವ್ಹೀಲಿಂಗ್, ಡ್ರ್ಯಾಗ್‌ರೇಸ್, ಅತಿವೇಗದ ಚಾಲನೆ ಮಾಡುವುದನ್ನು ತಡೆಯಲು ಮೇಲ್ಸೆತುವೆ ಮೇಲೆ ಸಂಚಾರ ಬಂದ್ ಮಾಡಲಾಗಿದೆ ಎಂದು ಹೇಳಿದ್ದಾರೆ.

## ಪಾರ್ಕಿಂಗ್ ನಿಷೇಧ



ಎಂ.ಜಿ.ರಸ್ತೆ, ಕಬ್ಬನ್ ರಸ್ತೆ, ರೆಸಿಡೆನ್ಸಿ ರಸ್ತೆ, ರಿಚ್‌ಮಂಡ್ ರಸ್ತೆ, ಇನ್‌ಫೆಂಟ್ರಿ ರಸ್ತೆ, ಬ್ರಿಗೇಡ್ ರಸ್ತೆ, ಅಶೋಕನಗರ ಹಳೆ ಪೊಲೀಸ್ ಠಾಣೆ ಜಂಕ್ಷನ್, ಚರ್ಚ್ ಸ್ಟ್ರೀಟ್, ರೆಸ್ಟ್ ಹೌಸ್ ರಸ್ತೆ, ಮ್ಯೂಸಿಯಂ ರಸ್ತೆ, ಮಾರ್ಕನ್ ರಸ್ತೆ, ಮೈನ್‌ಗಾರ್ಡ್ ಕ್ರಾಸ್ ರಸ್ತೆ, ಡಿಸ್ಪೆನ್ಸರಿ ರಸ್ತೆ, ಇಂದಿರಾನಗರ 100 ಅಡಿ ರಸ್ತೆಯಲ್ಲಿ ವಾಹನಗಳ ನಿಲುಗಡೆ ನಿಷೇಧಿಸಲಾಗಿದೆ. ಈ ನಿಯಮ ಉಲ್ಲಂಘಿಸಿದರೆ ಕೇಸ್ ದಾಖಲಿಸಲಾಗುತ್ತದೆ ಎಂದು ರವಿಕಾಂತೇಗೌಡ ಎಚ್ಚರಿಕೆ ನೀಡಿದ್ದಾರೆ.

## 191 ಕಡೆ ವಾಹನಗಳ ತಪಾಸಣೆಗೆ ವ್ಯವಸ್ಥೆ

ಹೊಸ ವರ್ಷದ ಸಡಗರದಲ್ಲಿ ಮನಬಂದಂತೆ ಬೈಕ್ ಚಾಲನೆ ಹಾಗೂ ಮದ್ಯ ಸೇವಿಸಿ ಚಾಲನೆ ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಇದಕ್ಕಾಗಿ ನಗರದ 191 ಕಡೆ ಪೊಲೀಸರು ವಾಹನ ತಪಾಸಣೆಗೆ ನಿರ್ಧರಿಸಿದ್ದಾರೆ. ಅಂದು ಸಂಚಾರ ವಿಭಾಗದ 2500 ಸಿಬ್ಬಂದಿಯನ್ನು ಕರ್ತವ್ಯಕ್ಕೆ ನಿಯೋಜಿಸಲಾಗಿದೆ ಎಂದು ಜಂಟಿ ಆಯುಕ್ತರು ಹೇಳಿದ್ದಾರೆ.

## ಕೂಪನ್ ಇದ್ದರಷ್ಟೇ ಅವಕಾಶ

ಪಬ್, ಹೋಟೆಲ್, ರೆಸಾರ್ಟ್‌ಗಳಲ್ಲಿ ಮುಂಗಡವಾಗಿ ಕಾಯ್ದಿರಿಸಿದವರಿಗೆ ಮಾತ್ರ, ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳಲು ಅನುಮತಿ ಇರುತ್ತದೆ. ಗ್ರಾಹಕರಿಗೆ ಕಾರ್ಯಕ್ರಮದ ಆಯೋಜಕರು ಕೂಪನ್ ವಿತರಿಸಬೇಕು. ಇಲ್ಲಿ ಶೇ.50ರಷ್ಟು ಮಾತ್ರ ಗ್ರಾಹಕರಿಗೆ ಅವಕಾಶವಿದೆ. ಹಾಗಾಗಿ ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ ಹಾಗೂ ಚರ್ಚ್ ಸ್ಟ್ರೀಟ್‌ಗಳಲ್ಲಿ ಕೂಪನ್ ಇದ್ದರೆ ಮಾತ್ರ ಪ್ರವೇಶವಿರುತ್ತದೆ. ಕಾರ್ಯಕ್ರಮಕ್ಕೆ ಆಗಮಿಸುವವರು ಸಂಭ್ರಮಾಚರಣೆ ನಡೆಯುವ ಸ್ಥಳದ ವ್ಯಾಪ್ತಿ ಮೀರಿ ರಸ್ತೆಗೆ ಬರುವಂತಿಲ್ಲ ಎಂದು ಪೊಲೀಸರು ಹೇಳಿದ್ದಾರೆ.





**ಹೊಸ ವರ್ಷಾಚರಣೆ ವೇಳೆ ಪೊಲೀಸ್ ಇಲಾಖೆಯ ಮಾರ್ಗಸೂಚಿ ಹಾಗೂ ಕೋವಿಡ್-19ರ ನಿಯಮಾವಳಿಗಳನ್ನು ಸಾರ್ವಜನಿಕರು ಕಟ್ಟುನಿಟ್ಟಾಗಿ ಪಾಲಿಸಬೇಕು. ಈ ಕಾನೂನು ಉಲ್ಲಂಘಿಸಿದರೆ ಐಪಿಸಿ 188 ಹಾಗೂ ಎನ್‌ಡಿಎಂ ಕಾಯ್ದೆಯಡಿ ಕ್ರಮ ಜರುಗಿಸಲಾಗುತ್ತದೆ.**

• **ಕಮಲ್ ಪಂತ್** ನಗರ ಪೊಲೀಸ್ ಆಯುಕ್ತ

**ಹೊಸ ವರ್ಷವನ್ನು ಸ್ವಾಗತಿಸುವ ಸಂಭ್ರಮದಲ್ಲಿ ಮದ್ಯ ಸೇವಿಸಿ ವಾಹನ ಚಾಲನೆ ಮಾಡಿದರೆ ಪ್ರಕರಣ ದಾಖಲಿಸಲಾಗುತ್ತದೆ. ಅವರ ಚಾಲನಾ ಪರವಾನಿಗೆಗಳನ್ನು ಸಹ ಜಪ್ತಿ ಮಾಡಲಾಗುತ್ತದೆ. ಗುರುವಾರ ರಾತ್ರಿ ಎಲ್ಲ ರಸ್ತೆಗಳಲ್ಲಿ ಸಂಚಾರ ಪೊಲೀಸರು ನಿಗಾ ವಹಿಸಲಿದ್ದಾರೆ.**

• **ಡಾ.ಬಿ.ಆರ್.ರವಿಕಾಂತೇಗೌಡ**
ಜಂಟಿ ಪೊಲೀಸ್ ಆಯುಕ್ತ (ಸಂಚಾರ)

ಕನ್ನಡಪ್ರಭ

# ನಾಪತ್ತೆಯಾಗಿದ್ದ 202 ಮಂದಿಯೂ ಪತ್ತೆ

## ಬ್ರಿಟನ್‌ನಿಂದ ನಗರಕ್ಕೆ ಬಂದು ನಾಪತ್ತೆ ಆಗಿದ್ದ ಎಲ್ಲರ ಪತ್ತೆ | ಎಲ್ಲರಿಗೂ ಕೋವಿಡ್ ಟೆಸ್ಟ್: ಬಿಬಿಎಂಪಿ ಅಧಿಕಾರಿ ವಿಜೇಂದ್ರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬ್ರಿಟನ್‌ನಿಂದ ಬೆಂಗಳೂರು ನಗರಕ್ಕೆ ಆಗಮಿಸಿ ನಾಪತ್ತೆಯಾಗಿದ್ದ 202 ಮಂದಿಯನ್ನೂ ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಸಹಯೋಗದಲ್ಲಿ ಪತ್ತೆ ಮಾಡಲಾಗಿದೆ. ಈ ಎಲ್ಲರಿಗೂ ಕೋವಿಡ್ ಪರೀಕ್ಷೆ ಮಾಡಲಾಗಿದೆ ಎಂದು ಬಿಬಿಎಂಪಿ ಸಾರ್ವಜನಿಕ ಆರೋಗ್ಯ ವಿಭಾಗದ ಮುಖ್ಯಸ್ಥ ವಿಜೇಂದ್ರ ತಿಳಿಸಿದ್ದಾರೆ.

ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.1ರಿಂದ 21ರ ವರೆಗೆ ಬ್ರಿಟನ್‌ನಿಂದ ಬೆಂಗಳೂರಿಗೆ ಬಂದ 1,456 ಮಂದಿ ಪೈಕಿ 1,290 ಜನರಿಗೆ ಕೋವಿಡ್ ಪರೀಕ್ಷೆ ಮಾಡಲಾಗಿದ್ದು, 202 ಮಂದಿ ನಾಪತ್ತೆಯಾಗಿದ್ದರು. ಈಗ ಅವರನ್ನು ಪೊಲೀಸ್ ಇಲಾಖೆ ಹಾಗೂ ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಪತ್ತೆ ಮಾಡಲಾಗಿದ್ದು, ಎಲ್ಲರ ಗಂಟಲ ದ್ರವದ ಮಾದರಿ ಸಂಗ್ರಹಿಸಿ ಪರೀಕ್ಷೆಗೆ ಕಳುಹಿಸಲಾಗಿದೆ ಎಂದರು.

**ತನಿಖೆಯ ಬಳಿಕ ಕ್ರಮ:** ಪತ್ತೆಯಾಗಿರುವ 202 ಮಂದಿಯ ವಿಳಾಸ ಹಾಗೂ ಮೊಬೈಲ್ ಸಂಖ್ಯೆಯನ್ನು ಪೊಲೀಸ್ ಇಲಾಖೆಯು ಪಾಲಿಕೆಗೆ ನೀಡಲಾಗಿದೆ. ಸದ್ಯ ಇವರೆಲ್ಲರನ್ನು ಕೋವಿಡ್ ಪರೀಕ್ಷೆಗೆ ಒಳಪಡಿಸಬೇಕಾಗಿರುವುದು ನಮ್ಮ ಆದ್ಯ ಗುರಿ. ತದನಂತರ ಅವರು ಉದ್ದೇಶ ಪೂರ್ವಕವಾಗಿ ನಾಪತ್ತೆಯಾಗಿದ್ದರಾ ಎಂಬುದನ್ನು ತನಿಖೆ ನಡೆಸಿ ನಂತರ ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಬ್ರಿಟನ್‌ನಿಂದ ವಾಪಾಸ್ ಬಂದವರ ಪೈಕಿ 17 ಮಂದಿಗೆ ಸೋಂಕು ದೃಢಪಟ್ಟಿದೆ. ಈ ಸೋಂಕಿತರ ಸಂಪರ್ಕಿತರನ್ನು ಪತ್ತೆ ಮಾಡಿ ಕೊರೋನಾ ಸೋಂಕು ಪರೀಕ್ಷೆಗೆ ಒಳಪಡಿಸುವ ಕಾರ್ಯ ಮುಂದುವರೆದಿದೆ. ಜತೆಗೆ ಅವರನ್ನು ಕ್ವಾರಂಟೈನ್‌ಗೆ ಒಳಪಡಿಸಿ, ನಿಗಾ ವಹಿಸಲು ವಲಯ ಆರೋಗ್ಯ ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ ಎಂದು ವಿವರಿಸಿದರು.

**ಹೊಸ ಪ್ರಕರಣ ಇಲ್ಲ:** ಬ್ರಿಟನ್‌ನಿಂದ ಆಗಮಿಸಿದ 17 ಮಂದಿಯಲ್ಲಿ ಸೋಂಕು ದೃಢಪಟ್ಟಿತ್ತು. ಈ ಪೈಕಿ ವಸಂತಪುರದ ತಾಯಿ-ಮಗಳು ಹಾಗೂ ಜೆ.ಪಿ.ನಗರದ ವ್ಯಕ್ತಿಯಲ್ಲಿ ರೂಪಾಂತರಗೊಂಡ ಸೋಂಕು ಕಾಣಿಸಿಕೊಂಡಿತ್ತು. ಆದಾದ ನಂತರ ನಗರದಲ್ಲಿ ಬೇರೆ ಯಾವುದೇ ಹೊಸದಾಗಿ ರೂಪಾಂತರಗೊಂಡ ಸೋಂಕು ಪ್ರಕರಣ ಪತ್ತೆಯಾಗಿಲ್ಲ ಎಂದು ತಿಳಿಸಿದರು.



ಸಿರಿ ಎಂಬೆಸಿ ಅಪಾರ್ಟ್‌ಮೆಂಟ್ ಅನ್ನು ಸೀಲ್ ಮಾಡಿರುವ ಬಿಬಿಎಂಪಿ ಸಿಬ್ಬಂದಿ ಸ್ಥಳದಲ್ಲೇ ಬೀಡು ಬಿಟ್ಟಿದ್ದಾರೆ.

## ಬ್ರಿಟನ್: ಸೋಂಕಿತರ ಸಂಖ್ಯೆ 18ಕ್ಕೇರಿಕೆ

### ನಗರದಲ್ಲಿ ನಿನ್ನೆ ಮತ್ತೊಬ್ಬರಲ್ಲಿ ಸೋಂಕು ಪತ್ತೆ | 1090 ಮಂದಿ ವರದಿ ನೆಗೆಟಿವ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರೂಪಾಂತರಿ ಕೊರೋನಾ ವೈರಸ್ ಪತ್ತೆಯಾಗಿರುವ ಬ್ರಿಟನ್‌ನಿಂದ ಬೆಂಗಳೂರು ನಗರಕ್ಕೆ ಹಿಂದಿರುಗಿರುವವರ ಪೈಕಿ ಬುಧವಾರ ಮತ್ತೊಬ್ಬ ವ್ಯಕ್ತಿಯಲ್ಲಿ ಕೊರೋನಾ ಸೋಂಕು ದೃಢಪಟ್ಟಿದ್ದು, ಇದರೊಂದಿಗೆ ಒಟ್ಟು ಸೋಂಕಿತರ ಸಂಖ್ಯೆ 18ಕ್ಕೆ ಏರಿಕೆಯಾಗಿದೆ.




ಡಿ.1ರಿಂದ 21ವರೆಗೆ ಬ್ರಿಟನ್‌ನಿಂದ ಒಟ್ಟು 1,433 ಮಂದಿ ಬೆಂಗಳೂರು ನಗರಕ್ಕೆ ವಾಪಸ್ಸಾಗಿದ್ದಾರೆ. 1382 ಮಂದಿ ಪತ್ತೆ ಮಾಡಲಾಗಿದೆ. ಈ ಪೈಕಿ ಬಿಬಿಎಂಪಿ, 1,293 ಮಂದಿಯನ್ನು ಕೋವಿಡ್ ಪರೀಕ್ಷೆಗೆ ಒಳಪಡಿಸಿದೆ. ಇನ್ನು 89 ಮಂದಿಯ ಸೋಂಕು ಪರೀಕ್ಷೆ ಬಾಕಿ ಇದೆ.

ಈವರೆಗೆ 1,108 ಮಂದಿ ಕೋವಿಡ್ ಪರೀಕ್ಷಾ ಫಲಿತಾಂಶ ಲಭ್ಯವಾಗಿದ್ದು, 1,090 ಮಂದಿ ವರದಿ ನೆಗೆಟಿವ್ ಬಂದಿದೆ. 18 ಮಂದಿಗೆ ಸೋಂಕು ಪತ್ತೆಯಾಗಿದೆ. ಇನ್ನೂ 185 ಮಂದಿ ಫಲಿತಾಂಶ ಬರಬೇಕಿದೆ ಎಂದು ಬಿಬಿಎಂಪಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಇದುವರೆಗೆ ಪತ್ತೆಯಾಗಿರುವ 18 ಕೋವಿಡ್ ಸೋಂಕು ಪ್ರಕರಣಗಳಲ್ಲಿ ಮಹದೇವಪುರ ಹಾಗೂ ಬೊಮ್ಮನಹಳ್ಳಿ ವಲಯದಲ್ಲಿ ತಲಾ 5, ಪಶ್ಚಿಮ ಹಾಗೂ ಪೂರ್ವ ತಲಾ 3, ದಾಸರಹಳ್ಳಿ ಹಾಗೂ ದಕ್ಷಿಣ ವಲಯದಲ್ಲಿ ತಲಾ 1 ಪ್ರಕರಣ ಪತ್ತೆಯಾದಂತಾಗಿದೆ.

# ಅಪಾರ್ಟ್‌ಮೆಂಟ್ ನಿವಾಸಿಗಳೆಲ್ಲರೂ ನೆಗೆಟಿವ್

## ಬ್ರಿಟನ್ ವೈರಸ್ ಪತ್ತೆಯಾದ ವಸಂತಪುರ ಅಪಾರ್ಟ್‌ಮೆಂಟ್ ನಿವಾಸಿಗಳು ಕೊಂಚ ನಿಟ್ಟುಸಿರು | ಹೈಸ್ಪೀಡ್ ಸೋಂಕಿನ ಭೀತಿ ಸ್ವಲ್ಪಮಟ್ಟಿಗೆ ದೂರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜಧಾನಿ ಬೆಂಗಳೂರಲ್ಲಿ ರೂಪಾಂತರಿ ಕೊರೋನಾ ವೈರಸ್ ದೃಢಪಟ್ಟ ಬೊಮ್ಮನಹಳ್ಳಿಯ ವಸಂತಪುರ ಹಾಗೂ ಜೆ.ಪಿ.ನಗರದ ಮೂರನೇ ಹಂತದಲ್ಲಿ ಸೋಂಕಿತರ ಸಂಪರ್ಕದಲ್ಲಿದ್ದವರನ್ನು ಮಂಗಳವಾರವೇ ಪತ್ತೆ ಮಾಡುವ ಜೊತೆಗೆ ಅವರೆಲ್ಲರ ಆರೋಗ್ಯ ಪರೀಕ್ಷೆ ನಡೆಸಿ, ಗಂಟಲು ದ್ರವವನ್ನು ಕೋವಿಡ್ ಪರೀಕ್ಷೆಗೆ ಕಳುಹಿಸಲಾಗಿತ್ತು. ಬುಧವಾರ ಸಿರಿ ಎಂಬೆಸಿ ಅಪಾರ್ಟ್‌ಮೆಂಟ್ ನಿವಾಸಿಗಳ ಕೋವಿಡ್ ಪರೀಕ್ಷಾ ವರದಿ ನೆಗೆಟಿವ್ ಬಂದಿದ್ದು, ಹೈ-ಸ್ಪೀಡ್ ಸೋಂಕಿನ ಆತಂಕ ಸ್ವಲ್ಪ ಮಟ್ಟಿಗೆ ದೂರವಾಗಿದೆ.

ಈವರೆಗೆ ವಸಂತಪುರ ತಾಯಿ-ಮಗಳೊಂದಿಗೆ ಪ್ರಾಥಮಿಕ ಸಂಪರ್ಕ ಹೊಂದಿದ್ದ 11 ಮಂದಿ ಹಾಗೂ ಪರೋಕ್ಷವಾಗಿ ಸಂಪರ್ಕ ಹೊಂದಿದ್ದ 64 ಮಂದಿಯನ್ನು ಗುರುತಿಸಲಾಗಿದೆ. ಇನ್ನು ಜೆ.ಪಿ.ನಗರದ ಸೋಂಕಿತ ವ್ಯಕ್ತಿಯೊಂದಿಗೆ ಇಬ್ಬರು ಪ್ರಾಥಮಿಕ ಸಂಪರ್ಕ, ಪರೋಕ್ಷವಾಗಿ ಇಬ್ಬರು ಸಂಪರ್ಕದಲ್ಲಿದ್ದರು ಎಂದು ಬಿಬಿಎಂಪಿ ಆರೋಗ್ಯಾಧಿಕಾರಿಗಳು ಗುರುತಿಸಿದ್ದಾರೆ.

ಸೋಂಕಿತ ತಾಯಿ-ಮಗಳು ವಾಸವಿದ್ದ ವಸಂತಪುರದ ಸಿರಿ ಅಪಾರ್ಟ್‌ಮೆಂಟ್ ಹಾಗೂ ಮತ್ತೊಬ್ಬ ಸೋಂಕಿತ ವ್ಯಕ್ತಿ ವಾಸವಿದ್ದ ಜೆ.ಪಿ.ನಗರದ ನಿವಾಸದ ಸುತ್ತಮುತ್ತ ಹಾಗೂ ರಸ್ತೆಗಳಲ್ಲಿ ಸ್ಯಾನಿಟೈಸ್ ಕಾರ್ಯ ಬುಧವಾರವೂ ಮುಂದುವರೆದಿತ್ತು.

### ಸ್ವಯಂ ಸೇವಕರ ನಿಯೋಜನೆ

ವಸಂತಪುರ ಅಪಾರ್ಟ್‌ಮೆಂಟ್‌ನಲ್ಲಿ ಕ್ವಾರಂಟೈನ್ ಮಾಡಲಾದ 17 ಕುಟುಂಬದ ಸದಸ್ಯರಿಗೆ ಅಗತ್ಯ ವಸ್ತುಗಳನ್ನು ಪೂರೈಕೆ ಮಾಡುವುದಕ್ಕೆ ಬಿಬಿಎಂಪಿ ಸ್ವಯಂ ಸೇವಕರನ್ನು ನಿಯೋಜಿಸಿದೆ. ನಿವಾಸಿಗಳು ಆನ್‌ಲೈನ್‌ನಲ್ಲಿ ಸಾಮಗ್ರಿಗಳನ್ನು ಖರೀದಿಸಿದ್ದರು. ಸಾಮಗ್ರಿಗಳು ಅಪಾರ್ಟ್‌ಮೆಂಟ್ ಗೇಟ್‌ನಿಂದ ಖರೀದಿ ಮಾಡಿದವರಿಗೆ ಸ್ವಯಂ ಸೇವಕರು ತಲುಪಿಸುವ ಕೆಲಸ ಮಾಡಿದರು.

### ವೈಕುಂಠ ಏಕಾದಶಿಗೆ ದೇಗುಲ ಭೇಟಿ, ಆತಂಕ

ವಸಂತಪುರದ ಸಿರಿ ಎಂಬೆಸಿ ಅಪಾರ್ಟ್‌ಮೆಂಟ್‌ನಲ್ಲಿ ಕ್ವಾರಂಟೈನ್‌ಗೆ ಒಳಗಾದ ಅನೇಕರು ಕಳೆದ ಗುರುವಾರ ವೈಕುಂಠ ಏಕಾದಶಿ ಹಿನ್ನೆಲೆಯಲ್ಲಿ ದೇವರಕೆರೆ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನಕ್ಕೆ ಭೇಟಿ ಕೊಟ್ಟಿದ್ದರು. ಹೀಗಾಗಿ, ದೇವಸ್ಥಾನ ಸೇರಿದಂತೆ ವಸಂತಪುರದಲ್ಲಿ ಆತಂಕದಲ್ಲಿ ಕಾಲ ಕಳೆಯುವಂತಾಗಿದೆ.

### ಜೆ.ಪಿ. ನಗರದಲ್ಲಿ ಸುರಕ್ಷತಾ ಕ್ರಮ

ಮಂಗಳವಾರ ಜೆ.ಪಿ.ನಗರದ ವ್ಯಕ್ತಿಗೆ ರೂಪಾಂತರ ಸೋಂಕು ದೃಢಪಟ್ಟರೂ, ಪಾಲಿಕೆಯ ಆರೋಗ್ಯಾಧಿಕಾರಿಗಳು ಮುಂಜಾಗ್ರತಾ ಕ್ರಮ ಕೈಗೊಂಡಿರಲಿಲ್ಲ. ಪ್ರಕರಣವನ್ನು ಮುಚ್ಚಿ ಹಾಕುವ ಪ್ರಯತ್ನ ಮಾಡಿದ್ದರು. ಈ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾದ ನಂತರ ಬುಧವಾರ ಸೋಂಕು ದೃಢಪಟ್ಟ ವ್ಯಕ್ತಿಯ ಮನೆಯವರನ್ನು ಹೋಂ ಕ್ವಾರಂಟೈನ್ ಮಾಡಿದ್ದಾರೆ.

**ಸಿಸಿಟಿವಿ ಕಣ್ಗಾವಲು:** ಸಿರಿ ಎಂಬೆಸಿ ಅಪಾರ್ಟ್‌ಮೆಂಟ್‌ನಲ್ಲಿ ಕ್ವಾರೆಂಟೈನ್‌ನಲ್ಲಿ ಇರುವವರ ಮೇಲೆ ನಿಗಾ ವಹಿಸಲು 8 ಕಡೆ ಸಿಸಿಟಿವಿ ಅವಳಡಿಸಲಾಗಿದೆ. ಈ ಮೂಲಕ ನಿವಾಸಿಗಳ ಚಲನ-ವಲನಗಳ ಮೇಲೆ ನಿಗಾ ವಹಿಸಲಾಗುತ್ತಿದೆ. ಯಾರೂ ಅಪಾರ್ಟ್‌ಮೆಂಟ್‌ನಿಂದ ಹೊರಗೆ, ಒಳಗೆ ಹೋಗುವಂತಿಲ್ಲ. ಆರೋಗ್ಯ ಸಿಬ್ಬಂದಿ ತಪಾಸಣೆ ವೇಳೆ ಮಾತ್ರ ಭೇಟಿ ನೀಡಲಿದ್ದಾರೆ. ಆಹಾರ ಪೂರೈಕೆ, ಅಗತ್ಯ ಸಾಮಗ್ರಿಗಳ ಮೇಲ್ವಿಚಾರಣೆ ಬಿಬಿಎಂಪಿ ನೋಡಿಕೊಳ್ಳಲಿದೆ. ಅಪಾರ್ಟ್‌ಮೆಂಟ್ ಭದ್ರತೆಗೆ ಪೊಲೀಸ್ ನಿಯೋಜನೆ ಮಾಡಲಾಗಿದೆ.

**ಸ್ಥಳೀಯರ ಆಕ್ರೋಶ:** ವಸಂತಪುರದ ಸಿರಿ ಎಂಬೆಸಿ ಅಪಾರ್ಟ್‌ಮೆಂಟ್ ಸುತ್ತಮುತ್ತ ಇತರೆ ಅಪಾರ್ಟ್‌ಮೆಂಟ್ ಹಾಗೂ ಮನೆಗಳಿವೆ. ಇದೀಗ ಇಡೀ ಅಪಾರ್ಟ್‌ಮೆಂಟ್ ಅನ್ನು ಸಾಂಸ್ಥಿಕ ಕ್ವಾರಂಟೈನ್ ಕೇಂದ್ರವಾಗಿ ಪರಿವರ್ತನೆ ಮಾಡಿರುವುದಕ್ಕೆ ಸ್ಥಳೀಯರು ಆತಂಕ ವ್ಯಕ್ತಪಡಿಸುವುದರ ಜೊತೆಗೆ ಆಕ್ರೋಶ ವ್ಯಕ್ತಪಡಿಸಿದ ಘಟನೆ ಬುಧವಾರ ನಡೆದಿದೆ. ಬಿಬಿಎಂಪಿ ಹಾಗೂ ಪೊಲೀಸರು ಸ್ಥಳೀಯರನ್ನು ಸಮಾಧಾನಪಡಿಸಿ ತಿಳಿ ಹೇಳಿ ಕಳುಹಿಸಲಾಗಿದೆ. ಉಳಿದಂತೆ ಅಪಾರ್ಟ್‌ಮೆಂಟ್ ಹೊರತುಪಡಿಸಿ ವಸಂತಪುರದಲ್ಲಿ ಸಾರ್ವಜನಿಕರು ಎಂದಿನಂತೆ ಕಚೇರಿಗಳಿಗೆ ತೆರಳುತ್ತಿದ್ದ ದೃಶ್ಯಗಳು ಬುಧವಾರ ಕಂಡು ಬಂದವು.

**ಕ್ಯಾಬ್ ಚಾಲಕ ಕ್ವಾರೆಂಟೈನ್:** ತಾಯಿ-ಮಗಳನ್ನು ಡಿ.19 ರಂದು ವಿಮಾನ ನಿಲ್ದಾಣದಿಂದ ವಸಂತಪುರದ ಸಿರಿ ಎಂಬೆಸಿ ಅಪಾರ್ಟ್‌ಮೆಂಟ್‌ಗೆ ಕರೆತಂದ ಏರ್‌ಪೋರ್ಟ್‌ನಿಂದ ಕ್ಯಾಬ್ ಚಾಲಕನನ್ನು ಪ್ರತ್ಯೇಕವಾಗಿ ಕ್ವಾರಂಟೈನ್ ಮಾಡಲಾಗಿದೆ. ಇನ್ನು ಮನೆಯಿಂದ ಆರ್‌ಬಿಐ ಲೇಔಟ್‌ನ ನೈಬರ್‌ಹುಡ್ ಆಸ್ಪತ್ರೆಗೆ ಕರೆದುಕೊಂಡು ಹೋದ ಆಟೋ ಚಾಲಕ ಇನ್ನು ಪತ್ತೆಯಾಗಿಲ್ಲ.

ಕನ್ನಡಪ್ರಭ

# ರೂಪಾಂತರ ಸೋಂಕು ಹರಡದಂತೆ ಮುನ್ನೆಚ್ಚರಿಕೆ ವಹಿಸಿ: ಗೌರವ್ ಗುಪ್ತಾ



**ಬೆಂಗಳೂರು:** ಬೆಂಗಳೂರಿನ ಮೂವರಿಗೆ ರೂಪಾಂತರಗೊಂಡ ಕೊರೋನಾ ಸೋಂಕು ದೃಢಪಟ್ಟ ಹಿನ್ನೆಲೆಯಲ್ಲಿ ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಅವರು ಬಿಬಿಎಂಪಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತರು, ವಲಯದ ಜಂಟಿ ಆಯುಕ್ತರು ಹಾಗೂ ಆರೋಗ್ಯ ವಿಭಾಗದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಬುಧವಾರ ನಡೆದ ಸಭೆಯಲ್ಲಿ ಆರೋಗ್ಯಾಧಿಕಾರಿಗಳು ರೂಪಾಂತರ ವೈರಸ್ ದೃಢಪಟ್ಟವರ ವಿವರ, ಸಂಪರ್ಕಿತರನ್ನು ಕ್ವಾರಂಟೈನ್ ಮಾಡಿರುವ ಬಗ್ಗೆ ವಿವರಿಸಿ, ಬ್ರಿಟನ್‌ನಿಂದ ಬಂದವರ ಪೈಕಿ 18 ಜನರಿಗೆ ಕೊರೋನಾ ಸೋಂಕು ದೃಢಪಟ್ಟಿದೆ. ಬ್ರಿಟನ್‌ನ ರೂಪಾಂತರ ವೈರಸ್ ಬಗ್ಗೆ ಖಚಿತಪಡಿಸಿಕೊಳ್ಳಲು ಜಿನೋಮಿಕ್ ಸ್ವೀಕ್ವೆನ್ಸಿಂಗ್ ಪರೀಕ್ಷೆ ಕಳುಹಿಸಲಾಗಿದೆ. ಸೋಂಕಿತರ ಸಂಪರ್ಕದಲ್ಲಿದ್ದ 54 ಪ್ರಾಥಮಿಕ ಹಾಗೂ 92 ದ್ವಿತೀಯ ಸಂಪರ್ಕಿತರು ಪತ್ತೆಯಾಗಿದ್ದಾರೆ. ಪ್ರಥಮ ಹಾಗೂ ಪರೋಕ್ಷ ಸಂಪರ್ಕದಲ್ಲಿರುವವರನ್ನು ಸಾಂಸ್ಥಿಕ ಕ್ವಾರಂಟೈನ್ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಸಭೆಯಲ್ಲಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ರಾಜೇಂದ್ರ ಚೋಳನ್, ವಲಯ ಜಂಟಿ ಆಯಕ್ತರಾದ ಕೆ.ಆರ್. ಪಲ್ಲವಿ, ಅಶೋಕ್, ವೀರಭದ್ರ ಸ್ವಾಮಿ, ರಾಮಕೃಷ್ಣ, ಶಿವಸ್ವಾಮಿ, ವೆಂಕಟಾಚಲಪತಿ, ನರಸಿಂಹಮೂರ್ತಿ, ಪಾಲಿಕೆ ಮುಖ್ಯ ಆರೋಗ್ಯಾಧಿಕಾರಿ ಡಾ। ವಿಜೇಂದ್ರ ಇದ್ದರು.

# 89 ಸೋಂಕಿತರಿಗೆ ಐಸಿಯುವಿನಲ್ಲಿ ಚಿಕಿತ್ಸೆ

**ಬೆಂಗಳೂರು:** ನಗರದಲ್ಲಿ ಬುಧವಾರ 554 ಹೊಸ ಕೊರೋನಾ ಸೋಂಕು ಪ್ರಕರಣ ಪತ್ತೆಯಾಗಿದ್ದು, 765 ಮಂದಿ ಗುಣಮುಖರಾಗಿದ್ದಾರೆ. 5 ಮಂದಿ ಸಾವನ್ನಪ್ಪಿದ್ದಾರೆ. ಈ ಮೂಲಕ ಒಟ್ಟು ಸೋಂಕಿತರ ಸಂಖ್ಯೆ 3,87,832ಕ್ಕೆ ಏರಿಕೆಯಾಗಿದ್ದು, ಗುಣಮುಖರ ಸಂಖ್ಯೆ 3,75,986 ತಲುಪಿದೆ. ನಗರದಲ್ಲಿ ಇನ್ನೂ 7,534 ಸಕ್ರಿಯ ಪ್ರಕರಣಗಳಿದ್ದು, ಈ ಪೈಕಿ ಗಂಭೀರ ಸ್ಥಿತಿಯಲ್ಲಿರುವ 89 ಮಂದಿಗೆ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. 5 ಮಂದಿ ಮೃತಪಟ್ಟಿದ್ದು, ಒಟ್ಟು ಮೃತರ ಸಂಖ್ಯೆ 4,311 ಏರಿಕೆಯಾಗಿದೆ.

ಕನ್ನಡಪ್ರಭ

# ಸಂಪರ್ಕಿತರಿಗೆ ಸಾಂಸ್ಥಿಕ ಕ್ವಾರಂಟೈನ್ ಕಡ್ಡಾಯ

## ಬೆಂಗಳೂರು ಸೋಂಕಿತರ ಎಲ್ಲ 39 ಸಂಪರ್ಕಿತರಿಗೆ ನೆಗೆಟಿವ್ | ಶಿವಮೊಗ್ಗ ಸೋಂಕಿತರ ಮೂವರು ಸಂಪರ್ಕಿತರಿಗೆ ಪಾಸಿಟಿವ್

## ಇವರಲ್ಲಿ ಬ್ರಿಟನ್ ವೈರಸ್ ಇದೆಯಾ ಎಂದು ತಿಳಿಯಲು ಪರಿಶೀಲನೆ | ಕೇಂದ್ರ ಮಾರ್ಗಸೂಚಿ ಪಾಲನೆ: ಸಚಿವ ಸುಧಾಕರ್

• **ಕನ್ನಡ ಪ್ರಭ ವಾರ್ತೆ** ಬೆಂಗಳೂರು



ಬೆಂಗಳೂರಿನಲ್ಲಿ ಬ್ರಿಟನ್ ನಿಂದ ಬಂದವರಲ್ಲಿ ಮೂವರಲ್ಲಿ ರೂಪಾಂತರಿ ಸೋಂಕು ಕಾಣಿಸಿಕೊಂಡಿದ್ದರೂ ಕೂಡ ಅವರಿಂದ ಬೇರೆಯವರಿಗೆ ಸೋಂಕು ಹಬ್ಬಿಲ್ಲ. ಈ ಮೂವರ ಸಂಪರ್ಕಕ್ಕೆ ಬಂದಿದ್ದ 39 ಮಂದಿಯನ್ನು ಕೊರೋನಾ ಪರೀಕ್ಷೆಗೆ ಒಳಪಡಿಸಲಾಗಿತ್ತು. ನೆಗೆಟಿವ್ ಫಲಿತಾಂಶ ಬಂದಿರುವುದು ಉತ್ತಮ ಬೆಳವಣಿಗೆ ಎಂದು ಆರೋಗ್ಯ ಮತ್ತು ವೈದಕೀಯ ಶಿಕ್ಷಣ ಸಚಿವ ಡಾ.ಕೆ. ಸುಧಾಕರ್ ಹೇಳಿದ್ದಾರೆ.

ಇನ್ನು ಶಿವಮೊಗ್ಗದಲ್ಲಿ ನಾಲ್ಕು ಪ್ರಕರಣ ವರದಿಯಾಗಿದೆ. ಇವರ ಸಂಪರ್ಕಕ್ಕೆ ಬಂದಿದ್ದ ಏಳು ಮಂದಿಯನ್ನು ಕೊರೋನಾ ಪರೀಕ್ಷೆಗೆ ಒಳಪಡಿಸಲಾಗಿದ್ದು ಮೂವರಲ್ಲಿ ಪಾಸಿಟಿವ್ ಕಂಡುಬಂದಿದೆ. ಇವರ ಮಾದರಿಯನ್ನು ಜೆನೆಟಿಕ್ ಸೀಕ್ವೆನ್ಸಿಂಗ್ ಗೆ ಒಳಪಡಿಸುತ್ತೇವೆ ಎಂದು ಸುಧಾಕರ್ ತಿಳಿಸಿದರು.

ಪ್ರಾಥಮಿಕ ಮತ್ತು ದ್ವಿತೀಯ ಹಂತದ ಎಲ್ಲ ಸಂಪರ್ಕಿತರನ್ನು ಸಾಂಸ್ಥಿಕ ಕ್ವಾರಂಟೈನ್‌ಗೆ ಒಳಪಡಿಸಲಾಗುತ್ತದೆ. ಸಾಂಸ್ಥಿಕ ಕ್ವಾರಂಟೈನ್‌ಗೆ ಎಲ್ಲರೂ ಕಡ್ಡಾಯವಾಗಿ ಒಪ್ಪಲೇ ಬೇಕು. ಇದರಲ್ಲಿ ವಿನಾಯಿತಿ ಇಲ್ಲ. ಸೋಂಕಿನ ತೀವ್ರತೆ ಕಡಿಮೆ ಇದ್ದರೂ ಕೂಡ ವೇಗದ ಹರಡುವಿಕೆಯ ಸಾಮರ್ಥ್ಯ ಇರುವ ಕಾರಣ ನಾವು ಕಠಿಣ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ಪತ್ತೆಯಾಗದಿರುವವರನ್ನು ಪತ್ತೆ ಹಚ್ಚುವಲ್ಲಿ ಗೃಹ ಇಲಾಖೆಯವರು ಕಾರ್ಯಪ್ರವೃತ್ತರಾಗಿದ್ದಾರೆ. ಈಗ ಎರಡು ತಿಂಗಳಿನಿಂದ ಬ್ರಿಟನ್‌ನಿಂದ ಬಂದವರನ್ನು ಪರೀಕ್ಷೆ ಮಾಡುವಂತೆ ಕೇಂದ್ರ ಸರ್ಕಾರ ಮಾರ್ಗಸೂಚಿ ನೀಡಿದೆ. ಈ ಮಾರ್ಗಸೂಚಿಯನ್ನು ಪಾಲನೆ ಮಾಡುತ್ತೇವೆ ಎಂದು ಆರೋಗ್ಯ ಸಚಿವ ಡಾ. ಸುಧಾಕರ್ ಅವರು ತಿಳಿಸಿದರು.

## ರಾತ್ರಿ ಕರ್ಫ್ಯೂ ಬಗ್ಗೆ ಸಚಿವರ ದ್ವಂದ್ವ ಹೇಳಿಕೆ!

**ಕರ್ಫ್ಯೂ ಅಗತ್ಯ, ಸಿಎಂ ಜತೆ ಚರ್ಚಿಸುವೆ: ಅಶೋಕ್**

**ರಾತ್ರಿ ಕರ್ಫ್ಯೂ ಮುಗಿದ ಅಧ್ಯಾಯ: ಸುಧಾಕರ್**

**ಬೆಂಗಳೂರು:** ರಾಜ್ಯದಲ್ಲಿ ಬ್ರಿಟನ್ ರೂಪಾಂತರಿ ಕೊರೋನಾ ನಿಯಂತ್ರಣಕ್ಕಾಗಿ ರಾತ್ರಿ ಕರ್ಫ್ಯೂ ವಿಧಿಸುವ ಬಗ್ಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಸಂಪುಟದ ಇಬ್ಬರು ಸಚಿವರು ಬುಧವಾರ ನೀಡಿದ ವೈರುಧ್ಯದ ಹೇಳಿಕೆಗಳಿಂದಾಗಿ ಸಾರ್ವಜನಿಕರಲ್ಲಿ ಗೊಂದಲ ಹುಟ್ಟಾಗುವಂತಾಗಿದೆ.

'ವೇಗವಾಗಿ ಹರಡುವ ರೂಪಾಂತರಿ ಕೊರೋನಾ ನಿಯಂತ್ರಣಕ್ಕೆ ರಾತ್ರಿ ಕರ್ಫ್ಯೂ ಅಗತ್ಯ. ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುತ್ತೇನೆ' ಎಂದು ಕಂದಾಯ ಸಚಿವ ಆರ್. ಅಶೋಕ್ ಹೇಳಿದರೆ, 'ರಾತ್ರಿ ಕರ್ಫ್ಯೂ ಮುಗಿದ ಅಧ್ಯಾಯ' ಎಂದು ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ಹೇಳಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆರ್. ಅಶೋಕ್, 'ಬ್ರಿಟನ್ ಸೋಂಕು ವೇಗವಾಗಿ ಹರಡುವ ಗುಣ ಹೊಂದಿದೆ. ಹೀಗಾಗಿ 'ರಿಯಲ್' ನೈಟ್ ಕರ್ಫ್ಯೂ ಜಾರಿ ಬಗ್ಗೆ ಸಿಎಂ ಅವರೊಂದಿಗೆ ಚರ್ಚಿಸುತ್ತೇನೆ' ಎಂದರು. ಈ ಬಗ್ಗೆ ಪ್ರತಿಕ್ರಿಯಿಸಿದ ಸಚಿವ ಸುಧಾಕರ್ ಅವರು, ರಾತ್ರಿ ಕರ್ಫ್ಯೂ ಜಾರಿಗೊಳಿಸುವ ಯೋಚನೆ ಸರ್ಕಾರಕ್ಕೆ ಇಲ್ಲ. ರಾತ್ರಿ ಕರ್ಫ್ಯೂ ಮುಗಿದ ಅಧ್ಯಾಯ. ಸಿಎಂ ನಿಲುವು ಸಹ ಇದೇ ಆಗಿದೆ' ಎಂದರು.

ಕನ್ನಡಪ್ರಭ

# ಪಾದರಾಯನಪುರ ರಸ್ತೆಗಳಿಗೆ ಹೆಸರು: ಅನಂತ ಹೆಗಡೆ ಆಕ್ಷೇಪ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಗರದ ಪಾದರಾಯನಪುರದ ರಸ್ತೆಗಳ ನಾಮಕರಣಕ್ಕೆ ಮುಸಲ್ಮಾರ ಹೆಸರುಗಳನ್ನು ಮಾತ್ರ ಶಿಫಾರಸು ಮಾಡಲಾಗಿದ್ದು, ಸಮಾಜ ಸೇವಕರ ಹೆಸರಿನಲ್ಲಿ ಕೋಮು ವೈಭವೀಕರಣ ಸರಿಯಲ್ಲ, ಕೂಡಲೇ ಈ ರಸ್ತೆ ನಾಮಕರಣ ತಡೆ ಹಿಡಿಯುವಂತೆ ಸಂಸದ ಹಾಗೂ ಕೇಂದ್ರ ಮಾಜಿ ಸಚಿವ ಅನಂತಕುಮಾರ ಹೆಗಡೆ, ಬಿಬಿಎಂಪಿ ಆಯುಕ್ತರಿಗೆ ಪತ್ರ ಬರೆದಿದ್ದಾರೆ.



ಪಾದರಾಯನಪುರ ವಾರ್ಡ್‌ನ 11 ಪ್ರಮುಖ ರಸ್ತೆ ಹಾಗೂ ವೃತ್ತಗಳಿಗೆ ಸಮಾಜ ಸೇವಕರ ಹೆಸರುಗಳ ನಾಮಕರಣಕ್ಕೆ ಸಂಬಂಧಿಸಿದಂತೆ ಬಿಬಿಎಂಪಿಯು ಡಿ.16ರಂದು ಸಾರ್ವಜನಿಕರಿಂದ ಆಕ್ಷೇಪಣೆ ಆಹ್ವಾನಿಸಿ ಪತ್ರಿಕಾ ಪ್ರಕಟಣೆ ಹೊರಡಿಸಿತ್ತು. ಈ ಕುರಿತು ಆಕ್ಷೇಪ ವ್ಯಕ್ತಪಡಿಸಿ ಬುಧವಾರ ಸಂಸದ ಅನಂತ ಕುಮಾರ ಹೆಗಡೆ ಅವರು ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್‌ಗೆ ಪತ್ರ ಬರೆದಿದ್ದಾರೆ. ರಸ್ತೆ ನಾಮಕರಣದ ಅನಿವಾರ್ಯತೆ ಇದ್ದರೆ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದ ವೀರ ಯೋಧರ, ರಾಷ್ಟ್ರ ಕಂಡ ಮಹಾನ್ ವ್ಯಕ್ತಿಗಳ, ದೇಶಕ್ಕಾಗಿ ಹೋರಾಡಿದ ವೀರ ಸೈನಿಕರ ಹೆಸರುಗಳನ್ನು ನಾಮಕರಣ ಮಾಡಿದರೆ ಪಾದರಾಯನಪುರದ ಗೌರವ ಉಳಿಯಲಿದೆ ಎಂದಿದ್ದಾರೆ.

VK ವಿಜಯ ಕರ್ನಾಟಕ

ನಗರದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ | ಸಂಚಾರ ಪೊಲೀಸರಿಂದ 191 ಪಾಯಿಂಟ್‌ಗಳಲ್ಲಿ ತಪಾಸಣೆ

# ಸೋಂಕಿನ ನಡುವೆ ವರ್ಷೋತ್ಸವಕ್ಕೆ ಸಜ್ಜು

ಸಾಂದರ್ಭಿಕ ಚಿತ್ರ



**ವಿಕ ಸುದ್ದಿಲೋಕ** ಬೆಂಗಳೂರು

ಕೋವಿಡ್-19 ಹಿನ್ನೆಲೆಯಲ್ಲಿ ಸುರಕ್ಷತಾ ಕ್ರಮಗಳು ಮತ್ತು ಅಹಿತಕರ ಘಟನೆಗಳ ನಿಯಂತ್ರಣ, ಮಹಿಳೆಯರ ಸುರಕ್ಷತೆಯ ಗುರಿಗಳೊಂದಿಗೆ ಹೊಸ ವರ್ಷಾಚರಣೆಗೆ ನಗರಪೊಲೀಸರುಸಿದ್ಧತೆಮಾಡಿಕೊಂಡಿದ್ದು, ಹೊಸ ವರ್ಷದ ರಾತ್ರಿ ನಗರದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗುತ್ತಿದೆ.

### ಕಳೆಗುಂದಿದ ಎಂಜಿ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್

ಪ್ರತಿ ವರ್ಷದಂತೆ ಈ ವರ್ಷ ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆಯಲ್ಲಿ ಹೊಸ ವರ್ಷಾಚರಣೆಗೆ ಯುವಜನರಿಗೆ ಅವಕಾಶವಿಲ್ಲ. ಅಲಂಕಾರಿಕ ವಿದ್ಯುತ್ ದೀಪಗಳಿಂದ ಕಂಗೊಳಿಸುತ್ತಿದ್ದ ಬ್ರಿಗೇಡ್ ರಸ್ತೆ, ಚರ್ಚ್‌ಸ್ಟ್ರೀಟ್ ಹಾಗೂ ಸುತ್ತಲಿನ ರಸ್ತೆಗಳು ಮತ್ತು ಮಳಿಗೆಗಳಲ್ಲಿ ಈ ಬಾರಿ ಅಂತಹ ಕಳೆ ಕಾಣಿಸುತ್ತಿಲ್ಲ.

ಎಂ.ಜಿ., ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ಮ್ಯೂಸಿಯಂ ರಸ್ತೆ, ರೆಸ್ಟ್ ಹೌಸ್ ಪಾರ್ಕ್ ರಸ್ತೆ, ರೆಸಿಡೆನ್ಸಿ ರಸ್ತೆಯಲ್ಲಿ ರಾತ್ರಿ 8ರಿಂದ ಜ.1ರ ಬೆಳಗ್ಗೆ 2ರವರೆಗೆ ವಾಹನ ಸಂಚಾರ ನಿಷೇಧಿಸಲಾಗಿದೆ. ಮುಂಗಡ ಬುಕ್ಕಿಂಗ್ ಮಾಡಿಕೊಂಡು ಪಬ್, ಬಾರ್, ರೆಸ್ಟೋರೆಂಟ್‌ಗಳು ಕಾರ್ಯನಿರ್ವಹಿಸಲು ಅವಕಾಶ ನೀಡಿರುವ ಕಾರಣ ಪೊಲೀಸರು ವಿಶೇಷ ಬಂದೋಬಸ್ತ್ ಕೈಗೊಂಡಿದ್ದಾರೆ. ಬುಕ್ಕಿಂಗ್ ಕೂಪನ್ ತೋರಿಸುವವರಿಗೆ ಮಾತ್ರ ಪ್ರವೇಶಿಸಲು ಅವಕಾಶ ಇರುತ್ತದೆ. ನಡೆದುಕೊಂಡು ಕೂಡ ಹೋಗಬಹುದು.



**ಮನೆಗಳು, ಪ್ರೈವೆಟ್ ಕ್ಲಬ್, ರೆಸಿಡೆನ್ಶಿಯಲ್ ಕಾಂಪ್ಲೆಕ್ಸ್‌ಗಳಲ್ಲಿ ಸದಸ್ಯರು ಮಾತ್ರ ಹೊಸ ವರ್ಷ ಆಚರಿಸಿಕೊಳ್ಳಬಹುದು. ಕೋವಿಡ್ ನಿಯಮ ಉಲ್ಲಂಘಿಸಿ ಗುಂಪು ಸೇರಿದರೆ ಐಪಿಸಿ ಕಲಂ 188, ಹಾಗೂ ಎನ್‌ಡಿಎಂಎ ಕಾಯಿದೆಯಡಿ ಪ್ರಕರಣ ದಾಖಲಿಸಲಾಗುವುದು.**

**- ಕಮಲ್ ಪಂತ್** ಪೊಲೀಸ್ ಕಮೀಷನರ್



ಪಾರ್ಟಿ ಸಂಭ್ರಮ ನೆಪದಲ್ಲಿ ಗುಂಪು ಸೇರುವುದು, ವಾಹನಗಳ ಅಡ್ಡಾದಿಡ್ಡಿ ಚಾಲನೆ, ಸಾರ್ವಜನಿಕ ಸ್ಥಳಗಳಲ್ಲಿ ಪಾರ್ಟಿ ಮಾಡುವುದಕ್ಕೆ ನಿಷೇಧವಿದೆ. ಯುವಕರು ಗುಂಪು ಸೇರಿ ಮದ್ಯಪಾನ ಮಾಡುವುದು, ಕೂಗಾಡುವುದು ಮಾಡಿದರೆ ಕೂಡಲೇ ಪೊಲೀಸರು ಸ್ಥಳಕ್ಕಾಗಮಿಸಿ ವಶಕ್ಕೆ ಪಡೆದು ಕೇಸ್ ದಾಖಲಿಸಿ ಕ್ರಮ ಕೈಗೊಳ್ಳಲಿದ್ದಾರೆ.

**ನಗರದೆಲ್ಲೆಡೆ ಪೊಲೀಸರ ಗಸ್ತು, ತಪಾಸಣೆ**

ನಗರದ ಎಲ್ಲ ಠಾಣೆಗಳ ಪೊಲೀಸರು ಹೊಸ ವರ್ಷದ ರಾತ್ರಿ ಪ್ರಮುಖ ಸ್ಥಳಗಳು, ನಿರ್ಜನ ಪ್ರದೇಶಗಳಲ್ಲಿ ಗಸ್ತು ತಿರುಗಲಿದ್ದಾರೆ. ಕಿಡಿಗೇಡಿಗಳು, ರೌಡಿಗಳ ಮೇಲೆ ವಿಶೇಷ ಕಣ್ಗಾವಲು ಇಟ್ಟಿದ್ದಾರೆ. ಅಲ್ಲದೆ, ಪ್ರಮುಖ ರಸ್ತೆಗಳು, ಅಡ್ಡ ರಸ್ತೆಗಳಲ್ಲಿ ಬ್ಯಾರಿಕೇಡ್ ಹಾಕಿಕೊಂಡು ತಪಾಸಣೆ ನಡೆಸಲಿದ್ದಾರೆ.

### ಮದ್ಯ ಸೇವಿಸಿ ಗಾಡಿ ಓಡಿಸಿದರೆ ಕೇಸ್

ಡ್ರ್ಯಾಗ್ ರೇಸ್, ವ್ಹೀಲಿಂಗ್, ನಿರ್ಲಕ್ಷ್ಯತನದ ಚಾಲನೆ, ಡ್ರಂಕ್ ಆ್ಯಂಡ್ ಡ್ರೈವ್ ನಿಯಂತ್ರಣಕ್ಕೆ ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸರ ಜತೆ ಸೇರಿ 191 ಪಾಯಿಂಟ್‌ಗಳಲ್ಲಿ ತಪಾಸಣೆ ಮಾಡಲಾಗುತ್ತದೆ ಎಂದು ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತ ರವಿಕಾಂತೇಗೌಡ ತಿಳಿಸಿದರು.

ಹೊಸ ವರ್ಷಾಚರಣೆ ನೆಪದಲ್ಲಿ ಯಾವುದೇ ರೀತಿಯ ಸಂಚಾರ ನಿಯಮ ಉಲ್ಲಂಘನೆಗೆ ಅವಕಾಶ ಇಲ್ಲ. ಮದ್ಯಪಾನ ಮಾಡುವವರು ವಾಹನ ಚಾಲನೆ ಮಾಡಬಾರದು. ಚಾಲಕರೊಂದಿಗೆ ತೆರಳಬೇಕು ಅಥವಾ ಟ್ಯಾಕ್ಸಿ, ಆಟೋಗಳಲ್ಲಿ ತಮ್ಮ ತಮ್ಮ ಸ್ಥಳಗಳಿಗೆ ತೆರಳಬೇಕು. ಮದ್ಯಪಾನ ಮಾಡಿ ಪಾರ್ಟಿ ಮಾಡುವುದರಿಂದ ನಿಮ್ಮ ಜೀವ ಅಪಾಯಕ್ಕೆ ಸಿಲುಕುವುದರ ಜತೆಗೆ ರಸ್ತೆ ಬಳಕೆದಾರರ ಜೀವಗಳಿಗೂ ಹಾನಿಯಾಗುತ್ತದೆ. ಹೀಗಾಗಿ, ಡ್ರಂಕ್ ಆ್ಯಂಡ್ ಡ್ರೈವ್ ಅನುಮಾನ ಬಂದರೆ ಅವರನ್ನು ವೈದ್ಯಕೀಯ ಪರೀಕ್ಷೆಗೆ ಕರೆದೊಯ್ಯಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

### ವಾಹನ ನಿಲುಗಡೆ ನಿಷೇಧ

ಡಿ.31ರ ಸಂಜೆ 4 ಗಂಟೆಯಿಂದ ಜ.1ರ ರಾತ್ರಿ 2 ಗಂಟೆವರೆಗೆ ನಗರದ ಎಂ.ಜಿ. ರಸ್ತೆ, ಕಬ್ಬನ್ ರಸ್ತೆ, ರೆಸಿಡೆನ್ಸಿ ರಸ್ತೆ, ರಿಚ್‌ಮಂಡ್ ರಸ್ತೆ, ಇನ್‌ಫೆಂಟ್ರಿ ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ಮ್ಯೂಸಿಯಂ ರಸ್ತೆ, ರೆಸ್ಟ್‌ಹೌಸ್ ರಸ್ತೆ, ಸೇಂಟ್ ಮಾರ್ಕ್ಸ್ ರಸ್ತೆ, ಮಗರತ್ ರಸ್ತೆ, ಕಮಿಷನರೇಟ್ ರಸ್ತೆ, ಮಾರ್ಕನ್ ರಸ್ತೆ, ಮೇನ್ ಗಾರ್ಡ್ ಕ್ರಾಸ್ ರಸ್ತೆ, ಡಿಸ್ಪೆನ್ಸರಿ ರಸ್ತೆ, ಇಂದಿರಾನಗರ 100 ಅಡಿ ರಸ್ತೆಯಲ್ಲಿ ವಾಹನಗಳ ಪಾರ್ಕಿಂಗ್ ನಿಷೇಧಿಸಲಾಗಿದೆ.

**ಇಂದು ಮಧ್ಯಾಹ್ನ 12 ಗಂಟೆಯಿಂದ ನಾಳೆ ಬೆಳಗ್ಗೆ 6 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಗೊಳಿಸಿ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಆದೇಶ ಹೊರಡಿಸಿದ್ದಾರೆ.**



### ನಾಗರಿಕರಿಗೆ ಸೂಚನೆ

- ನೂರಾರು ಜನ ಸೇರುವ ಡಿ.ಜೆ, ಡಾನ್ಸ್, ಮದ್ಯದ ಪಾರ್ಟಿ ಸೇರಿದಂತೆ ಎಲ್ಲ ರೀತಿಯ ವಿಶೇಷ ಪಾರ್ಟಿಗಳ ಆಯೋಜನೆಗೆ ಅವಕಾಶ ಇಲ್ಲ
- ಮನೆಗಳಲ್ಲೇ ಸ್ನೇಹಿತರು, ಸಂಬಂಧಿಕರ ಜತೆ ಹೊಸ ವರ್ಷಾಚರಣೆ ಆಚರಿಸಿ.
- ಸಾರ್ವಜನಿಕ ಉದ್ಯಾನ, ರಸ್ತೆ, ಮೈದಾನ, ಕಟ್ಟಡ, ರಸ್ತೆಗಳಲ್ಲಿ ಐದಕ್ಕಿಂತ ಹೆಚ್ಚು ಜನ ಸೇರುವಂತಿಲ್ಲ.
- ಸಾರ್ವಜನಿಕ ಸ್ಥಳಗಳಲ್ಲಿ ಪಾರ್ಟಿ ನಿಷೇಧ.

### ಪಾರ್ಕಿಂಗ್ ಮಾಡುವವರಿಗೆ ಸಲಹೆ

ಎಂ.ಜಿ. ರಸ್ತೆ ಸುತ್ತಲಿನ ರಸ್ತೆಗಳಲ್ಲಿ ಪಬ್, ಬಾರ್ ಮತ್ತು ರೆಸ್ಟೋರೆಂಟ್‌ಗಳಿಗೆ ಮುಂಗಡ ಬುಕ್ಕಿಂಗ್ ಮಾಡುವ ಗ್ರಾಹಕರು ಶಿವಾಜಿನಗರ ಬಸ್ ನಿಲ್ದಾಣ ಸೇರಿದಂತೆ ಬೇರೆ ಬೇರೆ ಕಡೆ ಇರುವ ಪಾರ್ಕಿಂಗ್ ಸ್ಥಳಗಳಲ್ಲಿ ವಾಹನಗಳನ್ನು ಪಾರ್ಕಿಂಗ್ ಮಾಡಬಹುದು.

### ಫ್ಲೈಓವರ್ ಸಂಚಾರ ನಿಷೇಧ

44 ಫ್ಲೈಓವರ್‌ಗಳ ಮೇಲೆ ಡಿ.31ರ ರಾತ್ರಿ 10ರಿಂದ ಬೆಳಗ್ಗೆ 6 ಗಂಟೆವರೆಗೆ ವಾಹನ ಸಂಚಾರ ನಿರ್ಬಂಧಿಸಲಾಗಿದೆ. ಈ ವೇಳೆ ಫ್ಲೈಓವರ್ ಕೆಳಗಿನ, ಪಕ್ಕದ ಸರ್ವೀಸ್ ರಸ್ತೆಗಳಲ್ಲಿ ವಾಹನಗಳು ಸಂಚರಿಸಬೇಕು.

VK
ವಿಜಯ ಕರ್ನಾಟಕ

# 11 ರಸ್ತೆಗಳಿಗೆ ಒಂದೇ ಸಮುದಾಯದವರ ಹೆಸರು ಇರಿಸಿರುವುದಕ್ಕೆ ತೀವ್ರ ವಿರೋಧ

**ಬೆಂಗಳೂರು:** ಬಿಬಿಎಂಪಿಯು ಪಾದರಾಯನಪುರ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಅಡ್ಡ ರಸ್ತೆಗಳು, ಮುಖ್ಯ ರಸ್ತೆಗಳಿಗೆ ಒಂದೇ ಸಮುದಾಯದ ಸಮಾಜ ಸೇವಕರ ಹೆಸರನ್ನು ನಾಮಕರಣ ಮಾಡಲು ತೀರ್ಮಾನಿಸಿದೆ. ಇದಕ್ಕೆ ಕೆಲ ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾಗಿದೆ.

ಪಾದರಾಯನಪುರ ವಾರ್ಡ್‌ನ 11 ರಸ್ತೆಗಳಿಗೆ ಒಂದೇ ಸಮುದಾಯದ ಸಮಾಜ ಸೇವಕರ ಹೆಸರನ್ನು ನಾಮಕರಣ ಮಾಡಲು ಸೆ.8ರಂದು ನಡೆದ ಪಾಲಿಕೆ ಕೌನ್ಸಿಲ್ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗಿದೆ. ಬಿಜೆಪಿ ಆಡಳಿತಾವಧಿಯಲ್ಲಿ ಸದಸ್ಯರ ಅವಧಿ ಸೆ.10ಕ್ಕೆ ಅಂತ್ಯವಾಯಿತು. ಅಧಿಕಾರಾವಧಿ ಅಂತ್ಯಕ್ಕೆ ಎರಡು ದಿನ ಬಾಕಿ ಇರುವಾಗ ನಡೆದ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ. ನಾಮಕರಣಕ್ಕೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದರೆ 30 ದಿನಗಳೊಳಗೆ ಸಲ್ಲಿಸಬಹುದಾಗಿದೆ.

ಪಾದರಾಯನಪುರದ ಎಚ್.ಎಂ.ರಸ್ತೆಗೆ ಪೆಹಲ್ವಾನ್ ಫಾರೂಕ್ ಪಾಶ ಸಾಬ್ ಸರ್ಕಲ್, 10ನೇ ಅಡ್ಡರಸ್ತೆಗೆ ಪೆಹಲ್ವಾನ್ ಫಾರೂಕ್ ಪಾಶ ಸಾಬ್ ರಸ್ತೆ, 7ನೇ ಅಡ್ಡರಸ್ತೆಗೆ ಟೋಪಿ ರಫೀಕ್ ಸಾಬ್ ರಸ್ತೆ, 7ನೇ ಮುಖ್ಯರಸ್ತೆಗೆ ರೋಷನ್ ಫಯಾಜ್ ಸಂಗಮ ಸರ್ಕಲ್, 9ನೇ ಅಡ್ಡರಸ್ತೆಗೆ ಆಲೀಲ್ ಪಟೇಲ್ ರಸ್ತೆ, ವಿನಾಯಕನಗರದ 7ನೇ ಅಡ್ಡರಸ್ತೆಗೆ ಎಲ್ದಿರ್ ಬಾಬುಸಾಬ್ ರಸ್ತೆ, ಪಾದರಾಯನಪುರದ 8ನೇ ಮುಖ್ಯರಸ್ತೆಗೆ ಹಾಜಿ ಹಬೀಬ್ ಬೇಗ್ ರಸ್ತೆ, 11ನೇ 'ಸಿ' ಅಡ್ಡರಸ್ತೆಗೆ ಹಾಜಿ ವಝೀರ್ ಸಾಬ್ ರಸ್ತೆ, ರೆಹ್ಮಾನಿಯಾ ಮಸೀದಿ ರಸ್ತೆಯ 9ನೇ ಅಡ್ಡರಸ್ತೆಗೆ ಹಾಜಿ ಶಾಮಿರ್ ಸಾಬ್ ರಸ್ತೆ, 13ನೇ 'ಸಿ' ಅಡ್ಡರಸ್ತೆಗೆ ಹಾಜಿ ದಸ್ತಗೀರ್ ರಸ್ತೆ, 10ನೇ ಮುಖ್ಯರಸ್ತೆಗೆ ಹಾಜಿ ನೂರ್ ಸಾಬ್ ರಸ್ತೆ ಎಂದು ನಾಮಕರಣ ಮಾಡಲು ತೀರ್ಮಾನಿಸಲಾಗಿದೆ.

## ಮುಸಲ್ಮಾನರ ಹೆಸರು ನಾಮಕರಣ ನಿರ್ಧಾರ ಕೈಬಿಡಲು ಒತ್ತಾಯ

ಬಿಬಿಎಂಪಿಯ ಪಾದರಾಯನಪುರ(ವಾರ್ಡ್ ಸಂಖ್ಯೆ 135) ವ್ಯಾಪ್ತಿಯಲ್ಲಿ ಬರುವ ಅಡ್ಡ ರಸ್ತೆ ಹಾಗೂ ಮುಖ್ಯರಸ್ತೆಗಳಿಗೆ ಮುಸಲ್ಮಾನರ ಹೆಸರನ್ನು ನಾಮಕರಣ ಮಾಡದಂತೆ ಸಂಸದ ಅನಂತಕುಮಾರ ಹೆಗಡೆ ಪಾಲಿಕೆ ಆಯುಕ್ತರನ್ನು ಆಗ್ರಹಿಸಿದ್ದಾರೆ.

''ಈ ವಾರ್ಡ್‌ನಲ್ಲಿ ಕೇವಲ ಮುಸಲ್ಮಾನರ ಹೆಸರನ್ನು ಶಿಫಾರಸು ಮಾಡಲಾಗಿದೆ. ಸಮಾಜ ಸೇವಕರ ಹೆಸರಿನಲ್ಲಿ ಕೋಮು ವೈಭವೀಕರಣ ಮಾಡುವುದು ಸರಿಯಲ್ಲ, ಬಿಬಿಎಂಪಿಯ ಈ ನಿರ್ಧಾರದಿಂದ ಸಮಾಜದ ಕೋಮು ಸಾಮರಸ್ಯಕ್ಕೆ ಧಕ್ಕೆಯಾಗಲಿದೆ. ಪಾಲಿಕೆಯಂತೆಯೇ ಬಹುಸಂಖ್ಯಾತ ಹಿಂದೂಗಳ ಬಾಹುಳ್ಯವಿರುವ ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳು ಈ ರೀತಿಯ ನಿರ್ಧಾರ ಕೈಗೊಂಡರೆ ಪರಿಸ್ಥಿತಿ ಊಹಿಸಲೂ ಸಾಧ್ಯವಿಲ್ಲ. ಒಂದು ಕೋಮಿನ ತುಷ್ಟೀಕರಣಕ್ಕಾಗಿ ಬಿಬಿಎಂಪಿ ಈ ರೀತಿಯ ತೀರ್ಮಾನ ಕೈಗೊಂಡಿರುವುದು ಬೇಜವಾಬ್ದಾರಿತನದ ಪರಮಾವಧಿ,'' ಎಂದು ಅವರು ಟೀಕಿಸಿದ್ದಾರೆ.

VK ವಿಜಯ ಕರ್ನಾಟಕ

# ಲಂಡನ್‌ನಿಂದ ಮರಳಿದ್ದವರಲ್ಲಿ 50 ಮಂದಿ ನಾಪತ್ತೆ

**ಬೆಂಗಳೂರು:** ಲಂಡನ್‌ನಿಂದ ನಗರಕ್ಕೆ ಬಂದಿದ್ದವರ ಪೈಕಿ ಈವರೆಗೆ 50 ಮಂದಿ ಪತ್ತೆಯಾಗಿಲ್ಲ. ಇವರು ನೀಡಿರುವ ವಿಳಾಸ, ಮೊಬೈಲ್ ಸಂಖ್ಯೆಯೂ ತಪ್ಪಾಗಿದ್ದು, ಹುಡುಕಾಟ ಮುಂದುವರಿಸಲಾಗಿದೆ. ''ಡಿ.1ರಿಂದ ಡಿ.21ರ ಅವಧಿಯಲ್ಲಿ ಇಂಗ್ಲೆಂಡ್‌ನಿಂದ ಬೆಂಗಳೂರಿಗೆ 1382 ಮಂದಿ ಆಗಮಿಸಿದ್ದಾರೆ. ಈ ಪೈಕಿ 1382 ಮಂದಿ ಪತ್ತೆಯಾಗಿದ್ದು, ಎಲ್ಲರನ್ನೂ ಪರೀಕ್ಷೆಗೊಳಪಡಿಸಲಾಗಿದೆ. ಉಳಿದ 50 ಮಂದಿ ಈವರೆಗೆ ಪತ್ತೆಯಾಗಿಲ್ಲ. ಪೊಲೀಸರು, ಪಾಲಿಕೆ ಸಿಬ್ಬಂದಿ ಹಾಗೂ ಪಾಸ್‌ಪೋರ್ಟ್ ಅಧಿಕಾರಿಗಳು ತಲೆಮರೆಸಿಕೊಂಡಿರುವವರ ಹುಡುಕಾಟ ನಡೆಸುತ್ತಿದ್ದಾರೆ,'' ಎಂದು ಬಿಬಿಎಂಪಿಯ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದರು.

**ಪ್ರಯಾಣಿಕರಿಂದ ತಪ್ಪು ಮಾಹಿತಿ ನೀಡಿಕೆ**

''ಇಲ್ಲಿಯವರೆಗೆ ಪತ್ತೆಯಾಗದ 50 ಮಂದಿ ಪ್ರಯಾಣಿಕರು ಪಾಸ್‌ಪೋರ್ಟ್ ಕಚೇರಿಗೆ ನೀಡಿರುವ ವಿಳಾಸವೂ ತಪ್ಪಾಗಿದೆ. ಆ ವಿಳಾಸದಲ್ಲಿ ಬೇರೆಯವರು ಇದ್ದಾರೆ. ಕೆಲವರು ಇಂಗ್ಲೆಂಡ್‌ನ ಮೊಬೈಲ್ ಸಂಖ್ಯೆ ನೀಡಿದ್ದಾರೆ. ಇನ್ನೂ ಕೆಲವರ ಮೊಬೈಲ್ ಸಂಖ್ಯೆ ತಪ್ಪಾಗಿದೆ. ಪತ್ತೆಯಾದ 1382 ಮಂದಿಯ ಪೈಕಿ 1293 ಪ್ರಯಾಣಿಕರನ್ನು ಆರ್‌ಟಿಪಿಸಿಆರ್ ಪರೀಕ್ಷೆಗೆ ಒಳಪಡಿಸಲಾಗಿದೆ. 1108 ಮಂದಿ ವರದಿ ಬಂದಿದ್ದು, 18 ಮಂದಿಗೆ ಸೋಂಕು ತಗಲಿರುವುದು ದೃಢಪಟ್ಟಿದೆ. ಇವರಲ್ಲಿ ಮೂವರಿಗೆ ಬ್ರಿಟನ್ ರೂಪಾಂತರ ಸೋಂಕು ತಗಲಿದೆ,'' ಎಂದು ಹೇಳಿದರು.

VK
ವಿಜಯ ಕರ್ನಾಟಕ

# ರೂಪಾಂತರ ಸೋಂಕು ತಡೆಯಲು ಸೂಚನೆ

**ವಿಕ ಸುದ್ದಿಲೋಕ** ಬೆಂಗಳೂರು

ನಗರದಲ್ಲಿ ಬ್ರಿಟನ್ ರೂಪಾಂತರ ಸೋಂಕು ಕಂಡು ಬಂದಿದ್ದು, ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಮೂಲಕ ಸೋಂಕು ಹರಡುವುದನ್ನು ತಡೆಯಬೇಕು ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ಎಲ್ಲ ವಲಯಗಳ ಜಂಟಿ ಆಯುಕ್ತರಿಗೆ ಸೂಚನೆ ನೀಡಿದರು.

ಪಾಲಿಕೆಯ ಕೇಂದ್ರ ಕಚೇರಿಯಲ್ಲಿ ಕೋವಿಡ್-19 ರೂಪಾಂತರ ಸೋಂಕು ನಿಯಂತ್ರಣ ಸಂಬಂಧ ಬುಧವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, "ಸರಕಾರದ ಎಸ್‌ಒಪಿ ಪ್ರಕಾರ ನಿಯಮಗಳನ್ನು ಪಾಲನೆ ಮಾಡಬೇಕು. ಇಂಗ್ಲೆಂಡ್‌ನಿಂದ ನಗರಕ್ಕೆ ಬಂದಿದ್ದವರ ಪೈಕಿ 18 ಮಂದಿಯಲ್ಲಿ ಸೋಂಕು ಪತ್ತೆಯಾಗಿದೆ. ಇದರಲ್ಲಿ ಮೂವರಿಗೆ ರೂಪಾಂತರ ಕೊರೊನಾ ತಗಲಿರುವುದು ದೃಢಪಟ್ಟಿದೆ" ಎಂದು ಹೇಳಿದರು.

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

# ಬ್ರಿಟನ್‌ನಿಂದ ಬಂದಿದ್ದವರ ಪತ್ತೆ

## 202 ಮಂದಿ ಸಂಪರ್ಕಕ್ಕೆ | ಮೊದಲು ಪರೀಕ್ಷೆ ನಂತರ ತನಿಖೆಗೆ ನಿರ್ಧಾರ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬ್ರಿಟನ್‌ನಿಂದ ಬೆಂಗಳೂರು ನಗರಕ್ಕೆ ಆಗಮಿಸಿ ನಾಪತ್ತೆಯಾಗಿದ್ದ 202 ಪ್ರಯಾಣಿಕರನ್ನು ಪೊಲೀಸ್ ಇಲಾಖೆ ನೆರವಿನೊಂದಿಗೆ ಪತ್ತೆ ಮಾಡುವಲ್ಲಿ ಬಿಬಿಎಂಪಿ ಯಶಸ್ವಿಯಾಗಿದ್ದು, ಮನೆಗಳಿಗೆ ತೆರಳಿ ಕೋವಿಡ್ ಪರೀಕ್ಷೆ ಮಾಡುವ ಕಾರ್ಯ ನಡೆಯುತ್ತಿದೆ ಎಂದು ಬಿಬಿಎಂಪಿ ಮುಖ್ಯ ಆರೋಗ್ಯಾಧಿಕಾರಿ ಡಾ. ವಿಜೇಂದ್ರ ತಿಳಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಬುಧವಾರ ಮಾತನಾಡಿದ ಅವರು, ಡಿ.1ರಿಂದ ಡಿ.21ರ ಅವಧಿಯಲ್ಲಿ ಬ್ರಿಟನ್‌ನಿಂದ ನಗರಕ್ಕೆ 1,456 ಮಂದಿ ವಿಮಾನದ ಮೂಲಕ ಬಂದಿದ್ದರು. ಈ ಪೈಕಿ ಬಿಬಿಎಂಪಿ, 1,290 ಮಂದಿಯನ್ನು ಕೋವಿಡ್ ಪರೀಕ್ಷೆಗೆ ಒಳಪಡಿಸಿದ್ದು, 17 ಜನರಿಗೆ ಸೋಂಕು ದೃಢಪಟ್ಟಿದೆ. ಅದರಲ್ಲಿ ಮೂವರಿಗೆ ರೂಪಾಂತರಿ ಕರೊನಾ ವೈರಸ್ ದೃಢಪಟ್ಟಿದೆ. ಉಳಿದಂತೆ 202 ಮಂದಿ ನಾಪತ್ತೆಯಾಗಿದ್ದರು. ಏರ್‌ಪೋರ್ಟ್‌ನಿಂದ ನಾಪತ್ತೆಯಾದ ಪ್ರಯಾಣಿಕರ ಪಾಸ್‌ಪೋರ್ಟ್ ಮಾಹಿತಿ ಪಡೆದು ಪತ್ತೆ ಮಾಡುವಂತೆ ಪೊಲೀಸ್ ಇಲಾಖೆಗೆ ಮನವಿ ಮಾಡಲಾಗಿತ್ತು. 48 ಗಂಟೆಯ ಒಳಗೆ ಎಲ್ಲ 202 ಜನರನ್ನು ಪತ್ತೆ ಮಾಡಲಾಗಿದ್ದು, ಅವರ ಗಂಟಲು ದ್ರವ ಪರೀಕ್ಷೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

**ಸಂಪರ್ಕಕ್ಕೆ ಸಿಗದಿರಲು ಕಾರಣದ ತನಿಖೆ:** ಬ್ರಿಟನ್‌ನಿಂದ ಬಂದು ಕೋವಿಡ್ ಪರೀಕ್ಷೆಗೊಳಪಡದೆ ತಪ್ಪು ವಿಳಾಸ ನೀಡಿ, ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡ ಬಗ್ಗೆ ತನಿಖೆ ಮಾಡಲಾಗುವುದು. ತದನಂತರ ಅವರು ಉದ್ದೇಶಪೂರ್ವಕವಾಗಿ ನಾಪತ್ತೆಯಾಗಿದ್ದು ಸಾಬೀತಾದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು ಎಂದು ವಿವರಿಸಿದರು.

**68 ಜನರ ಕ್ವಾರಂಟೈನ್:** ನಗರಕ್ಕೆ ಡಿ.19 ರಂದು ಬ್ರಿಟನ್‌ನಿಂದ ಬಂದು ಸೋಂಕಿಗೆ ತುತ್ತಾಗಿರುವ 17 ಜನರ ಅಕ್ಕ-ಪಕ್ಕದಲ್ಲಿ ಹಾಗೂ ಹಿಂದೆ-ಮುಂದೆ ಕುಳಿತುಕೊಂಡು ಪ್ರಯಾಣ ಮಾಡಿದ 68 ಜನರನ್ನು ಪತ್ತೆ ಮಾಡಿ ಕೋವಿಡ್ ಪರೀಕ್ಷೆಗೆ ಒಳಪಡಿಸಲಾಗುವುದು. ಜತೆಗೆ, ಹೋಂ ಕ್ವಾರಂಟೈನ್‌ಗೆ ಒಳಪಡಿಸಿ ಹೆಚ್ಚಿನ ನಿಗಾವಹಿಸಲಾಗುವುದು ಎಂದು ತಿಳಿಸಿದರು.



### ನಾಲ್ವರಿಗೆ ರೂಪಾಂತರಿ ಸೋಂಕು

**ಶಿವಮೊಗ್ಗ:** ರೂಪಾಂತರಿ ಕರೊನಾ ಶಿವಮೊಗ್ಗಕ್ಕೂ ಕಾಲಿಟ್ಟಿದ್ದು, ಜಿಲ್ಲೆಯ ನಾಲ್ವರಲ್ಲಿ ಬ್ರಿಟನ್ ಸೋಂಕು ದೃಢಪಟ್ಟಿದೆ. ಕರ್ನಾಟಕ ಸಂಘ ಸಮೀಪದ ಸಾರ್ವಕರ್ ನಗರದ ಒಂದೇ ಕುಟುಂಬದ ನಾಲ್ವರಲ್ಲಿ ಸೋಂಕು ಪತ್ತೆಯಾಗಿದ್ದು, ರೋಗ ಲಕ್ಷಣವಿಲ್ಲದ ನಾಲ್ವರನ್ನು ಮೆಗ್ಗಾನ್ ಆಸ್ಪತ್ರೆಯ ಕರೊನಾ ವಾರ್ಡ್‌ನಲ್ಲಿ ಇರಿಸಲಾಗಿದೆ. ಅವರ ಪ್ರಾಥಮಿಕ ಸಂಪರ್ಕಕ್ಕೆ ಬಂದವರಿಗೆ ಹೋಮ್ ಕ್ವಾರಂಟೈನ್‌ಗೆ ಸೂಚಿಸಿಸಲಾಗಿದೆ. ಇತ್ತೀಚೆಗೆ ಬ್ರಿಟನ್‌ನಿಂದ ಬಂದ ಐದು ಮಂದಿಯಲ್ಲಿ ಕರೊನಾ ಸೋಂಕು ದೃಢಪಟ್ಟಿತ್ತು. ಹಾಗಾಗಿ ಸೋಂಕಿನ ವರದಿಯನ್ನು ಪುಣೆ ಲ್ಯಾಬ್‌ಗೆ ರವಾನಿಸಲಾಗಿತ್ತು. ಅಲ್ಲಿ ನಾಲ್ವರಿಗೆ ಬ್ರಿಟನ್ ವೈರಸ್ ದೃಢಪಟ್ಟಿದ್ದರಿಂದ ಜಿಲ್ಲೆಯಲ್ಲೂ ಸೋಂಕಿನ ಬಗ್ಗೆ ಕಟ್ಟೆಚ್ಚರ ವಹಿಸಲಾಗಿದೆ.

### ನೈಟ್ ಕರ್ಫ್ಯೂ ಗೊಂದಲ

ನೈಟ್ ಕರ್ಫ್ಯೂ ವಿಚಾರದಲ್ಲಿ ಸರ್ಕಾರದಲ್ಲೇ ಗೊಂದಲ ಕಾಣಿಸಿದೆ. ನೈಟ್ ಕರ್ಫ್ಯೂ ಅಗತ್ಯವೆಂದು ಕಂದಾಯ ಸಚಿವ ಆರ್.ಅಶೋಕ್ ಹೇಳಿದರೆ, ಕರ್ಫ್ಯೂಜಾರಿ ವಿಚಾರ ಮುಗಿದ ಅಧ್ಯಾಯ ಎಂದು ಆರೋಗ್ಯ ಸಚಿವ ಡಾ.ಕೆ.ಸುಧಾಕರ್ ಹೇಳಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಆರ್.ಅಶೋಕ್, ಯಾವುದೇ ರೀತಿಯ ಕರ್ಫ್ಯೂ ಜಾರಿಗೆ ತಂದರೂ ಸರಿ. ಕಾಟಾಚಾರಕ್ಕೆ ಕರ್ಫ್ಯೂ ಜಾರಿ ಮಾಡದೇ ಸೂಕ್ತ ನಿರ್ಬಂಧ ಹೇರಬೇಕು. ಜನರ ಓಡಾಟ ನಿಯಂತ್ರಿಸಬೇಕು ಎಂದರು.



ಈ ವಿಚಾರವಾಗಿ ಮುಖ್ಯಮಂತ್ರಿ ಅವರೊಂದಿಗೆ ಚರ್ಚೆ ಮಾಡುತ್ತೇನೆ. ರೂಪಾಂತರ ವೈರಸ್ ವೇಗವಾಗಿ ಹರಡುತ್ತದೆ, ಹೀಗಾಗಿ ಈ ಸಂದರ್ಭದಲ್ಲಿ ಕರ್ಫ್ಯೂ ಜಾರಿ ಮಾಡುವುದು ಮುಖ್ಯವಾಗುತ್ತದೆ ಎಂದು ಹೇಳಿದರು.

ಗೃಹ ಸಚಿವ ಬಸವರಾಜ ಬೊಮ್ಮಾಯಿ ಪ್ರತಿಕ್ರಿಯೆ ನೀಡಿ, ರಾಜ್ಯದಲ್ಲಿ ರೂಪಾಂತರಿ ಕೊರೊನಾ ಪ್ರಕರಣಗಳು ದಾಖಲಾದ ಹಿನ್ನೆಲೆಯಲ್ಲಿ ಈ ವರ್ಷದ ಸಾರ್ವಜನಿಕ ಸಂಭ್ರಮಾಚರಣೆಗೆ ಬ್ರೇಕ್ ಹಾಕಲಾಗಿದೆ. ನೈಟ್ ಕರ್ಫ್ಯೂ ಬಗ್ಗೆ ಮುಖ್ಯಮಂತ್ರಿಯವರು ಅಂತಿಮ ತೀರ್ಮಾನ ತೆಗೆದುಕೊಳ್ಳಲಿದ್ದಾರೆ ಎಂದರು.

ಆರೋಗ್ಯ ಸಚಿವ ಡಾ.ಸುಧಾಕರ್ ಮಾತನಾಡಿ, ನೈಟ್ ಕರ್ಫ್ಯೂ ಮುಗಿದ ಅಧ್ಯಾಯ, ಈಗ ಇರೋದು ಹೊಸ ವರ್ಷಕ್ಕೆ ನಿಯಮಗಳನ್ನು ಬಿಗಿ ಮಾಡುವ ವಿಚಾರ ಎಂದು ಹೇಳಿದ್ದಾರೆ.

### ಸಾಂಸ್ಥಿಕ ಕ್ವಾರಂಟೈನ್‌ಗೆ ಪಾಲಿಕೆ ಖರ್ಚು

ಬ್ರಿಟನ್‌ನಿಂದ ಬಂದು ಸೋಂಕಿಗೆ ಒಳಗಾಗಿರುವವರ ಪ್ರಾಥಮಿಕ ಮತ್ತು ದ್ವಿತೀಯ ಸಂಪರ್ಕಕ್ಕೆ ಬಂದವರನ್ನು ಸಾಂಸ್ಥಿಕ ಕ್ವಾರಂಟೈನ್ ಮಾಡಲಾಗುವುದು. ಅಲ್ಲಿ ಈ ಮೊದಲಿನ ಮಾರ್ಗಸೂಚಿಯಂತೆ ಪಾಲಿಕೆಯಿಂದಲೇ ಊಟ, ವಸತಿ ಮತ್ತು ಆರೋಗ್ಯ ತಪಾಸಣೆ ವ್ಯವಸ್ಥೆ ಮಾಡಲಾಗುವುದು. ಇನ್ನು ವಸಂತಪುರದ ರೂಪಾಂತರ ಕರಿನಾ ಕಾಣಿಸಿಕೊಂಡವರ ಸಂಪರ್ಕಕ್ಕೆ ಬಂದ ಅಪಾರ್ಟ್‌ಮೆಂಟ್ ನಿವಾಸಿಗಳು ಸಾಂಸ್ಥಿಕ ಕ್ವಾರಂಟೈನ್‌ಗೆ ಹೋಗಲೊಪ್ಪದ ಕಾರಣ ವಿಶೇಷ ಪ್ರಕರಣವಾಗಿ ಪರಿಗಣಿಸಿ ಅಪಾರ್ಟ್‌ಮೆಂಟ್‌ನ್ನು ಸಾಂಸ್ಥಿಕ ಕ್ವಾರಂಟೈನ್ ಆಗಿ ಪರಿವರ್ತಿಸಿ ಸೀಲ್‌ಡೌನ್ ಮಾಡಲಾಗಿದೆ ಪಾಲಿಕೆ ಮುಖ್ಯ ಆರೋಗ್ಯಾಧಿಕಾರಿ ಡಾ. ವಿಜೇಂದ್ರ ಮಾಹಿತಿ ನೀಡಿದರು.




### ಏಳು ಮಂದಿ ಸೋಂಕಿಗೆ ಬಲಿ

**ಬೆಂಗಳೂರು:** ರಾಜ್ಯದಲ್ಲಿ ಹೊಸದಾಗಿ 973 ಕರೊನಾ ಸೋಂಕಿತ ಪ್ರಕರಣಗಳು ವರದಿಯಾಗಿದ್ದು, ಸೋಂಕಿತರ ಸಂಖ್ಯೆ 9.18 ಲಕ್ಷ ದಾಟಿದೆ. ಸೋಂಕಿತರಲ್ಲಿ 7 ಮಂದಿ ಸಾವನ್ನಪ್ಪಿದ್ದು, ಒಟ್ಟು ಮೃತರ ಸಂಖ್ಯೆ 12,070ಕ್ಕೆ ತಲುಪಿದೆ. 1,217 ಮಂದಿ ಗುಣಮುಖರಾಗಿದ್ದು, ಒಟ್ಟು 8.94 ಲಕ್ಷ ಮಂದಿ ಆಸ್ಪತ್ರೆಯಿಂದ ಬಿಡುಗಡೆ ಆಗಿದ್ದಾರೆ. ರಾಜ್ಯದಲ್ಲಿ 11,610 ಸಕ್ರಿಯ ಪ್ರಕರಣಗಳಿದ್ದು, ಈ ಪೈಕಿ 202 ಮಂದಿ ಗಂಭೀರ ಸಮಸ್ಯೆಯಿಂದ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಯುಕೆಯಿಂದ ರಾಜ್ಯಕ್ಕೆ ಬಂದಿದ್ದ ಪ್ರಯಾಣಿಕರಲ್ಲಿ 62 ಜನರನ್ನು ಕೋವಿಡ್ ಪರೀಕ್ಷೆ ಮಾಡಲಾಗಿದ್ದು, ಈ ಪೈಕಿ ಇಬ್ಬರಿಗೆ ಬುಧವಾರ ಸೋಂಕು ದೃಢಪಟ್ಟಿದೆ.

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ
ನಂ.1 ಕನ್ನಡ ದಿನಪತ್ರಿಕೆ

# 11 ರಸ್ತೆಗಳಿಗೆ ನಾಮಕರಣ

**ಬೆಂಗಳೂರು:** ಚಾಮರಾಜಪೇಟೆ ಕ್ಷೇತ್ರದ ಪಾದರಾಯನಪುರ ವಾರ್ಡ್‌ನ 11 ಪ್ರಮುಖ ರಸ್ತೆ ಹಾಗೂ ವೃತ್ತಗಳಿಗೆ ಸಮಾಜಸೇವಕರ ಹೆಸರು ಇಡುವುದಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಬಿಬಿಎಂಪಿ ಆಕ್ಷೇಪಣೆ ಆಹ್ವಾನಿಸಿದೆ.

ಎಚ್.ಎಂ. ರಸ್ತೆಗೆ ಪೆಹಲ್ವಾನ್ ಫಾರೂಕ್ ಪಾಷಾ ಸಾಬ್, 10ನೇ ಅಡ್ಡ ರಸ್ತೆಗೆ ಪೆಹಲ್ವಾನ್ ಫಾರೂಕ್ ಪಾಷಾಸಾಬ್, 7ನೇ ಅಡ್ಡರಸ್ತೆಗೆ ಟೋಪಿ ರಫೀಕ್‌ಸಾಬ್, 7ನೇ ಮುಖ್ಯರಸ್ತೆಗೆ ರೋಷನ್ ಫಯಾಜ್ ಸಂಗಮ ಸರ್ಕಲ್, 9ನೇ ಅಡ್ಡರಸ್ತೆಗೆ ಆಲೀಲ್ ಪಟೇಲ್, 7ನೇ ಅಡ್ಡರಸ್ತೆಗೆ (ವಿನಾಯಕನಗರ) ಎಲ್ಡಿರ್ ಬಾಬು ಸಾಬ್ ರಸ್ತೆ, 8ನೇ ಮುಖ್ಯರಸ್ತೆಗೆ ಹಾಜಿ ಹಬೀಬ್ ಬೇಗ್, 11ನೇ 'ಸಿ' ಅಡ್ಡರಸ್ತೆಗೆ ಹಾಜಿ ವರ್ಖೀರ್ ಸಾಬ್, 9ನೇ ಅಡ್ಡ ರಸ್ತೆಯ ರೆಹ್ಮಾನಿಯಾ ಮಸೀದಿ ರಸ್ತೆಗೆ ಹಾಜಿ ಶಾಮಿರ್ ಸಾಬ್, 13ನೇ 'ಸಿ' ಅಡ್ಡರಸ್ತೆಗೆ ಹಾಜಿ ದಸ್ತಗೀರ್ ಹಾಗೂ 10ನೇ ಮುಖ್ಯ ರಸ್ತೆಗೆ ಹಾಜಿ ನೂರ್ ಸಾಬ್ ರಸ್ತೆ ಎಂದು ನಾಮಕರಣಕ್ಕೆ ಪ್ರಸ್ತಾಪಿಸಲಾಗಿದೆ. ಆಕ್ಷೇಪಣೆ ಇದ್ದರೆ ಕಂದಾಯ ವಿಭಾಗದ ಜಂಟಿ ಆಯುಕ್ತರಿಗೆ ಪತ್ರಮುಖೇನ ತಿಳಿಸಬಹುದು.

» ಆಕ್ಷೇಪಣೆ ಆಹ್ವಾನ

**ಸಂಸದರ ಆಕ್ಷೇಪ:** ಪಾದರಾಯನಪುರ ವಾರ್ಡ್‌ನಲ್ಲಿ ಬಹುಸಂಖ್ಯಾತ ಹಿಂದುಗಳಿದ್ದರೂ ಎಲ್ಲ ರಸ್ತೆಗಳಿಗೂ ಮುಸಲ್ಮಾನರ ಹೆಸರು ಶಿಫಾರಸು ಮಾಡಲಾಗಿದೆ. ಇದು ಸರಿಯಲ್ಲ ಎಂದು ಉತ್ತರ ಕನ್ನಡ ಸಂಸದ ಅನಂತಕುಮಾರ್ ಹೆಗ್ಡೆ ಆಕ್ಷೇಪಣೆ ಸಲ್ಲಿಸಿದ್ದಾರೆ. ದೇಶದ ಯೋಧರು ಮತ್ತು ಮಹಾನ್ ವ್ಯಕ್ತಿಗಳ ಹೆಸರು ಇಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

Bengaluru Edition
Dec 31, 2020 Page No. 9
Powered by : eReleGo.com

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ
ನಂ.1
ಕನ್ನಡ ದಿನಪತ್ರಿಕೆ

# ಬಿಬಿಎಂಪಿ ಶಿಕ್ಷಣ ಸಂಸ್ಥೆಗಳಲ್ಲೂ ಭರದ ಸಿದ್ಧತೆ



**ಬೆಂಗಳೂರು:** ಶಾಲಾ- ಕಾಲೇಜು ಪುನರಾರಂಭ ಹಿನ್ನೆಲೆಯಲ್ಲಿ ಒಂದು ವಾರದಿಂದ ಸ್ವಚ್ಛತೆ, ಸ್ಯಾನಿಟೈಸಿಂಗ್ ಮತ್ತು ಶಿಕ್ಷಕರಿಗೆ ಕೋವಿಡ್ ಪರೀಕ್ಷೆ ಮಾಡಿಸಲಾಗುತ್ತಿದೆ ಎಂದು ಬಿಬಿಎಂಪಿ ಶಿಕ್ಷಣ ವಿಭಾಗದ ಸಹಾಯಕ ಆಯುಕ್ತ ನಾಗೇಂದ್ರನಾಯ್ಕ ತಿಳಿಸಿದ್ದಾರೆ.

**» ವಾರದಿಂದ ಸ್ವಚ್ಛತೆ, ಸ್ಯಾನಿಟೈಸಿಂಗ್ ಕಾರ್ಯ**

ಬಿಬಿಎಂಪಿಯ 33 ಪ್ರೌಢಶಾಲೆಗಳಲ್ಲಿ ಎಸ್ಸೆಸ್ಸೆಲ್ಸಿ, 15 ಕಾಲೇಜುಗಳಲ್ಲಿ ಪಿಯು ತರಗತಿಗಳನ್ನು ಆರಂಭಿಸಲಾಗುತ್ತಿದೆ. ಪ್ರತಿ ಕೊಠಡಿಗೆ 15 ರಿಂದ 20 ವಿದ್ಯಾರ್ಥಿಗಳನ್ನು ಕೂರಿಸಲು ಆಸನ ವ್ಯವಸ್ಥೆ ಮಾಡಲಾಗಿದೆ. ಜತೆಗೆ 16 ಪ್ರಾಥಮಿಕ ಶಾಲೆಗಳಲ್ಲಿ 6 ಮತ್ತು 7ನೇ ತರಗತಿ ಮಕ್ಕಳಿಗೆ ವಿದ್ಯಾಗಮ ತರಗತಿ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಎಲ್ಲ ಮಕ್ಕಳಿಗೆ ಕಡ್ಡಾಯ ಮಾಸ್ಕ್ ಧರಿಸುವಿಕೆ, ವ್ಯಕ್ತಿಗತ ಅಂತರ ಪಾಲನೆ ಮತ್ತು ಸ್ಯಾನಿಟೈಸರ್ ಬಳಸಿ ಕೈಗಳ ಸ್ವಚ್ಛತೆ ಬಗ್ಗೆ ಮಕ್ಕಳಿಗೆ ಜಾಗೃತಿ ಮೂಡಿಸಲು ದೈಹಿಕ ಶಿಕ್ಷಕರಿಗೆ ತರಬೇತಿ ನೀಡಲಾಗಿದೆ ಎಂದು **ವಿಜಯವಾಣಿಗೆ** ಮಾಹಿತಿ ನೀಡಿದರು. ಈಗಾಗಲೇ ಪಾಲಿಕೆ ವ್ಯಾಪ್ತಿಯ 64



**ನ್ಯಾಷನಲ್ ಹೈಸ್ಕೂಲ್‌ನಲ್ಲಿ ಸೋಂಕು ನಿವಾರಕ ದ್ರಾವಣ ಸಿಂಪಡಿಸಿದ ಕಾರ್ಮಿಕ.**

## ವಾಟ್ಸ್ಆ್ಯಪ್ ಮೂಲಕ ಜಾಗೃತಿ

**ತರಗತಿಗೆ ಹಾಜರಾಗುವ ಎಸ್ಸೆಸ್ಸೆಲ್ಸಿ ಮತ್ತು ಪಿಯು ವಿದ್ಯಾರ್ಥಿಗಳಿಗೆ ಶಾಲೆಯಲ್ಲಿ ಅನುಸರಿಸಬೇಕಾದ ಮುನ್ನೆಚ್ಚರಿಕೆಗಳ ಬಗ್ಗೆ ವಾಟ್ಸ್ಆ್ಯಪ್ ಗ್ರೂಪ್‌ಗಳಲ್ಲಿ ಅರಿವು ಮೂಡಿಸಲಾಗಿದೆ ಎಂದು ಪಾದರಾಯನಪುರ ಸಂಯುಕ್ತ ಬಾಲಕಿಯರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಶಿವಶಂಕರಪ್ಪ ವಿಜಯವಾಣಿಗೆ ತಿಳಿಸಿದರು.**

ಶಾಲಾ-ಕಾಲೇಜುಗಳ ಶಿಕ್ಷಕರು ಮತ್ತು ಉಪನ್ಯಾಸಕರನ್ನು ಕೋವಿಡ್ ಪರೀಕ್ಷೆಗೆ ಒಳಪಡಿಸಲಾಗಿದೆ. ಗುರುವಾರ ಮಧ್ಯಾಹ್ನದ ವೇಳೆ ಪರೀಕ್ಷಾ ವರದಿ ಬರಲಿದ್ದು, ನೆಗೆಟಿವ್ ವರದಿ ಬಂದವರನ್ನು ಮಾತ್ರ ಶಾಲೆಗಳಲ್ಲಿ ಪಾಠ ಬೋಧನೆಗೆ ಅವಕಾಶ ಮಾಡಿಕೊಡಲಾಗುವುದು. ವಿದ್ಯಾರ್ಥಿಗಳಿಗೂ ಕೋವಿಡ್ ನೆಗೆಟಿವ್ ಪ್ರಮಾಣ ಪತ್ರ ತರಲು ಸೂಚಿಸಲಾಗಿದೆ. ಜತೆಗೆ, ವಿದ್ಯಾಗಮ ತರಗತಿಗೆ ಬರುವ ಪ್ರಾಥಮಿಕ ಶಾಲಾಮಕ್ಕಳಿಗೆ ತಮ್ಮ ಪಾಲಕರಿಂದ ಕರೊನಾ ಸೋಂಕಿನ ಲಕ್ಷಣಗಳಿಲ್ಲ ಎಂಬ ಒಪ್ಪಿಗೆ ಪತ್ರ ತರುವಂತೆ ತಿಳಿಸಲಾಗುವುದು ಎಂದು ಹೇಳಿದರು.

Bengaluru Edition
Dec 31, 2020 Page No. 9
Powered by : eReleGo.com

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1

# ರೂಪಾಂತರಿ ಕರೊನಾ ವೈರಸ್ ಹರಡುವಿಕೆ ತಡೆಗೆ ಕ್ರಮ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬ್ರಿಟನ್‌ನಿಂದ ನಗರಕ್ಕೆ ಬಂದ ಪ್ರಯಾಣಿಕರಲ್ಲಿ 18 ಜನರಿಗೆ ಕರೊನಾ ಸೋಂಕು ಹಾಗೂ ಮೂವರಲ್ಲಿ ರೂಪಾಂತರ ಕರೊನಾ ದೃಢಪಟ್ಟಿದೆ. ರೂಪಾಂತರ ವೈರಸ್ ಹರಡುವುದನ್ನು ತಡೆಗಟ್ಟಲು ಸರ್ಕಾರದ ಮಾರ್ಗಸೂಚಿಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಪಾಲಿಕೆ ಆರೋಗ್ಯ ಸಿಬ್ಬಂದಿಗೆ ಆಡಳಿತಾಧಿಕಾರಿ ಗೌರವ್ ಗುಪ್ತ ಸೂಚಿಸಿದ್ದಾರೆ.

**» ಆರೋಗ್ಯ ಸಿಬ್ಬಂದಿಗೆ ಆಡಳಿತಾಧಿಕಾರಿ ಸೂಚನೆ**

ಪಾಲಿಕೆ ಕೇಂದ್ರ ಕಚೇರಿಯಲ್ಲಿ ಬುಧವಾರ ಸಭೆ ನಡೆಸಿದ ಅವರು, ರೂಪಾಂತರಿ ಕೋವಿಡ್ ವೈರಸ್ ಹರಡುವಿಕೆ ತಡೆಗೆ ಸರ್ಕಾರದ ಮಾರ್ಗಸೂಚಿ ಕಡ್ಡಾಯವಾಗಿ ಪಾಲಿಸಲು 8 ವಲಯಗಳ ಜಂಟಿ ಆಯುಕ್ತರು ಮತ್ತು ಆರೋಗ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದರು. ರೂಪಾಂತರ ಕರೊನಾ ಅತ್ಯಂತ ವೇಗವಾಗಿ ಹರಡುತ್ತಿದ್ದು, ಹೆಚ್ಚು ಮಂದಿಗೆ ಸೋಂಕು ತಗಲುವ ಸಾಧ್ಯತೆ ಇದೆ. ಸೋಂಕಿತರ ಸಂಪರ್ಕದಲ್ಲಿದ್ದವರನ್ನು ತ್ವರಿತವಾಗಿ ಪತ್ತೆ ಮಾಡಿ, ಕೂಡಲೇ ಪರೀಕ್ಷೆಗೊಳಪಡಿಸಿ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಜನರು ಭಯಭೀತರಾಗದೆ ಕಡ್ಡಾಯವಾಗಿ ಮಾಸ್ಕ್ ಧರಿಸುವುದು, ವ್ಯಕ್ತಿಗತ ಅಂತರ ಪಾಲನೆ ಮತ್ತು ಸ್ಯಾನಿಟೈಸರ್ ಬಳಕೆ ಮಾಡುವಂತೆ ಗೌರವ್ ಗುಪ್ತ ಸಲಹೆ ನೀಡಿದರು.

ಯುಕೆಯಿಂದ ಬಂದವರ ಪೈಕಿ ಬುಧವಾರ ಒಬ್ಬರು ಸೇರಿ ಒಟ್ಟು 18 ಜನರಿಗೆ ಸೋಂಕು ಪತ್ತೆಯಾಗಿದೆ. 54 ಪ್ರಾಥಮಿಕ ಸಂಪರ್ಕಿತರು, 92 ದ್ವಿತೀಯ ಸಂಪರ್ಕಿತರು ಪತ್ತೆಯಾಗಿದ್ದಾರೆ. ಸೋಂಕಿತರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಸಂಪರ್ಕಿತರನ್ನು ಪಾಲಿಕೆ ವತಿಯಿಂದ ಸಾಂಸ್ಥಿಕ ಕ್ವಾರಂಟೈನ್ ಮಾಡಲಾಗಿದೆ. ಬೊಮ್ಮನಹಳ್ಳಿ ವಲಯದ ಅಪಾರ್ಟ್‌ಮೆಂಟ್‌ನಲ್ಲಿ ಇಬ್ಬರಿಗೆ ರೂಪಾಂತರಿ ಸೋಂಕು ದೃಢಪಟ್ಟಿದ್ದು, ಅಲ್ಲಿಯೇ 33 ಮಂದಿಯನ್ನು ಸಾಂಸ್ಥಿಕ ಕ್ವಾರಂಟೈನ್ ಮಾಡಲಾಗಿದೆ ಎಂದು ಆರೋಗ್ಯಾಧಿಕಾರಿ ಸಭೆಗೆ ಮಾಹಿತಿ ನೀಡಿದರು.

## ನಿವಾಸಿಗಳ ವರದಿ ನೆಗೆಟಿವ್

**ಬ್ರಿಟನ್‌ನಿಂದ ಬಂದು ರೂಪಾಂತರಿ ಕರೊನಾ ಸೋಂಕು ದೃಢಪಟ್ಟಿದ್ದ ವಸಂತಪುರದ ಸಿರಿ ಎಂಬೆಸಿ ಅಪಾರ್ಟ್‌ಮೆಂಟ್‌ನ ತಾಯಿ ಮತ್ತು ಮಗುವಿನ ಸಂಪರ್ಕದ 33 ಹಾಗೂ ಜೆ.ಪಿ. ನಗರ 3ನೇ ಹಂತದ ಸೋಂಕಿತ ವ್ಯಕ್ತಿಯ ಸಂಪರ್ಕದಲ್ಲಿದ್ದ 5 ಜನರ ಕೋವಿಡ್ ಪರೀಕ್ಷಾ ವರದಿ ನೆಗೆಟಿವ್ ಬಂದಿದೆ. ಜತೆಗೆ, ಅವರು ವಾಸವಿರುವ ಮನೆಗಳ ಸುತ್ತಲಿನ ಪ್ರದೇಶದ ಜನರನ್ನು ಕೋವಿಡ್ ಪರೀಕ್ಷೆ ಒಳಪಡಿಸಲಾಗುತ್ತಿದೆ ಎಂದು ಪಾಲಿಕೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.**

## 554 ಹೊಸ ಪ್ರಕರಣ ಪತ್ತೆ

**ಬೆಂಗಳೂರು:** ರಾಜಧಾನಿಯಲ್ಲಿ ಬುಧವಾರ 554 ಹೊಸ ಕೋವಿಡ್ ಪ್ರಕರಣ ಪತ್ತೆಯಾಗುವ ಮೂಲಕ ಪುನಃ ಸೋಂಕಿತರ ಸಂಖ್ಯೆ ಏರಿಕೆಯತ್ತ ಸಾಗುತ್ತಿದೆ. 765 ಮಂದಿ ಸೋಂಕುಮುಕ್ತರಾಗಿದ್ದು, 5 ಮಂದಿ ಕೋವಿಡ್‌ನಿಂದ ಸಾವನ್ನಪ್ಪಿದ್ದಾರೆ. ಒಟ್ಟು ಸೋಂಕಿತರ ಸಂಖ್ಯೆ 3,87,832ಕ್ಕೆ ಏರಿಕೆಯಾಗಿದ್ದು, ಒಟ್ಟು ಗುಣಮುಖರ ಸಂಖ್ಯೆ 3,75,986 ತಲುಪಿದೆ. ಇನ್ನು ಒಟ್ಟು ಕೋವಿಡ್‌ನಿಂದ ಸಾವನ್ನಪ್ಪಿದವರ ಸಂಖ್ಯೆ 4,311ಕ್ಕೆ ಮುಟ್ಟಿದೆ. ನಗರದಲ್ಲಿ 7,534 ಸಕ್ರಿಯ ಪ್ರಕರಣಗಳಿದ್ದು, 89 ಮಂದಿ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಆರೋಗ್ಯ ಇಲಾಖೆ ಮಾಹಿತಿ ನೀಡಿದೆ.

ವಿಜಯವಾಣಿ
ಕನ್ನಡಿಗರ ಧ್ವನಿ

ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

## ಹಲವು ರಸ್ತೆಗಳಲ್ಲಿ ಸಂಚಾರ ನಿಷೇಧ | ಡ್ರಂಕ್ ಆ್ಯಂಡ್ ಡ್ರೈವ್‌ಗೆ ಕೇಸ್

# ಖಾಕಿ ಕಣ್ಗಾವಲಲ್ಲಿ ವರ್ಷಾಚರಣೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಹೊಸ ವರ್ಷಾಚರಣೆ ವೇಳೆ ಅಹಿತಕರ ಘಟನೆಗಳು ನಡೆಯದಂತೆ ಬಿಗಿಭದ್ರತೆ ಕೈಗೊಳ್ಳಲಾಗಿದ್ದು, ಗುರುವಾರ ಸಂಜೆ 6ರಿಂದ ಶುಕ್ರವಾರ ಬೆಳಗ್ಗೆ 6ವರೆಗೆ ನಿಷೇಧಾಜ್ಞೆ ವಿಧಿಸಲಾಗಿದೆ. ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ಇಂದಿರಾನಗರ, ಕೋರಮಂಗಲ ಸೇರಿದಂತೆ ಪಾರ್ಕ್, ರಸ್ತೆ ಮತ್ತು ಹೊರಾಂಗಣಗಳಲ್ಲಿ 5ಕ್ಕಿಂತ ಹೆಚ್ಚು ಜನರು ಸೇರದಂತೆ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಎಚ್ಚರಿಕೆ ನೀಡಿದ್ದಾರೆ.

ಕ್ಲಬ್, ಅಪಾರ್ಟ್‌ಮೆಂಟ್, ರೆಸ್ಟೋರೆಂಟ್, ಮಾಲ್, ಪಬ್, ಹೋಟೆಲ್‌ಗಳಲ್ಲಿ ಶೇ.50 ಗ್ರಾಹಕರಿಗೆ ಮಾತ್ರ ಬುಕಿಂಗ್ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.

**» ರಸ್ತೆ, ಮೈದಾನಗಳಲ್ಲಿ ಸಂಭ್ರಮಾಚರಣೆ ಮಾಡುವಂತಿಲ್ಲ**

ಸಂಗೀತ, ಬ್ಯಾಂಡ್, ನೃತ್ಯ, ಡಾನ್ಸ್, ಡಿಜೆ ಸೇರಿದಂತೆ ವಿಶೇಷ ಕಾರ್ಯಕ್ರಮಗಳನ್ನು ನಿರ್ಬಂಧಿಸಲಾಗಿದೆ. ಕೋವಿಡ್ ಮಾರ್ಗ ಸೂಚಿಯನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಸ್ಯಾನಿಟೈಸರ್ ಬಳಕೆ, ವೈಯಕ್ತಿಕ ಅಂತರ, ಮಾಸ್ಕ್ ಧರಿಸಬೇಕು. ದೇಹದ ಉಷ್ಣಾಂಶ ತಪಾಸಣೆ ಮಾಡಬೇಕು. ತಪ್ಪಿದರೆ ಐಪಿಸಿ ಸೆಕ್ಷನ್, ರಾಷ್ಟ್ರೀಯ ವಿಪತ್ತು ನಿರ್ವಹಣ ಕಾಯ್ದೆಯಡಿ ಕೇಸ್ ದಾಖಲಿಸುವುದು ಎಂದು ತಿಳಿಸಿದ್ದಾರೆ.

ಗುರುವಾರ ರಾತ್ರಿ 8ರಿಂದ ಬೆಳಗಿನ ಜಾವ 2 ಗಂಟೆವರೆಗೆ ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ಮ್ಯೂಸಿಯಂ ರಸ್ತೆ, ರೆಸ್ಟ್ ಹೌಸ್ ಪಾರ್ಕ್ ರಸ್ತೆ, ರೆಸಿಡೆನ್ಸಿ ರಸ್ತೆಯಲ್ಲಿ ಪೊಲೀಸ್ ವಾಹನ, ತುರ್ತು ಸೇವಾ ವಾಹನ ಹೊರತುಪಡಿಸಿ ಉಳಿದ ಎಲ್ಲ ವಾಹನಗಳ ಸಂಚಾರ ನಿಷೇಧಿಸಲಾಗಿದೆ. ರಾತ್ರಿ 10 ಗಂಟೆಯಿಂದ ಜ.1ರ ಬೆಳಗ್ಗೆ 6 ಗಂಟೆವರೆಗೆ 44 ಮೇಲ್ಸೇತುವೆಗಳಲ್ಲಿ ವಾಹನಸಂಚಾರ ಇರುವುದಿಲ್ಲ ಜಂಟಿ ಪೊಲೀಸ್ ಆಯುಕ್ತ (ಸಂಚಾರ) ಡಾ. ರವಿಕಾಂತೇ ಗೌಡ ಹೇಳಿದ್ದಾರೆ.



**ಮದ್ಯ ಸೇವಿಸಿ ವಾಹನ ಚಲಾಯಿಸಿ ಸಿಕ್ಕಿಬಿದ್ದರೆ ಕೇಸ್ ದಾಖಲಿಸಿ ಚಾಲನಾ ಪರವಾನಗಿ (ಡಿಎಲ್) ರದ್ದು ಮಾಡಲು ಪ್ರಾದೇಶಿಕ ಸಾರಿಗೆ ಇಲಾಖೆಗೆ ರವಾನಿಸಲಾಗುತ್ತದೆ.**

| ಡಾ.ಬಿ.ಆರ್. ರವಿಕಾಂತೇಗೌಡ
ಜಂಟಿ ಪೊಲೀಸ್ ಆಯುಕ್ತ (ಸಂಚಾರ)



ವಿಜಯವಾಣಿ ಚಿತ್ರ

**191 ಚೆಕ್ ಪಾಯಿಂಟ್**

**ಕೆಲವರು ವರ್ಷಾಚರಣೆ ನೆಪದಲ್ಲಿ ಫ್ಲೈ ಓವರ್‌ಗಳ ಮೇಲೆ ವ್ಹೀಲಿಂಗ್, ಡ್ರ್ಯಾಗ್ ರೇಸ್, ಅತಿವೇಗದ ಚಾಲನೆ ಮಾಡುತ್ತಾರೆ. ಇದನ್ನು ತಡೆಯಲು ಮೇಲ್ಸೇತುವೆ ಮೇಲೆ ಸಂಚಾರ ಬಂದ್ ಮಾಡಲಾಗಿದೆ. ಕುಡಿದು ವಾಹನ ಚಲಾಯಿಸುವರ ತಪಾಸಣೆಗೆ ನಗರದ ಎಲ್ಲೆಡೆ 191 ಚೆಕ್ ಪಾಯಿಂಟ್‌ಗಳಲ್ಲಿ ಸಂಚಾರ ಪೊಲೀಸರು ಇರಲಿದ್ದಾರೆ.**

### ಈ ಸ್ಥಳಗಳಲ್ಲಿ ವಾಹನ ನಿಲುಗಡೆಗೆ ಅವಕಾಶವಿಲ್ಲ

**ಡಿ.31ರ ಸಂಜೆ 4 ಗಂಟೆಯಿಂದ ತಡರಾತ್ರಿ 2 ಗಂಟೆವರೆಗೆ ಎಂ.ಜಿ. ರಸ್ತೆ, ಕಬ್ಬನ್ ರಸ್ತೆ, ರೆಸಿಡೆನ್ಸಿ ರಸ್ತೆ, ರಿಚ್‌ಮಂಡ್ ರಸ್ತೆ, ಇನ್‌ಫೆಂಟ್ರಿ ರಸ್ತೆ, ಬ್ರಿಗೇಡ್ ರಸ್ತೆ, ಅಶೋಕನಗರ ಹಳೇ ಪೊಲೀಸ್ ಠಾಣೆ ಜಂಕ್ಷನ್, ಚರ್ಚ್ ಸ್ಟ್ರೀಟ್, ಮ್ಯೂಸಿಯಂ ರಸ್ತೆ, ರೆಸ್ಟ್ ಹೌಸ್ ರಸ್ತೆ, ಸೇಂಟ್ ಮಾರ್ಕ್ಸ್ ರಸ್ತೆ, ಮಗರತ್ ರಸ್ತೆ, ಕಮಿಷನರೇಟ್ ರಸ್ತೆ, ಮಾರ್ಕನ್ ರಸ್ತೆ, ಮೈನ್ ಗಾರ್ಡ್ ಕ್ರಾಸ್ ರಸ್ತೆ, ಡಿಸ್ಪೆನ್ಸರಿ ರಸ್ತೆ, ಇಂದಿರಾನಗರ 100 ಅಡಿ ರಸ್ತೆಯಲ್ಲಿ ಪಾರ್ಕಿಂಗ್ ನಿರ್ಬಂಧಿಸಲಾಗಿದೆ. ಆದೇಶ ಉಲ್ಲಂಘನೆ ಮಾಡುವರ ವಿರುದ್ಧ ಸಂಚಾರ ನಿಯಮದಡಿ ಪ್ರಕರಣ ದಾಖಲಿಸಲಾಗುತ್ತದೆ ಎಂದು ರವಿಕಾಂತೇಗೌಡ ಎಚ್ಚರಿಕೆ ನೀಡಿದ್ದಾರೆ.**

# ಸಹಕರಿಸಲು ಗೃಹ ಸಚಿವರ ಕರೆ

**ಬೆಂಗಳೂರು:** ಹೊಸ ವರ್ಷದ ಆಚರಣೆಗೆ ಮಾರ್ಗಸೂಚಿ ಬಿಡುಗಡೆ ಮಾಡಲಾಗಿದ್ದು, ಅದರ ಪರಿಪಾಲನೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಡಿಜಿ ಅವರು ರಾಜ್ಯಕ್ಕೆ ಹಾಗೂ ನಗರ ಪೊಲೀಸ್ ಆಯುಕ್ತರು ಬೆಂಗಳೂರಿಗೆ ಪ್ರತ್ಯೇಕ ಮಾರ್ಗಸೂಚಿ ಬಿಡುಗಡೆ ಮಾಡಿದ್ದಾರೆ.



ಹೊಸ ವರ್ಷಾಚರಣೆಯನ್ನು ಸಾರ್ವಜನಿಕವಾಗಿ ಎಲ್ಲೂ ನಡೆಸಲು ಅವಕಾಶ ನೀಡುವುದಿಲ್ಲ. ಎಂಜಿ ರೋಡ್, ಇನ್ನಿತರ ಕಡೆ 144 ಸೆಕ್ಷನ್ ಜಾರಿಗೆ ತರಲಾಗುವುದು ಎಂದು ಬುಧವಾರ ಸುದ್ದಿಗಾರರಿಗೆ ತಿಳಿಸಿದರು. ನಗರದಲ್ಲಿನ ಪಬ್, ಕ್ಲಬ್ ನಿಯಂತ್ರಣಕ್ಕೆ ಡಿಸಿಪಿಗಳು ಅವರ ವ್ಯಾಪ್ತಿಯಲ್ಲಿ ಕ್ರಮ ಜರುಗಿಸಬೇಕು ಎಂದು ಸೂಚನೆ ನೀಡಲಾಗಿದೆ ಎಂದರು. ನಗರದ ಹೊರಗಡೆಯೂ ವರ್ಷಾಚರಣೆಗೆ ಅವಕಾಶ ಇಲ್ಲ. ರೆಸಾರ್ಟ್ ಮೇಲೂ ಕಣ್ಣಿಡಲು ಎಸ್ಪಿಗಳಿಗೆ ಸೂಚನೆ ನೀಡಲಾಗಿದೆ. ಒಂದು ವರ್ಷ ಮನೆಯಲ್ಲಿ ಸೆಲೆಬ್ರೇಷನ್ ಮಾಡಿದರೆ ಏನು ಆಗುವುದಿಲ್ಲ. ಈ ಬಗ್ಗೆ ಸಾರ್ವಜನಿಕರು ಸಹಕಾರ ಕೊಡಬೇಕು ಎಂದರು.

### ಕೇಂದ್ರದ ಮಾರ್ಗಸೂಚಿ ಪಾಲನೆ

**ನೂತನ ಬ್ರಿಟನ್ ವೈರಸ್ ಬಗ್ಗೆ ಕೇಂದ್ರ ಸರ್ಕಾರದ ನೀಡಿರುವ ಮಾರ್ಗದರ್ಶನದಂತೆ ಇಲ್ಲಿಯೂ ಕ್ರಮ ಕೈಗೊಳ್ಳಲಾಗುತ್ತಿದೆ. ಇದಕ್ಕಾಗಿ ಈಗಾಗಲೇ ನಾವು ತಂಡಗಳ ರಚನೆ ಮಾಡಿದ್ದೇವೆ. ಮುಂದೆಯೂ ಕೇಂದ್ರ ನೀಡುವ ಸಲಹೆ ಮೇಲೆ ಅಗತ್ಯ ಕ್ರಮ ತೆಗೆದುಕೊಳ್ಳುತ್ತೀವಿ ಎಂದು ಗೃಹ ಸಚಿವರು ತಿಳಿಸಿದರು.**

ಉದಯವಾಣಿ
ಜನಮನದ ಜೀವನಾಡಿ

# ಹೊಸವರ್ಷಾಚರಣೆ: ಎಲ್ಲೆಡೆ ಪೊಲೀಸ್ ನಿಯೋಜನೆ

**60 ಸೆಕ್ಟರ್, 191 ನಾಕಾ ಬಂದಿ, 2500 ಸಂಚಾರ ಪೊಲೀಸರ ನಿಯೋಜನೆ**

**ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್‌ಸ್ಟ್ರೀಟ್, ಸೆಂಟ್ ಮಾರ್ಕ್ಸ್ ರಸ್ತೆ ಮತ್ತಿತರ ರಸ್ತೆಗಳಲ್ಲಿ ಡಿ.31 ರಾತ್ರಿ 8ಗಂಟೆಯಿಂದ ಮತ್ತು 2021 ಜ.1 ಬೆಳಗ್ಗೆ 6 ಗಂಟೆವರೆಗೆ ವಾಹನ ಸಂಚಾರ ನಿರ್ಬಂಧ**

**ಸಿಬಿಡಿ ಪ್ರದೇಶ ಸೇರಿ ಎಲ್ಲೆಡೆ ಕಟ್ಟುನಿಟ್ಟಿನ ಕ್ರಮ, ಮೇಲ್ಸೇತುವೆ ಸಂಚಾರ ಬಂದ್**

**ಬೆಂಗಳೂರು:** ಕೋವಿಡ್-19 ಹಿನ್ನೆಲೆ ಹೊಸವರ್ಷಾಚರಣೆ ಸಂದರ್ಭದಲ್ಲಿ ಸಾರ್ವಜನಿಕರು ಗುಂಪು ಸೇರುವುದನ್ನು ತಪ್ಪಿಸುವ ಸಲುವಾಗಿ ಕೇಂದ್ರ ವಾಣಿಜ್ಯ ಪ್ರದೇಶ(ಸಿಬಿಡಿ) ವ್ಯಾಪ್ತಿಯ ರಸ್ತೆ ಹಾಗೂ ನಗರದ ಎಲ್ಲ ಮೇಲ್ಸೇತುವೆಗಳಲ್ಲಿ ಸಂಚಾರ ನಿರ್ಬಂಧಿಸಲಾಗಿದೆ ಎಂದು ಬೆಂಗಳೂರು ನಗರ ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಡಾ ಬಿ.ಆರ್. ರವಿಕಾಂತೇಗೌಡ ಹೇಳಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಿಬಿಡಿ ವ್ಯಾಪ್ತಿಗೆ ಬರುವ ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್‌ಸ್ಟ್ರೀಟ್, ಸೆಂಟ್ ಮಾರ್ಕ್ಸ್ ರಸ್ತೆ, ರೆಸ್ಟ್ ಹೌಸ್ ರಸ್ತೆ ಮತ್ತು ರೆಸಿಡೆನ್ಸಿ ರಸ್ತೆಗಳಲ್ಲಿ ಡಿ.31 ರಾತ್ರಿ 8ಗಂಟೆಯಿಂದ ಮತ್ತು 2021 ಜ.1ಬೆಳಗ್ಗೆ 6 ಗಂಟೆವರೆಗೆ ಸಂಪೂರ್ಣವಾಗಿ ವಾಹನ ಸಂಚಾರ ನಿರ್ಬಂಧಿಸಲಾಗಿದೆ ಎಂದರು.

ಅನಿಲ್ ಕುಂಬ್ಳೆ ವೃತ್ತದಿಂದ ಮೆಯೋ ಹಾಲ್ ಬಳಿಯ ರೆಸಿಡೆನ್ಸಿ ರಸ್ತೆ ಜಂಕ್ಷನ್, ಬ್ರಿಗೇಡ್ ರಸ್ತೆ, ಚರ್ಚ್‌ಸ್ಟ್ರೀಟ್, ಮ್ಯೂಸಿಯಂ ರಸ್ತೆ, ರೆಸ್ಟ್ ಹೌಸ್ ಪಾರ್ಕ್ ರಸ್ತೆ, ರೆಸಿಡೆನ್ಸಿ ರಸ್ತೆಯಲ್ಲಿ ಪೊಲೀಸ್ ವಾಹನ, ಕರ್ತವ್ಯ ನಿರತ ತುರ್ತು ಸೇವಾ ವಾಹನ ಹೊರತುಪಡಿಸಿ ಇತರೆ ಯಾವುದೇ ವಾಹನಕ್ಕೆ ಪ್ರವೇಶ ಹಾಗೂ ಸಂಚಾರ ನಿಷೇಧಿಸಲಾಗಿದೆ. ಈ ಮಾರ್ಗದ ಮೂಲಕ ಬೇರೆಡೆ ಹೋಗುವ ವಾಹನ ಸವಾರರು ಸಂಚಾರ ಪೊಲೀಸರು ಸೂಚಿಸುವ ಪರ್ಯಾಯ ಮಾರ್ಗದ ಮೂಲಕ ಸಂಚರಿಸಬೇಕೆಂದರು.

ಅಲ್ಲದೆ, ಸಿಬಿಡಿ ಹಾಗೂ ಇತರೆ ಪ್ರದೇಶಗಳ ಹೋಟೆಲ್, ರೆಸ್ಟೋರೆಂಟ್‌ಗಳ ಮಾಲೀಕರ ಜತೆ ಈಗಾಗಲೇ ಸಭೆ ನಡೆಸಲಾಗಿದೆ. ಯಾವ ಹೋಟೆಲ್‌ನಲ್ಲಿ ಎಷ್ಟು ಆಸನ ಕಾಯ್ದಿರಿಸಲಾಗಿದೆ ಎಂಬ ಮಾಹಿತಿಯನ್ನು ಕಾನೂನು ಸುವ್ಯವಸ್ಥೆ ಪೊಲೀಸರು ಮಾಹಿತಿ ಪಡೆದುಕೊಂಡಿದ್ದಾರೆ. ಅದರ ಆಧಾರದ ಮೇಲೆ ಎಲ್ಲೆಡೆ ಚೆಕ್‌ಪೋಸ್ಟ್ ನಿರ್ಮಿಸಲಾಗಿದೆ. ನಿಗದಿ ಹೋಟೆಲ್‌ಗಳಿಗೆ ಹೋಗಬೇಕಾದ ಸಾರ್ವಜನಿಕರು ಕಡ್ಡಾಯವಾಗಿ ಮುಂಗಡ ಕಾಯ್ದಿರಿಸಿದ ಪಾಸ್ ತರಬೇಕು. ಅದನ್ನು ಚೆಕ್‌ಪೋಸ್ಟ್‌ಗಳಲ್ಲಿರುವ ತಪಾಸಣಾ ಅಧಿಕಾರಿಗಳಿಗೆ ತೋರಿಸಿ ವಾಹನ ನಿಲುಗಡೆ ಮಾಡಿ ನಡೆದುಕೊಂಡೇ ತೆರಳಬೇಕು. ಮುಂಗಡ ಕಾಯ್ದಿರಿಸಿದ ಪಾಸ್ ಇಲ್ಲದವರಿಗೆ ಯಾವುದೇ ಕಾರಣಕ್ಕೂ ಅವಕಾಶವಿಲ್ಲ ಎಂದು ಹೇಳಿದರು.

**ವಾಹನ ನಿಲುಗಡೆ ನಿಷೇಧ:** ಎಂ.ಜಿ.ರಸ್ತೆ,(ಕ್ವೀನ್ಸ್ ವೃತ್ತ) ದಿಂದ ಟ್ರಿನಿಟಿ ವೃತ್ತದವರೆಗೆ, ಕಬ್ಬನ್ ರಸ್ತೆ, ರೆಸಿಡೆನ್ಸಿ ರಸ್ತೆ, ರಿಚ್‌ಮಂಡ್ ರಸ್ತೆ, ಇನ್‌ಫೆಂಟ್ರಿ ರಸ್ತೆ, ಬ್ರಿಗೇಡ್ ರಸ್ತೆ, ಅಶೋಕನಗರ ಹಳೇಪಿಎಸ್ ಜಂಕ್ಷನ್ ವರೆಗೆ, ಚರ್ಚ್‌ಸ್ಟ್ರೀಟ್, ಮ್ಯೂಸಿಯಂ, ರೆಸ್ಟ್‌ಹೌಸ್ ರಸ್ತೆ, ಸೆಂಟ್ ಮಾರ್ಕ್ಸ್ ರಸ್ತೆ, ಮೆಗ್ರಾತ್ ರಸ್ತೆ, ಕಮಿಷಿನರೇಟ್ ರಸ್ತೆ, ಮಾರ್ಕನ್ ರಸ್ತೆ, ಮೈನ್ ಗಾರ್ಡ್ ಕ್ರಾಸ್ ರಸ್ತೆ ಮತ್ತು ಡಿಸ್ಪೆನ್ಸರಿ ರಸ್ತೆ, ಇಂದಿರಾನಗರ 100 ಅಡಿ ರಸ್ತೆಯಲ್ಲಿ ವಾಹನ ನಿಲುಗಡೆ ನಿಷೇಧಿಸಲಾಗಿದೆ. ಶಿವಾಜಿನಗರ ಹಾಗೂ ಇತರೆಡೆ ವಾಹನ ನಿಲುಗಡೆಗೆ ವ್ಯವಸ್ಥೆ ಮಾಡಲಾಗಿದೆ. ಈ ಬಗ್ಗೆ ಸ್ಥಳದಲ್ಲಿರುವ ಸಂಚಾರ ಪೊಲೀಸರು ಸೂಚಿಸಲಿದ್ದಾರೆ ಎಂದು ಹೇಳಿದರು.



ಬುಧವಾರ ಎಂ.ಜಿ.ರಸ್ತೆಯಲ್ಲಿ ಸಿಸಿಟೀವಿ ಕ್ಯಾಮರಾ ಪರಿಶೀಲಿಸಿದ ಸಿಬ್ಬಂದಿ.

## 2500 ಮಂದಿ ನಿಯೋಜನೆ

ನಗರದ 46 ಸಂಚಾರ ಠಾಣಾ ವ್ಯಾಪ್ತಿಯಲ್ಲಿ 2500 ಅಧಿಕಾರಿ-ಸಿಬ್ಬಂದಿ ಕರ್ತವ್ಯ ನಿರ್ವಹಿಸಲಿದ್ದು, 60 ಸೆಕ್ಟರ್‌ಗಳ ನಿರ್ಮಾಣ ಮಾಡಲಾಗಿದೆ. ನೈಸ್ ರಸ್ತೆ ಸೇರಿ 668 ಕಡೆ ಸಂಚಾರ ಪೊಲೀಸರು ನಿಯೋಜನೆಗೊಂಡಿದ್ದಾರೆ. ನಿರ್ಮಾಣ ಹಂತದ ರಸ್ತೆಗೆ ಬ್ಯಾರಿಕೇಡ್ ಹಾಕಲಾಗುತ್ತದೆ. 191 ಕಡೆಗಳಲ್ಲಿ ನಾಕಾಬಂದಿ ಹಾಕಲಾಗುವುದು. ಮುಂಗಡ ಪಾಸ್ ಪಡೆದು ಹೋಗುವವರು ನೋಂದಣಿ ಪುಸ್ತಕದಲ್ಲಿ ವಿಳಾಸ, ಮೊಬೈಲ್ ನಂಬರ್, ಸಹಿ ಹಾಕಿ ತೆರಳಬೇಕು. ಎಲ್ಲ ಹಂತದ ಅಧಿಕಾರಿಗಳು ಗಸ್ತು ತಿರುಗಲಿದ್ದು ಸಂಚಾರ ಮತ್ತು ಕಾನೂನು ಸುವ್ಯವಸ್ಥೆ ಪೊಲೀಸರು ಪೆಟ್ರೋಲಿಂಗ್ ನಡೆಸಲಿದ್ದಾರೆಂದರು.

## ರಕ್ತದ ಮಾದರಿ ಪಡೆಯಲಾಗುವುದು

ಕುಡಿದು ವಾಹನ ಚಲಾವಣೆ ಮಾಡಿದರೆ ಕಠಿಣ ಕಾನೂನು ಕ್ರಮಕೈಗೊಳ್ಳಬೇಕಾಗುತ್ತದೆ. ತಪಾಸಣೆ ವೇಳೆ ಅನುಮಾನ ಬಂದರೆ ಕೂಡಲೇ ವೈದ್ಯಕೀಯ ತಪಾಸಣೆಗೊಳಪಡಿಸಿ ಅವರ ರಕ್ತದ ಮಾದರಿ ಪಡೆಯಲಾಗುತ್ತದೆ. ಮದ್ಯ ಸೇವಿಸಿದ್ದು ಸಾಬೀತಾದರೆ ವಾಹನ ಜಪ್ತಿ ಮಾಡಿ, ಚಾಲನಾ ಪರವಾನಗಿ ರದ್ದು ಪಡಿಸಲಾಗುವುದು. ಜತೆಗೆ ಸಿಆರ್ ಪಿಸಿ, ಭದ್ರತಾ ಕಾಯ್ದೆ, ಕೊರೊನಾ ನಿಯಮ ಉಲ್ಲಂಘನೆ ಕಾಯ್ದೆ ವಿಧಿಸಲಾಗುವುದು. ಹೋಟೆಲ್ ಗಳಲ್ಲಿ ಮದ್ಯ ಸೇವಿಸುವವರು ವಾಹನ ಚಾಲನೆ ಮಾಡುವಂತಿಲ್ಲ. ಇಲ್ಲವಾದಲ್ಲಿ ಉಬರ್, ಓಲಾ ಸಂಚರಿಸಲಿದ್ದು, ಈ ಮೂಲಕ ಮನೆಗೆ ತೆರಳಬೇಕು ಎಂದು ಜಂಟಿ ಪೊಲೀಸ್ ಆಯುಕ್ತ ರವಿಕಾಂತೇಗೌಡ ಎಚ್ಚರಿಸಿದರು.

## 45 ಮೇಲ್ಸೇತುವೆಯಲ್ಲಿ ಸಂಚಾರ ಬಂದ್

ಮಡಿವಾಳ, ಎಲೆಕ್ಟ್ರಾನಿಕ್ ಸಿಟಿ, ಮೈಕೋ ಲೇಔಟ್, ವಿಮಾನ ನಿಲ್ದಾಣ, ವೈಟ್‌ಫೀಲ್ಡ್, ಎಚ್‌ಎಸ್‌ಆರ್, ಹಲಸೂರು, ಕೆ.ಆರ್.ಪುರ, ಪುಲಕೇಶಿನಗರ, ಬಾಣಸವಾಡಿ, ಅಶೋಕನಗರ, ವಿಲ್ಸನ್ ಗಾರ್ಡನ್, ಆಡುಗೋಡಿ, ಉಪ್ಪಾರಪೇಟೆ, ಚಿಕ್ಕಪೇಟೆ, ಬ್ಯಾಟರಾಯನಪುರ, ಕಾಮಾಕ್ಷಿಪಾಳ್ಯ, ಬ್ಯಾಟರಾಯನಪುರ, ವಿ.ವಿ.ಪುರ, ಬಸವನಗುಡಿ, ಜಯನಗರ, ಬನಶಂಕರಿ, ರಾಜಾಜಿನಗರ, ಮಲ್ಲೇಶ್ವರಂ, ಯಶವಂತಪುರ, ಪೀಣ್ಯ, ಕೆಂಗೇರಿ, ಆರ್.ಟಿ.ನಗರ, ಹೆಬ್ಬಾಳ, ಚಿಕ್ಕಜಾಲ ಸಂಚಾರ ಠಾಣಾ ವ್ಯಾಪ್ತಿಯ 45 ಮೇಲ್ಸೇತುವೆಗಳ ಮೇಲೆ ಡಿ.31ರ ರಾತ್ರಿ 10 ಗಂಟೆಯಿಂದಲೇ ಸಂಚಾರ ನಿರ್ಬಂಧ ಹೇರಲಾಗಿದೆ. ಇದರೊಂದಿಗೆ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ತೆರಳುವ ಎಲಿವೇಟೆಡ್ ಕಾರಿಡಾರ್ ಮಾರ್ಗ ಕೂಡ ಬಂದ್ ಮಾಡಲಾಗುತ್ತದೆ. ವಾಹನ ಸವಾರರು ಪರ್ಯಾಯ ಮಾರ್ಗದಲ್ಲಿ ತೆರಳಲು ಸೂಚಿಸಲಾಗಿದೆ. ವೀಲ್ಹಿಂಗ್ ಸೇರಿ ಸಾರ್ವಜನಿಕರಿಗೆ ತೊಂದರೆ ಕೊಡುವ ರೀತಿಯಲ್ಲಿ ವಾಹನ ಚಲಾವಣೆ ಮಾಡಿದರೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.

ಉದಯವಾಣಿ
ಜನಮನದ ಜೀವನಾಡಿ

# ನಾಪತ್ತೆ ಆಗಿದ್ದವರ ವಿಳಾಸ ಕೊನೆಗೂ ಪತ್ತೆ!

## ರೂಪಾಂತರ ಕೊರೊನಾ ಹಿನ್ನೆಲೆ; ಬ್ರಿಟನ್‌ನಿಂದ ಬಂದವರಿಗೆ ಕೋವಿಡ್ ಸೋಂಕು ಪರೀಕ್ಷೆ ಚುರುಕು

**ಬೆಂಗಳೂರು:** ನಗರಕ್ಕೆ ಬ್ರಿಟನ್‌ನಿಂದ ಬಂದು ನಾಪತ್ತೆಯಾಗಿದ್ದ 202 ಜನರ ವಿಳಾಸ ಕೊನೆಗೂ ಪತ್ತೆಯಾಗಿದ್ದು, ಇವರ ಗಂಟಲು ದ್ರವ ಮಾದರಿ ಸಂಗ್ರಹಕ್ಕೆ ಪಾಲಿಕೆ ಮುಂದಾಗಿದೆ.

ನಗರದಲ್ಲಿ 3 ಜನರಿಗೆ ರೂಪಾಂತರ ಕೊರೊನಾ ಸೋಂಕು ಇರುವುದು ಮಂಗಳವಾರ ದೃಢಪಟ್ಟ ಬೆನ್ನಲ್ಲೇ ನಾಪತ್ತೆ ಆಗಿರುವವರಲ್ಲಿಯೂ ರೂಪಾಂತರ ಕೊರೊನಾ ಸೋಂಕು ದೃಢಪಡುವ ಬಗ್ಗೆ ಆತಂಕ ಸೃಷ್ಟಿಯಾಗಿತ್ತು.ಹೀಗಾಗಿ, ನಾಪತ್ತೆ ಆಗಿರುವವರ ಪತ್ತೆಗೆ ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಸಹಯೋಗದಲ್ಲಿ ಕಾರ್ಯಾಚರಣೆ ನಡೆಸಲಾಗಿದ್ದು, ನಾಪತ್ತೆ ಆಗಿರುವವರ ವಿಳಾಸವನ್ನು ಪಾಲಿಕೆಗೆ ನೀಡಲಾಗಿದೆ.

ಸಂಬಂಧ ಪ್ರತಿಕ್ರಿಯಿಸಿದ ಪಾಲಿಕೆ ಮುಖ್ಯ ಆರೋಗ್ಯಾಧಿಕಾರಿ ಡಾ.ವಿಜೇಂದ್ರ, ಡಿ.1ರಿಂದ 21ವರೆಗೆ ಬ್ರಿಟನ್‌ನಿಂದ ಒಟ್ಟು 1,456 ಜನ ನಗರಕ್ಕೆ ಬಂದಿದ್ದು, ಇವರಲ್ಲಿ 1,290 ಜನರನ್ನು ಈಗಾಗಲೇ ಸೋಂಕು ಪರೀಕ್ಷೆಗೆ ಒಳಪಡಿಸಲಾಗಿದೆ. ಉದ್ದೇಶ ಪೂರ್ವಕವಾಗಿ ನಾಪತ್ತೆ ಆಗಿದ್ದರೆ ಅಥವಾ ಇಲ್ಲವೇ ಎನ್ನುವುದು ಮುಂದೆ ತನಿಖೆಯಿಂದ ತಿಳಿಯಲಿದೆ ಎಂದು ಹೇಳಿದರು.

ಬ್ರಿಟನ್‌ನಿಂದ ವಾಪಸ್ ಬಂದವರ ಪೈಕಿ 17 ಮಂದಿಗೆ ಸೋಂಕು ದೃಢಪಟ್ಟಿತ್ತು. ಸೋಂಕು ದೃಢಪಟ್ಟವರ ಸಂಪರ್ಕಿತರ ಪತ್ತೆ ಹಾಗೂ ಪರೀಕ್ಷಾ ಕಾರ್ಯ ಮುಂದುವರಿದಿದೆ. ಇದೇ ವೇಳೆ ಕ್ವಾರಂಟೈನ್‌ಗೆ ಒಳಪಡಿಸುವುದು ಮತ್ತು ನಿಗಾ ವಹಿಸಲು ವಲಯ ಆರೋಗ್ಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ರೂಪಾಂತರ ಪ್ರಕರಣ ಇಲ್ಲ: ನಗರದಲ್ಲಿ ತಾಯಿ– ಮಗು ಹಾಗೂ ವ್ಯಕ್ತಿಯೊಬ್ಬರಿಗೆ ಮಂಗಳವಾರ ರೂಪಾಂತರ ಕೊರೊನಾ ಸೋಂಕು ದೃಢಪಟ್ಟಿದ್ದು ಬಿಟ್ಟರೆ ಬುಧವಾರ ಹೊಸ ಪ್ರಕರಣ ಪತ್ತೆಯಾಗಿಲ್ಲ. ಕೊರೊನಾ ಸೋಂಕು ದೃಢಪಟ್ಟ ವೇಳೆ ತೆಗೆದುಕೊಳ್ಳುವ ಮುಂಜಾಗ್ರತಾ ಕ್ರಮಗಳನ್ನೇ ಈಗಲೂ ತೆಗೆದುಕೊಳ್ಳುತ್ತಿದ್ದೇವೆ ಎಂದರು.

**ಬ್ರಿಟನ್‌ನಿಂದ ಹಿಂದಿರುಗಿದ್ದ 202 ಮಂದಿ ನಾಪತ್ತೆಯಾಗಿದ್ದರು. ಇವರ ಮೊಬೈಲ್ ಸ್ವಿಚ್ ಆಫ್ ಆಗಿದ್ದ ಹಿನ್ನೆಲೆ ಸಂಪರ್ಕಿಸಲು ಸಾಧ್ಯವಾಗಿರಲಿಲ್ಲ. ಪೊಲೀಸ್ ಇಲಾಖೆ ಹಾಗೂ ಆರೋಗ್ಯ ಇಲಾಖೆ ವಿಶೇಷ ಕಾರ್ಯಾಚರಣೆ ನಡೆಸುವ ಮೂಲಕ ಇವರ ವಿಳಾಸ ಮಾಹಿತಿಯನ್ನು ಪಾಲಿಕೆಗೆ ಹಸ್ತಾಂತರ ಮಾಡಿದೆ.**

**• ಡಾ. ವಿಜೇಂದ್ರ,ಪಾಲಿಕೆ ಮುಖ್ಯ ಆರೋಗ್ಯಾಧಿಕಾರಿ**

## ಸದ್ಯದ ಮಟ್ಟಿಗೆ ಆತಂಕ ದೂರ

**ಬೆಂಗಳೂರು:** ಬ್ರಿಟನ್‌ನಿಂದ ಬಂದು ರೂಪಾಂತರ ಕೊರೊನಾ ಸೋಂಕು ದೃಢಪಟ್ಟಿದ್ದವರ ಪ್ರಾಥಮಿಕ ಸಂಪರ್ಕದಲ್ಲಿದ್ದ ಒಟ್ಟು 38 ಜನರ ಕೊರೊನಾ ಸೋಂಕು ಪರೀಕ್ಷಾ ವರದಿ ನೆಗೆಟಿವ್ ಬಂದಿದ್ದು, ಸದ್ಯದ ಮಟ್ಟಿಗೆ ಆತಂಕ ದೂರವಾಗಿದೆ.

ಇದೀಗ ಇವರ ದ್ವಿತೀಯ ಸಂಪರ್ಕದಲ್ಲಿದ್ದ 62ಕ್ಕೂ ಹೆಚ್ಚು ಜನರ ಪರೀಕ್ಷೆ ಪ್ರಾರಂಭವಾಗಿದೆ. ಬ್ರಿಟನ್‌ನಿಂದ ಬೆಂಗಳೂರಿಗೆ ಡಿ.19ಕ್ಕೆ ಬಂದಿರುವ ಮೂವರಲ್ಲಿ ಮಂಗಳವಾರ ರೂಪಾಂತರ ಕೊರೊನಾ(ಬಿ.1.1.7 ಕೋವಿಡ್) ದೃಢಪಟ್ಟಿತ್ತು. ಇವರ ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕದಲ್ಲಿದ್ದ ಒಟ್ಟು 38 ಜನರನ್ನು ಮಂಗಳವಾರ ಸಂಜೆ ವೇಳೆಗೆ ಪರೀಕ್ಷೆಗೆ ಒಳಪಡಿಸಲಾಗಿತ್ತು. ಇವರ ವರದಿ ಬುಧವಾರ ಬಂದಿದ್ದು, ಎಲ್ಲರ ವರದಿ ನೆಗೆಟಿವ್ ಬಂದಿದೆ. ಈ ಸಂಬಂಧ ಪ್ರತಿಕ್ರಿಯಿಸಿದ ಬೊಮ್ಮನಹಳ್ಳಿ ಜಂಟಿ ಆಯುಕ್ತ ರಾಮಕೃಷ್ಣ ಅವರು, ಬೊಮ್ಮನಹಳ್ಳಿ ವಲಯದ ವಸಂತಪುರದ ಸಿರಿ ಎಂಬೆಸಿ ಎಂಬ ಅಪಾರ್ಟ್‌ಮೆಂಟ್‌ನಲ್ಲಿ ವಾಸವಿದ್ದ ತಾಯಿ ಮತ್ತು ಮಗುವಿಗೆ ರೂಪಾಂತರ ಕೊರೊನಾ ಸೋಂಕು ದೃಢಪಟ್ಟಿತ್ತು. ಇವರ ಪ್ರಾಥಮಿಕ ಸಂಪರ್ಕದಲ್ಲಿದ್ದ 11 ಹಾಗೂ ದ್ವಿತೀಯ ಸಂಪರ್ಕದಲ್ಲಿದ್ದ 22 ಜನರ ಕೊರೊನಾ ಸೋಂಕು ಪರೀಕ್ಷಾ ವರದಿ ನೆಗೆಟಿವ್ ಬಂದಿದ್ದು, ಅಪಾರ್ಟ್‌ಮೆಂಟ್ ಸುತ್ತಮುತ್ತಲಿನ ಪ್ರದೇಶದಲ್ಲಿ ವಾಸವಿರುವವರನ್ನು ಕೊರೊನಾ ಸೋಂಕು ಪರೀಕ್ಷೆಗೆ ಒಳಪಡಿಸುತ್ತಿದ್ದೇವೆಂದರು.

ದಕ್ಷಿಣ ವಲಯದ ಜೆ.ಪಿ.ನಗರದ 3ನೇ ಹಂತದ 34 ವರ್ಷದ ವ್ಯಕ್ತಿಗೆ ಸಹ ರೂಪಾಂತರ ದೃಢಪಟ್ಟಿತ್ತು. ಇವರ ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕದಲ್ಲಿದ್ದ ಐವರನ್ನು ಪರೀಕ್ಷೆಗೆ ಒಳಪಡಿಸಲಾಗಿದ್ದು, 5 ಜನರ ಪರೀಕ್ಷಾ ವರದಿ ನೆಗೆಟಿವ್ ಬಂದಿದೆ ಎಂದು ದಕ್ಷಿಣ ವಲಯದ ಜಂಟಿ ಆಯುಕ್ತ ವೀರಭದ್ರ ಸ್ವಾಮಿ ತಿಳಿಸಿದ್ದಾರೆ.

ರೂಪಾಂತರ ಕೊರೊನಾ ಸೋಂಕು ದೃಢಪಟ್ಟ ವ್ಯಕ್ತಿ ಡಿ.19ಕ್ಕೆ ಆಸ್ಪತ್ರೆಗೆ ದಾಖಲಾಗಿದ್ದಾರೆ. ಇವರ ಪ್ರಾಥಮಿಕ ಸಂಪರ್ಕದಲ್ಲಿದ್ದ ಕ್ಯಾಬ್ ಚಾಲಕನನ್ನು ಪ್ರತ್ಯೇಕವಾಗಿ ಕ್ವಾರಂಟೈನ್ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.



**ಜೆ.ಪಿ.ನಗರದಲ್ಲಿ ರೂಪಾಂತರ ಕೊರೊನಾ ಸೋಂಕು ದೃಢಪಟ್ಟ ವ್ಯಕ್ತಿಯ ಮನೆಯ ಮುಂದೆ ಪಾಲಿಕೆ ವತಿಯಿಂದ ಭಿತ್ತಿಪತ್ರ ಅಂಟಿಸಿರುವುದು.**

**ಜೆ.ಪಿ.ನಗರದಲ್ಲಿ ಸುರಕ್ಷತಾ ಕ್ರಮ:** ಮಂಗಳವಾರ ಜೆ.ಪಿ.ನಗರದ ವ್ಯಕ್ತಿಗೆ ರೂಪಾಂತರ ಕೊರೊನಾ ಸೋಂಕು ದೃಢಪಟ್ಟರೂ, ಪಾಲಿಕೆಯ ಆರೋಗ್ಯಾಧಿಕಾರಿಗಳು ಯಾವುದೇ ಮುಂಜಾಗ್ರತಾ ಕ್ರಮ ಕೈಗೊಂಡಿರಲಿಲ್ಲ, ಪ್ರಕರಣವನ್ನು ಮುಚ್ಚಿ ಹಾಕುವ ಪ್ರಯತ್ನ ಮಾಡಿದ್ದರು. ಈ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾದ ನಂತರ ಬುಧವಾರ ಸೋಂಕು ದೃಢಪಟ್ಟ ವ್ಯಕ್ತಿಯ ಮನೆಯವರನ್ನು ಹೋಂ ಕ್ವಾರಂಟೈನ್ ಮಾಡಿದ್ದು, ಮನೆಗೆ ಹೋಂಕ್ವಾರಂಟೈನ್‌ಗೆ ಒಳಪಟ್ಟಿದ್ದಾರೆ ಎಂಬ ಭಿತ್ತಿಪತ್ರ ಅಂಟಿಸಿದ್ದಾರೆ.

## ಪಾಲಿಕೆ ಅಧಿಕಾರಿಗಳ ಸಭೆ

**ಬೆಂಗಳೂರು:** ಮೂವರಿಗೆ ಕೊರೊನಾ ರೂಪಾಂತರ ಸೋಂಕು ದೃಢಪಟ್ಟ ಹಿನ್ನೆಲೆಯಲ್ಲಿ ಅಗತ್ಯ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಿ ಎಂದು ಆಡಳಿತಾಧಿಕಾರಿ ಗೌರವ್‌ಗುಪ್ತ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಮಂಗಳವಾರ ಮೂವರಿಗೆ ರೂಪಾಂತರ ಕೊರೊನಾ ಸೋಂಕು ದೃಢಪಟ್ಟ ಹಿನ್ನೆಲೆ ಬುಧವಾರ ಸಂಜೆ ಪಾಲಿಕೆ ಕೇಂದ್ರ ಕಚೇರಿಯಲ್ಲಿ ಎಲ್ಲ ವಲಯದ ಜಂಟಿ ಆಯುಕ್ತರೊಂದಿಗೆ ಸಭೆ ನಡೆಸಿದರು. ಬ್ರಿಟನ್‌ನಿಂದ ಬೆಂಗಳೂರಿಗೆ ಬಂದಿರುವವರಲ್ಲಿ ಒಟ್ಟು 18 ಸೋಂಕು ದೃಢಪಟ್ಟಿದ್ದು, ಇವರ ಸಂಪರ್ಕದಲ್ಲಿದ್ದ 54 ಪ್ರಾಥಮಿಕ ಸಂಪರ್ಕಿತರು, 92 ದ್ವಿತೀಯ ಸಂಪರ್ಕಿತರು ಪತ್ತೆಯಾಗಿದ್ದಾರೆ. ದ್ವಿತೀಯ, ಪರೋಕ್ಷ ಸಂಪರ್ಕದಲ್ಲಿರುವವರನ್ನು ಸಾಂಸ್ಥಿಕ ಕ್ವಾರಂಟೈನ್ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

### ಒಂದು ದಿನದ ನಂತರ ಸಭೆ

ಮಂಗಳವಾರ ಮಧ್ಯಾಹ್ನದ ವೇಳೆಗೆ ಕೊರೊನಾ ಸೋಂಕು ದೃಢಪಟ್ಟಿತ್ತು. ಆದರೆ, ಬಿಬಿಎಂಪಿ ಆಡಳಿತಾಧಿಕಾರಿ ಗೌರವ್‌ಗುಪ್ತ ಮತ್ತು ಪಾಲಿಕೆ ಅಧಿಕಾರಿಗಳು ಬುಧವಾರ ಸಂಜೆ ಸಭೆ ನಡೆಸಿ ಸ್ಪಷ್ಟೀಕರಣ ನೀಡಿದ್ದಾರೆ. ರೂಪಾಂತರ ಕೊರೊನಾ ಸೋಂಕಿನ ತೀವ್ರತೆ ಬಗ್ಗೆ ಸಾರ್ವಜನಿಕರಲ್ಲಿ ಆತಂಕದ ವಾತಾವರಣ ಸೃಷ್ಟಿಯಾಗಿದ್ದರೂ, ಪಾಲಿಕೆ ಅಧಿಕಾರಿಗಳು ತುರ್ತಾಗಿ ಸ್ಪಂದಿಸದಿರುವುದು ಹಾಗೂ ಜೆ.ಪಿ.ನಗರದಲ್ಲಿ ಒಂದು ದಿನದ ನಂತರ ಸೋಂಕಿತರ ಸಂಪರ್ಕದಲ್ಲಿದ್ದವರನ್ನು ಕ್ವಾರಂಟೈನ್ ಮಾಡಿರುವುದು ಇದೀಗ ಚರ್ಚೆಗೆ ಗ್ರಾಸವಾಗಿದೆ.

ರೂಪಾಂತರ ಕೊರೊನಾದ ಬಗ್ಗೆ ಜನ ಆತಂಕಕ್ಕೆ ಒಳಗಾಗಬೇಕಿಲ್ಲ, ಅಗತ್ಯ ಮುಂಜಾಗ್ರತ ಕ್ರಮಕೈಗೊಳ್ಳಿ ಎಂದರು. ಸಭೆಯಲ್ಲಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ರಾಜೇಂದ್ರ ಚೋಳನ್, ವಲಯ ಜಂಟಿ ಆಯುಕ್ತರಾದ ಕೆ.ಆರ್.ಪಲ್ಲವಿ, ಅಶೋಕ್, ವೀರಭದ್ರ ಸ್ವಾಮಿ, ರಾಮಕೃಷ್ಣ ಶಿವಸ್ವಾಮಿ, ವೆಂಕಟಾ ಚಲಪತಿ, ನರಸಿಂಹಮೂರ್ತಿ, ಪಾಲಿಕೆ ಮುಖ್ಯ ಆರೋಗ್ಯಾಧಿಕಾರಿ ಡಾ.ವಿಜೇಂದ್ರ ಮತ್ತಿತರರಿದ್ದರು.



ಉದಯವಾಣಿ
ಜನಮನದ ಜೀವನಾಡಿ

# ಬೆಂಗಳೂರು ಮಾಸ್ಟರ್ ಪ್ಲಾನ್-2035ಕ್ಕೆ ಚಾಲನೆ

**ಬೆಂಗಳೂರು:** ಬಹುನಿರೀಕ್ಷಿತ 'ಬೆಂಗಳೂರು ಮಾಸ್ಟರ್ ಪ್ಲಾನ್-2035'ರ ಸಿದ್ಧತೆಗೆ ಚಾಲನೆ ದೊರಕಿದ್ದು, ಬಿಬಿಎಂಪಿಗೆ ಸೇರ್ಪಡೆಗೊಂಡ ಹೊಸ ಪ್ರದೇಶಗಳಿಗೂ ಅನ್ವಯ ಆಗುವಂತೆ ಈ ಮಹಾಯೋಜನೆಯು ಕರಡು ಸಿದ್ಧಗೊಳ್ಳಲಿದೆ. ಈ ಹಿಂದೆ ಹಲವು ಬಾರಿ ಎಲ್ಲರೂ ಸೇರಿ ಒಂದು ಉತ್ತಮವಾದ ಮಾಸ್ಟರ್ ಪ್ಲಾನ್ ಅನ್ನು ಸಿದ್ಧಪಡಿಸಿದ್ದರೂ ಅದರ ಜಾರಿಯಲ್ಲಿ ಹಿಂದೆಬಿದ್ದಿದ್ದೇವೆ. ಈ ಕಾರಣದಿಂದಾಗಿ ಅವೈಜ್ಞಾನಿಕ ರೀತಿಯಲ್ಲಿ ಬೆಳವಣಿಗೆ ಕಾಣುತ್ತಿದ್ದೇವೆ. ಈ ಹಿನ್ನೆಲೆಯಲ್ಲಿ ಇಂತಹ ಲೋಪಗಳು ಮರುಕಳಿಸದಂತೆ ಎಚ್ಚರವಹಿಸಿ 2035ರ ಮಹಾಯೋಜನೆಯನ್ನು ಸಿದ್ಧಪಡಿಸಲಾಗುತ್ತಿದೆ ಎಂದು ಬಿಡಿಎ ಅಧ್ಯಕ್ಷ ಎಸ್.ಆರ್.ವಿಶ್ವನಾಥ್ ತಿಳಿಸಿದರು. ಬೆಂಗಳೂರು ನಗರದ ಉಸ್ತುವಾರಿ ಹೊಂದಿರುವ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಸೂಚನೆ ಮೇರೆಗೆ ಮಾಸ್ಟರ್ ಪ್ಲಾನ್ ಸಿದ್ಧಪಡಿಸುವ ಸಂಬಂಧಿತ

ಉದಯವಾಣಿ
ಜನಮನದ ಜೀವನಾಡಿ

# ರಸ್ತೆಗಳಿಗೆ ಮುಸ್ಲಿಮರ ಹೆಸರಿಡದಂತೆ ಆಗ್ರಹ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯ ಪಾದರಾಯನಪುರ ವಾರ್ಡ್‌ನ ಮುಖ್ಯ ರಸ್ತೆ, ಅಡ್ಡ ರಸ್ತೆಗಳಿಗೆ ಮುಸಲ್ಮಾನ್ ವ್ಯಕ್ತಿಗಳ ಹೆಸರು ಇಡದಂತೆ ಉತ್ತರ ಕನ್ನಡ (ಕೆನರಾ)ಅನಂತಕುಮಾರ್ ಹೆಗಡೆ ಆಗ್ರಹಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿ, ಪಾದರಾಯನಪುರ ವಾರ್ಡ್‌ನಲ್ಲಿ ಕೇವಲ ಮುಸಲ್ಮಾನರ ಹೆಸರು ಶಿಫಾರಸ್ಸು ಮಾಡಿ ಸಮಾಜ ಸೇವಕರ ಹೆಸರಿನಲ್ಲಿ ಕೋಮು ವೈಭವೀಕರಣ ಸರಿಯಲ್ಲ, ಬಿಬಿಎಂಪಿಯ ಈ ನಿರ್ಧಾರದಿಂದ ಸಾಮರಸ್ಯಕ್ಕೆ ಧಕ್ಕೆಯಾಗುತ್ತದೆ. ಬಿಬಿಎಂಪಿ ಮಾದರಿಯಲ್ಲಿ ಬಹು ಸಂಖ್ಯಾತ ಬಾಹುಳ್ಯವುಳ್ಳ ನಗರ ಸಭೆ, ಪುರಸಭೆ ಹಾಗೂ ಪಪಂಗಳು ಇದೇ ರೀತಿ ತೀರ್ಮಾನ ತೆಗೆದುಕೊಂಡರೆ ಪರಿಸ್ಥಿತಿ ಊಹಿಸಲು ಕಷ್ಟವಾಗಲಿದೆ.



ಬಿಬಿಎಂಪಿ ನಿರ್ಧಾರ ಬೇಜವಾಬ್ದಾರಿ ತನದ ಪರಮಾವಧಿಯಾಗಿದ್ದು, ಹಾಗೇನಾದರೂ ರಸ್ತೆಗಳಿಗೆ ಹೆಸರನ್ನು ಇಡಲೇಬೇಕಾದ ಅನಿವಾರ್ಯತೆ ಇದ್ದರೆ, ಸ್ವಾತಂತ್ರ್ಯ ಯೋಧರ, ರಾಷ್ಟ್ರ ಕಂಡ ಮಹಾನ್ ವ್ಯಕ್ತಿಗಳ, ದೇಶಕ್ಕಾಗಿ ಹೋರಾಡಿದ ಸೈನಿಕರ ಹೆಸರು ಇಡುವಂತೆ ಸಲಹೆ ನೀಡಿದ್ದಾರೆ.

ಸಂಯುಕ್ತ ಕರ್ನಾಟಕ

## ಬ್ರಿಟನ್‌ನಿಂದ ಬಂದು ನಾಪತ್ತೆ । ಪರೀಕ್ಷೆಗೆ ಗಂಟಲು ದ್ರವ ಸಂಗ್ರಹ

# ಅಂತೂ 202 ಮಂದಿ ಪತ್ತೆ

**ಸಂ.ಕ.ಸಮಾಚಾರ ಬೆಂಗಳೂರು**

ಬ್ರಿಟನ್‌ನಿಂದ ಬೆಂಗಳೂರಿಗೆ ಆಗಮಿಸಿ ತಲೆಮರೆಸಿಕೊಂಡಿದ್ದ 202 ಮಂದಿಯನ್ನು ಪೊಲೀಸ್ ಇಲಾಖೆ ಸಹಕಾರದೊಂದಿಗೆ ಆರೋಗ್ಯ ಇಲಾಖೆ ಪತ್ತೆ ಮಾಡಿದೆ.

ಡಿ.1ರಿಂದ 21ರವರೆಗೆ ಬ್ರಿಟನ್‌ನಿಂದ 1456 ಮಂದಿ ಆಗಮಿಸಿದ್ದರು. ಇವರಲ್ಲಿ 1290 ಮಂದಿಗೆ ಕೊರೊನಾ ಪರೀಕ್ಷೆ ಮಾಡಲಾಗಿತ್ತು. ಆದರೆ, 202 ಮಂದಿ ನಾಪತ್ತೆಯಾಗಿದ್ದರು. ಇವರ ಫೋನ್‌ಗಳು ಸ್ವಿಚ್ ಆಫ್ ಆಗಿದ್ದವು. ಸರ್ಕಾರ ಇವರ ಪತ್ತೆಗೆ ನಾನಾ ರೀತಿಯ ಕ್ರಮಗಳನ್ನು ಕೈಗೊಂಡಿದ್ದರೂ ನಾಪತ್ತೆಯಾದವರು ಎಲ್ಲಿದ್ದೇವೆ ಎಂದು ತಿಳಿಸಿರಲಿಲ್ಲ. ಕೊನೆಗೆ ಬ್ರಿಟನ್‌ನಿಂದ ಬಂದವರ ವಿಳಾಸ ಪತ್ತೆ ಮಾಡಿದ್ದಲ್ಲದೆ, ತಂತ್ರಜ್ಞಾನ ಮೂಲಕ ತಲೆಮರೆಸಿಕೊಂಡಿರುವವರು ಎಲ್ಲಿದ್ದಾರೆ ಎಂಬುದನ್ನು ಪತ್ತೆ ಮಾಡಿ ಅವರೆಲ್ಲರಿಗೂ ಕೊರೊನಾ ಪರೀಕ್ಷೆ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ.

ಈ ಕುರಿತು ಬಿಬಿಎಂಪಿ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ. ವಿಜೇಂದ್ರ ಮಾಹಿತಿ ನೀಡಿ, ಬ್ರಿಟನ್‌ನಿಂದ ಬೆಂಗಳೂರು ನಗರಕ್ಕೆ ಆಗಮಿಸಿ ನಾಪತ್ತೆಯಾಗಿದ್ದ 202 ಮಂದಿಯನ್ನೂ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಸಹಯೋಗದಲ್ಲಿ ಎಲ್ಲರನ್ನೂ ಪತ್ತೆ ಮಾಡಲಾಗಿದ್ದು, ಕೋವಿಡ್ ಪರೀಕ್ಷೆಗೆ ಗಂಟಲು ದ್ರವ ಸಂಗ್ರಹಿಸುವ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

ಅವರ ವಿಳಾಸ ಹಾಗೂ ಮೊಬೈಲ್ ಸಂಖ್ಯೆಯನ್ನು ಪೊಲೀಸ್ ಇಲಾಖೆ ಪಾಲಿಕೆಗೆ ನೀಡಿದೆ. ಮುಖ್ಯವಾಗಿ ಅವರನ್ನು ಈಗ ಕೊರೊನಾ ಪರೀಕ್ಷೆಗೆ ಒಳಪಡಿಸಬೇಕಾಗಿದೆ. ತದನಂತರ ಅವರು ಉದ್ದೇಶ ಪೂರ್ವಕವಾಗಿ ನಾಪತ್ತೆಯಾಗಿದ್ದಾರಾ ಎಂಬುದನ್ನು ತನಿಖೆ ನಡೆಸಿ ನಂತರ ಕ್ರಮ ತೆಗೆದುಕೊಳ್ಳಲಾಗುವುದು ಎಂದು ವಿವರಿಸಿದರು.

ಬ್ರಿಟನ್‌ನಿಂದ ವಾಪಸ್ ಬಂದವರ ಪೈಕಿ 17 ಮಂದಿಗೆ ಸೋಂಕು ಇರುವುದು ದೃಢಪಟ್ಟಿತ್ತು. ಈ ಸೋಂಕಿತರ ಸಂಪರ್ಕಿತರ ಪತ್ತೆ ಹಾಗೂ ಅವರನ್ನು ಸೋಂಕು ಪರೀಕ್ಷೆಗೆ ಒಳಪಡಿಸುವ ಕಾರ್ಯ ಮುಂದುವರೆದಿದೆ. ಜತೆಗೆ ಅವರನ್ನು ಕ್ವಾರಂಟೈನ್‌ಗೆ ಒಳಪಡಿಸುವುದು ಮತ್ತು ನಿಗಾ ವಹಿಸಲು ವಲಯ ಆರೋಗ್ಯಾಧಿಕಾರಿಗಳಿಗೆ ನಿರ್ದೇಶಿಸಲಾಗಿದೆ ಎಂದರು.

## ಸಂಪರ್ಕಿತರೆಲ್ಲರಿಗೂ ನೆಗೆಟಿವ್



**ಬೆಂಗಳೂರು:** ಬ್ರಿಟನ್‌ನಿಂದ ಬಂದು ರೂಪಾಂತರ ಕೊರೊನಾ ಸೋಂಕು ದೃಢಪಟ್ಟಿದ್ದವರ ಪ್ರಾಥಮಿಕ ಸಂಪರ್ಕದಲ್ಲಿದ್ದ 38 ಮಂದಿಗೆ ನೆಗೆಟಿವ್ ವರದಿ ಬಂದಿದ್ದು ಇದರಿಂದ ನಗರದ ಜನತೆ ನಿರಾಳವಾಗುವಂತಾಗಿದೆ. ಬ್ರಿಟನ್‌ನಿಂದ ಬೆಂಗಳೂರಿಗೆ ಡಿ.19ಕ್ಕೆ ಬಂದಿರುವ ಮೂವರಲ್ಲಿ ಮಂಗಳವಾರ ರೂಪಾಂತರ ಕೊರೊನಾ ದೃಢಪಟ್ಟಿತ್ತು. ಇವರ ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕದಲ್ಲಿದ್ದ ಒಟ್ಟು 38 ಜನರನ್ನು ಮಂಗಳವಾರ ಸಂಜೆ ಸೋಂಕು ಪರೀಕ್ಷೆಗೆ ಒಳಪಡಿಸಲಾಗಿತ್ತು. ಇವರ ವರದಿ ಬುಧವಾರ ಬಂದಿದ್ದು, ಯಾರಿಗೂ ಸೋಂಕು ದೃಢಪಟ್ಟಿಲ್ಲ. ದಕ್ಷಿಣ ವಲಯದ ಜೆ.ಪಿ.ನಗರದ ಮೂರನೇ ಹಂತದ 34 ವರ್ಷದ ವ್ಯಕ್ತಿಗೆ ಸಹ ರೂಪಾಂತರ ದೃಢಪಟ್ಟಿತ್ತು. ಇವರ ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕದಲ್ಲಿದ್ದ ಐವರನ್ನು ಸೋಂಕು ಪರೀಕ್ಷೆಗೆ ಒಳಪಡಿಸಲಾಗಿದ್ದು ಐದು ಜನರ ಕೊರೊನಾ ಸೋಂಕು ಪರೀಕ್ಷಾ ವರದಿ ನೆಗೆಟಿವ್ ಬಂದಿದೆ ಎಂದು ದಕ್ಷಿಣ ವಲಯದ ಜಂಟಿ ಆಯುಕ್ತ ವೀರಭದ್ರಸ್ವಾಮಿ ತಿಳಿಸಿದ್ದಾರೆ.

> “ಬೊಮ್ಮನಹಳ್ಳಿ ವಲಯದ ವಸಂತಪುರದ ಸಿರಿ ಎಂಬೆಸಿ ಎಂಬ ಅಪಾರ್ಟ್‌ಮೆಂಟ್‌ನಲ್ಲಿ ವಾಸವಿದ್ದ ತಾಯಿ ಮತ್ತು ಮಗುವಿಗೆ ರೂಪಾಂತರ ಕೊರೊನಾ ಸೋಂಕು ದೃಢಪಟ್ಟಿತ್ತು. ಇವರ ಪ್ರಾಥಮಿಕ ಸಂಪರ್ಕದಲ್ಲಿದ್ದ 11 ಹಾಗೂ ದ್ವಿತೀಯ ಸಂಪರ್ಕದಲ್ಲಿದ್ದ 22 ಜನರ ಕೊರೊನಾ ಸೋಂಕು ಪರೀಕ್ಷಾ ವರದಿ ನೆಗೆಟಿವ್ ಬಂದಿದ್ದು ಅಪಾರ್ಟ್‌ಮೆಂಟ್ ಸುತ್ತಮುತ್ತಲಿನ ಪ್ರದೇಶದಲ್ಲಿ ವಾಸವಿರುವವರನ್ನು ಸೋಂಕು ಪರೀಕ್ಷೆಗೆ ಒಳಪಡಿಸುತ್ತಿದ್ದೇವೆ. ಅಪಾರ್ಟ್‌ಮೆಂಟ್ ಸೀಲ್‌ಡೌನ್ ಮಾಡಿರುವುದರಿಂದ ಒಳಗಿರುವವರಿಗೆ ಆಹಾರ ಮತ್ತು ಅಗತ್ಯ ವಸ್ತುಗಳು ಕಲ್ಪಿಸಲು ಸ್ವಯಂ ಸೇವಕರ ಮೂಲಕ ಸೇವೆ ನೀಡಲಾಗುತ್ತಿದೆ.
>
> ■ **ರಾಮಕೃಷ್ಣ** । ಬೊಮ್ಮನಹಳ್ಳಿ ಜಂಟಿ ಆಯುಕ್ತ

ಸಂಯುಕ್ತ ಕರ್ನಾಟಕ

### ಮದ್ಯ ಸೇವಿಸಿ ವಾಹನ ಓಡಿಸಿದರೆ ಜೋಕೆ | ಮೇಲ್ಸೇತುವೆಗಳು ಸಂಪೂರ್ಣ ಬಂದ್

# ರಾತ್ರಿ 8ರಿಂದ ವಾಹನ ಸಂಚಾರ ನಿರ್ಬಂಧ

**ಸಂ.ಕ.ಸಮಾಚಾರ ಬೆಂಗಳೂರು**

ಕೊರೊನಾ ಭೀತಿಯ ಹಿನ್ನೆಲೆಯಲ್ಲಿ ಹೊಸ ವರ್ಷಾಚರಣೆ ವೇಳೆ ಹೆಚ್ಚು ಜನ ಸೇರದಂತೆ ತಡೆಯಲು ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ, ರೆಸಿಡೆನ್ಸಿ ರಸ್ತೆ, ಚರ್ಚ್‌ಸ್ಟ್ರೀಟ್‌ಗಳಲ್ಲಿ ಗುರುವಾರ ರಾತ್ರಿ (ಡಿ.31) 8 ಗಂಟೆಯಿಂದ ಜ.1ರ ಬೆಳಗ್ಗೆ 6 ಗಂಟೆಯವರೆಗೆ ವಾಹನ ಸಂಚಾರವನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ.



ಹೋಟೆಲ್‌ಗಳಿಗೆ ಹೋಗಬೇಕಾದರೂ ಕೂಡ ಹೋಟೆಲ್‌ನಲ್ಲಿ ಮೊದಲೇ ಬುಕ್ಕಿಂಗ್ ಮಾಡಿಕೊಂಡಿರಬೇಕು. ಪೊಲೀಸರು ಬುಕ್ಕಿಂಗ್ ಪಾಸ್ ಇಲ್ಲದವರನ್ನು ಈ ರಸ್ತೆಗಳ ಬಳಿ ಹೋಗಲು ಬಿಡುವುದಿಲ್ಲ. ಹಾಗೆ ಈ ಸ್ಥಳಗಳಿಗೆ ಹೋಗಬೇಕಾದರೆ 5 ಕಡೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಬುಕ್ಕಿಂಗ್ ಇಲ್ಲದವರಿಗೆ ಯಾವುದೇ ರೀತಿಯಾದ ಅನುಮತಿ ಇರುವುದಿಲ್ಲ. ಇದರ ನಡುವೆಯೂ ನಿಷೇಧಿತ ರಸ್ತೆಗಳಲ್ಲಿ ಪಾರ್ಟಿಗಳಿಗೆ ಹೋಗುವವರು ವಾಹನಗಳನ್ನು ಬಿಟ್ಟು, ನಡೆದು ಹೋಗಬಹುದು ಎಂದು ಪತ್ರಿಕಾಗೋಷ್ಠಿಯಲ್ಲಿ ಸಂಚಾರಿ ಜಂಟಿ ಪೊಲೀಸ್ ಆಯುಕ್ತ ರವಿಕಾಂತೇಗೌಡ ವಿವರಿಸಿದರು.

ಹೊಸವರ್ಷದ ನೆಪದಲ್ಲಿ ಮದ್ಯ ಸೇವಿಸಿ ವಾಹನ ಚಾಲನೆ ಮಾಡುವವರ ವಿರುದ್ಧವೂ ಸಹ ಕಾನೂನು ಕ್ರಮ ಕೈಗೊಳ್ಳಲಾಗುವುದು. ಒಂದು ವೇಳೆ ಮದ್ಯ ಸೇವಿಸಿರುವುದು ತಿಳಿದುಬಂದರೆ ವೈದ್ಯಕೀಯ ತಪಾಸಣೆಗೆ ಒಳಪಡಿಸಲಾಗುವುದು ಎಂದ ಅವರು, ಮೋಜು ಹೆಸರಿನಲ್ಲಿ ಕೆಲವರು ಬೈಕ್‌ರೇಸ್, ವ್ಹೀಲಿಂಗ್ ಮಾಡುತ್ತಾರೆ. ಅಂತಹವರ ಮೇಲೆ ಹದ್ದಿನ ಕಣ್ಣಿಡಲಾಗಿದೆ ಹಾಗೂ 191 ಕಡೆ ನಾಕಾಬಂದಿ ಹಾಕಲಾಗುವುದು, 2 ಸಾವಿರಕ್ಕೂ ಹೆಚ್ಚು ಪೊಲೀಸ್‌ರನ್ನು ನಿಯೋಜಿಸಲಾಗುತ್ತಿದೆ. ಸುಮಾರು 60 ಸೆಕ್ಟರ್, 668 ಚೆಕ್ ಪೋಸ್ಟ್ ಹಾಕಿ ಟ್ರಾಫಿಕ್ ಸಿಬ್ಬಂದಿ ಕರ್ತವ್ಯ ನಿರ್ವಹಿಸಲಿದ್ದಾರೆಂದು ತಿಳಿಸಿದರು. ರಾತ್ರಿ 10 ಗಂಟೆಯಿಂದ ಮರುದಿನ ಬೆಳಗ್ಗೆ 6ಗಂಟೆಯವರೆಗೆ ಹೊರವಲಯ ಮತ್ತು ಒಳವಲಯದ ಎಲ್ಲಾ ಫ್ಲೈಓವರ್‌ಗಳನ್ನು ಬಂದ್ ಮಾಡಲಾಗುತ್ತದೆ. ಪ್ರಮುಖವಾಗಿ ಏರ್‌ಪೋರ್ಟ್, ಎಲಿವೇಟೆಡ್ ರಸ್ತೆಗಳನ್ನು ಮುಚ್ಚಲಾಗುತ್ತದೆ. ಪ್ರತಿಯೊಬ್ಬರೂ ಫ್ಲೈಓವರ್ ಕೆಳಗಡೆ ಇರುವ ರಸ್ತೆಗಳನ್ನು ಬಳಕೆ ಮಾಡಬೇಕಾಗಿದೆ ಎಂದು ಹೇಳಿದರು.

- ಎರಡು ಸಾವಿರ ಪೊಲೀಸರ ನಿಯೋಜನೆ
- ಡ್ರ್ಯಾಗ್ ರೇಸ್–ವ್ಹೀಲಿಂಗ್‌ಗಿಲ್ಲ ಅವಕಾಶ
- ಪ್ರಮುಖ ರಸ್ತೆಗಳಲ್ಲಿ ಸಿಸಿಟಿವಿಗಳ ಅಳವಡಿಕೆ
- ಹೋಟೆಲ್‌ಗಳಿಗೆ ಹೋಗಲು ಪಾಸ್ ಕಡ್ಡಾಯ
- ನಗರದ 191 ಕಡೆ ನಾಕಾಬಂದಿ

## ವಾಹನ ನಿಲುಗಡೆ ನಿಷೇಧ ಎಲ್ಲೆಲ್ಲಿ

ಕಬ್ಬನ್‌ರಸ್ತೆ, ರೆಸಿಡೆನ್ಸಿರಸ್ತೆ, ಇನ್‌ಫೆಂಟ್ರಿ ರಸ್ತೆ, ಬ್ರಿಗೇಡ್‌ರಸ್ತೆ, ಚರ್ಚ್ ಸ್ಟ್ರೀಟ್, ಮ್ಯೂಸಿಯಂ ರಸ್ತೆ, ಸೇಂಟ್‌ಮಾರ್ಕ್ ರಸ್ತೆ, ಮ್ಯಾಗ್ರತ್ ರಸ್ತೆ, ಕಮಿಷನರೇಟ್ ರಸ್ತೆ, ಇಂದಿರಾನಗರ 100 ಅಡಿ ರಸ್ತೆ, ರೆಸ್ಟ್ ಹೌಸ್‌ರಸ್ತೆ, ಡಿಸ್ಪೆನ್ಸರಿ ರಸ್ತೆ.

ಸಂಯುಕ್ತ ಕರ್ನಾಟಕ

# ಪಾಲಿಕೆಯ 64 ಶಾಲೆಗಳ ಆರಂಭಕ್ಕೆ ಸಿದ್ಧತೆ

**ಸಂ.ಕ.ಸಮಾಚಾರ ಬೆಂಗಳೂರು**

ಕಳೆದ ಎಂಟು ತಿಂಗಳಿನಿಂದ ಮುಚ್ಚಲಾಗಿದ್ದ ಶಾಲೆಗಳು ಜ.1ರಿಂದ ಆರಂಭವಾಗಲಿದ್ದು ಇದಕ್ಕಾಗಿ ಬಿಬಿಎಂಪಿ 64 ಶಾಲಾ–ಕಾಲೇಜುಗಳು ಎಲ್ಲ ಸಿದ್ಧತೆಗಳನ್ನು ಮಾಡಿಕೊಂಡಿವೆ.

ಶಾಲೆ ಆರಂಭಿಸಲು ಸರ್ಕಾರ ಸೂಚಿಸಿರುವ ಹಿನ್ನೆಲೆಯಲ್ಲಿ ಒಂದು ವಾರದಿಂದ ಸ್ವಚ್ಛತೆ, ಸ್ಯಾನಿಟೈಸಿಂಗ್ ಮತ್ತು ಶಿಕ್ಷಕರಿಗೆ ಕೋವಿಡ್ ಪರೀಕ್ಷೆ ಮಾಡಿಸಲಾಗುತ್ತಿದೆ ಎಂದು ಬಿಬಿಎಂಪಿ ಶಿಕ್ಷಣ ವಿಭಾಗದ ಸಹಾಯಕ ಆಯುಕ್ತ ನಾಗೇಂದ್ರನಾಯ್ಕ ತಿಳಿಸಿದ್ದಾರೆ.



ಬಿಬಿಎಂಪಿಯ 33 ಪ್ರೌಢಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ, 15 ಕಾಲೇಜುಗಳಲ್ಲಿ ಪದವಿ ಪೂರ್ವ ತರಗತಿಗಳನ್ನು ಆರಂಭಿಸಲಾಗುತ್ತಿದೆ. ಪ್ರತಿ ಕೊಠಡಿಗೆ 15 ರಿಂದ 20 ವಿದ್ಯಾರ್ಥಿಗಳನ್ನು ಕೂರಿಸಲು ಆಸನ ವ್ಯವಸ್ಥೆ ಮಾಡಲಾಗಿದೆ. ಜತೆಗೆ, 16 ಪ್ರಾಥಮಿಕ ಶಾಲೆಗಳಲ್ಲಿ 6 ಮತ್ತು 7ನೇ ತರಗತಿ ಮಕ್ಕಳಿಗೆ ವಿದ್ಯಾಗಮ ತರಗತಿ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಎಲ್ಲ ಮಕ್ಕಳಿಗೆ ಕಡ್ಡಾಯ ಮಾಸ್ಕ್ ಧರಿಸುವಿಕೆ, ವ್ಯಕ್ತಿಗತ ಅಂತರ ಪಾಲನೆ ಮತ್ತು ಸ್ಯಾನಿಟೈಸರ್ ಬಳಸಿ ಕೈಗಳ ಸ್ವಚ್ಛತೆ ಬಗ್ಗೆ ಮಕ್ಕಳಿಗೆ ಜಾಗೃತಿ ಮೂಡಿಸಲು ದೈಹಿಕ ಶಿಕ್ಷಕರಿಗೆ ತರಬೇತಿ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಕಳೆದ ಎಂಟು ತಿಂಗಳಿಂದ ಬಾಗಿಲು ಮುಚ್ಚಿದ್ದರಿಂದ ಹೆಚ್ಚು ಕಸ ಬಿದ್ದಿತ್ತು. ಹೀಗಾಗಿ ಒಂದು ವಾರದಿಂದ ಸ್ವಚ್ಛತೆ ಮಾಡುತ್ತಿದ್ದು, ಈಗ ಎಲ್ಲ ಕೊಠಡಿಗಳಿಗೂ ಸೋಂಕು ನಿವಾರಕ ದ್ರಾವಣ ಸಿಂಪಡಿಸಲಾಗಿದೆ. ಎಲ್ಲ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಕೋವಿಡ್ ಪರೀಕ್ಷೆ ಮಾಡಿಸಲಾಗುತ್ತಿದ್ದು, ನೆಗೆಟಿವ್ ವರದಿ ಇದ್ದರೆ ಮಾತ್ರ ಶಾಲೆ ಪ್ರವೇಶಕ್ಕೆ ಅವಕಾಶ ನೀಡಲಾಗುತ್ತದೆ ಎಂದರು.

ಸಂಯುಕ್ತ ಕರ್ನಾಟಕ

# ಆತಂಕ ದೂರ ಮಾಡಲು ಸೂಚನೆ

ಸಂ.ಕ.ಸಮಾಚಾರ ಬೆಂಗಳೂರು

ರೂಪಾಂತರ ಕೊರೊನಾದಿಂದ ನಗರದ ಜನತೆ ಆತಂಕಗೊಳ್ಳುವಂತೆ ಮಾಡದೇ ಅವರಲ್ಲಿ ಧೈರ್ಯ ತುಂಬುವ ಕಾರ್ಯ ಮಾಡಿ ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ ರೂಪಾಂತರ ಕೊರೊನಾ ಸೋಂಕು ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ಜನರು ಆತಂಕಿತರಾಗಿದ್ದಾರೆ. ಈ ಬಗ್ಗೆ ಅವರಲ್ಲಿ ಅರಿವು ಮೂಡಿಸಿ ಇದು ಅಪಾಯಕಾರಿಯಲ್ಲ ಎಂದು ಮನದಟ್ಟು ಮಾಡಬೇಕು. ಸೋಂಕು ವೇಗವಾಗಿ ಹರಡುವುದನ್ನು ಬಿಟ್ಟರೆ ಅಪಾಯ ಉಂಟು ಮಾಡುವುದಿಲ್ಲ ಎಂದು ಜಾಗೃತಿ ಮೂಡಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರೂಪಾಂತರ ಕೊರೊನಾ ತ್ವರಿತವಾಗಿ ಹರಡಲಿದೆ. ಆದರೆ ಯಾವುದೇ ಅಪಾಯವಿಲ್ಲ. ಆದ್ದರಿಂದ ಯಾರೊಬ್ಬರೂ ಭಯಪಡುವ ಅಗತ್ಯವಿಲ್ಲ. ಎಲ್ಲರೂ ಸರಿಯಾಗಿ ಮಾಸ್ಕ್ ಧರಿಸುವುದು, ಕೈಗಳಿಗೆ ಆಗಿಂದಾಗ್ಗೆ ಸ್ಯಾನಿಟೈಸರ್ ಹಾಕುವುದು ಹಾಗೂ ಕೈಗಳನ್ನು ತೊಳೆಯುವುದು ಮಾಡಬೇಕು. ನಾಗರಿಕರು ಆತಂಕಕ್ಕೊಳಗಾಗುವುದನ್ನು ಕಡಿಮೆ ಮಾಡುವ ಸಂಬಂಧ ಹೆಚ್ಚು ಅರಿವು ಮೂಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲು ಎಲ್ಲಾ ವಲಯ ಆರೋಗ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ರೂಪಾಂತರ ಕೊರೊನಾ ಸೋಂಕು ಹರಡದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಸೋಂಕು ಹೆಚ್ಚು ಪ್ರಮಾಣದಲ್ಲಿ ಹರಡದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ರೂಪಾಂತರ ಕೊರೊನಾ ಯಾವ ವಲಯದಲ್ಲಿ ಎಷ್ಟು ಪ್ರಕರಣಗಳು ಕಂಡುಬಂದಿವೆಯೋ ಅಂತಹ ಕಡೆ ಎಚ್ಚರಿಕೆ ವಹಿಸಿ ಎಂದು ಸೂಚಿಸಿದ್ದಾರೆ.

ಹೊಸ ದಿಗಂತ

ಹೊಸ ದಿಗಂತ

1

31 Dec 2020

## ಪಾದರಾಯನಪುರದ 11 ರಸ್ತೆಗಳಿಗೆ ಮುಸ್ಲಿಮರ ಹೆಸರು | ಅಂದು ಡಿಕೆಶಿ ತಂದೆ, ಇಂದು ಇಮ್ರಾನ್ ತಾತ

# ಮಹಾನಗರ ಪಾಲಿಕೆಯಿಂದ ಮುಸ್ಲಿಮರ ಮೆಹರ್ಬಾನಿ!

ದಿಗಂತ ವಿಶೇಷ

**ಬೆಂಗಳೂರು:** ನಗರದ ಫ್ಲೈಓವರ್ ಒಂದಕ್ಕೆ ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ಅವರ ಹೆಸರು ಇಡುವುದನ್ನೇ ಮಹಾ ಅಪರಾಧ ಎಂಬಂತೆ ದೊಡ್ಡ ವಿವಾದ ಎಬ್ಬಿಸಲಾಗಿತ್ತು. ಈಗ ಪಾದರಾಯನಪುರ ಪ್ರದೇಶದಲ್ಲಿ 11 ರಸ್ತೆಗಳಿಗೆ ಮುಸ್ಲಿಮರ ಹೆಸರಿಡಲು ಬೆಂಗಳೂರು ಮಹಾನಗರ ಪಾಲಿಕೆ ಸದ್ದಿಲ್ಲದೆ ಸಿದ್ಧತೆ ನಡೆಸಿದ್ದು, ಮಾಜಿ ಕಾರ್ಪೊರೇಟರ್ ತಾತನ ಹೆಸರೂ ಪಟ್ಟಿಯಲ್ಲಿದೆ.

ಪಾಲಿಕೆ ಅವಧಿ ಪೂರ್ಣಗೊಂಡು ಆಡಳಿತಾಧಿಕಾರಿಗಳ ದರ್ಬಾರ್ ಸಂದರ್ಭದಲ್ಲಿ ಇಂತಹ ಅಧಿಕಪ್ರಸಂಗ ನಡೆದಿದೆ. ಹಿಂದೆ ಕೌನ್ಸಿಲ್ ಸಭೆಯಲ್ಲಿ ಹೆಚ್ಚುವರಿ ಪಟ್ಟಿಗೆ ಅನುಮೋದನೆ ಪಡೆದುಕೊಂಡಿದ್ದ ಅಧಿಕಾರಿಗಳು, ಈಗ ಆ ಪ್ರಸ್ತಾಪವನ್ನು ಗುಟ್ಟಾಗಿ ಜಾರಿಗೆ ತರಲು ಮುಂದಾಗಿದ್ದಾರೆ.

ಇತ್ತೀಚಿನ ಕೊರೋನಾ ಸೋಂಕಿನ ಸಂದರ್ಭದಲ್ಲಿ ಕೊರೋನಾ ವಾರಿಯರ್ಸ್ ಮೇಲೆ ಹಲ್ಲೆ ಘಟನೆ ನಡೆದಿದ್ದು, ಪೊಲೀಸರ ಮೇಲೆಯೇ ದಾಳಿಗೆ ಮುಂದಾಗಿದ್ದು ಇನ್ನೂ ಜನರ ಮನಸಲ್ಲಿ ಹಸಿಯಾಗಿದೆ. ಇಂತಹ ಪ್ರದೇಶದ 11 ರಸ್ತೆಗಳಿಗೆ ಮುಸ್ಲಿಮರ ಹೆಸರಿಡಲು ಯೋಜಿಸಲಾಗಿದೆ. ಪೆಹಲ್ವಾನ್ ಫಾರೂಕ್ ಪಾಶ್ ಸಾಬ ಸರ್ಕಲ್, ಟೋಪಿ ರಫೀಕ್ ಸಾಬ್ ರಸ್ತೆ, ಹಾಜಿ ಹಬೀಬ್ ಸಾಬ್ ರಸ್ತೆ ಸಹಿತರ ಇತರ ಮಾರ್ಗಗಳು ಸೇರಿವೆ. 9



### ನಾಯಕರೇ ಈಗಲೂ ವಿರೋಧಿಸುವಿರಾ?

**ಯಲಹಂಕ ಮೇಲ್ಸೇತುವೆಗೆ ವೀರ ಸಾವರ್ಕರ್ ಹೆಸರಿಡಲು ಪ್ರತಿಪಕ್ಷ ನಾಯಕರಾದ ಸಿದ್ದರಾಮಯ್ಯ, ಕುಮಾರಸ್ವಾಮಿ ಹಾಗೂ ಡಿ.ಕೆ ಶಿವಕುಮಾರ್ ಭಾರಿ ವಿರೋಧ ವ್ಯಕ್ತಪಡಿಸಿದ್ದರು. ಹಲವೆಡೆ ಪ್ರತಿಭಟನೆ ನಡೆಸಿ ಸ್ವಾತಂತ್ರ್ಯ ಸೇನಾನಿಗೆ ಅಪಮಾನ ಮಾಡಿದ್ದರು. ಈಗ ಬಿಬಿಎಂಪಿ ಪಾದರಾಯನಪುರದಲ್ಲಿ ಒಂದೇ ಕೋಮಿಗೆ ಸೇರಿದ 11 ಜನ ಮುಸ್ಲಿಮರ ಹೆಸರು ಇಡುತ್ತಿದ್ದು, ಹಿಂದೂ ವ್ಯಕ್ತಿಯೊಬ್ಬರ ಹೆಸರನ್ನು ಇಡಲು ಶಿಫಾರಸು ಮಾಡುವರೇ ಎಂದು ನಾಗರಿಕರು ಪ್ರಶ್ನಿಸಿದ್ದಾರೆ.**

### ಯಾವ ರಸ್ತೆಗೆ ಯಾರ ಹೆಸರು?

ಪಾದರಾಯನಪುರ ವಾರ್ಡ್ ಸಂಖ್ಯೆ 135ರ ವ್ಯಾಪ್ತಿಯಲ್ಲಿ ಬರುವ ಅಡ್ಡರಸ್ತೆ ಹಾಗೂ ಮುಖ್ಯ ರಸ್ತೆಗಳಾದ ಎಚ್.ಎಂ.ರಸ್ತೆಗೆ ಪೆಹಲ್ವಾನ್ ಫಾರೂಕ್ ಪಾಶ್ ಸಾಬ ಸರ್ಕಲ್, 10ನೇ ಅಡ್ಡರಸ್ತೆಗೆ ಪೆಹಲ್ವಾನ್ ಫಾರೂಕ್ ಪಾಶ್ ಸಾಬ ರಸ್ತೆ, 7ನೇ ಅಡ್ಡರಸ್ತೆಗೆ ಟೋಪಿ ರಫೀಕ್ ಸಾಬ್ ರಸ್ತೆ, 7ನೇ ಮುಖ್ಯ ರಸ್ತೆಗೆ ರೋಷನ್ ಫಯಾಜ್ ಸಂಗಮ ಸರ್ಕಲ್, 8ನೇ ಮುಖ್ಯ ರಸ್ತೆಗೆ ಹಾಜಿ ಹಬೀಬ್ ಸಾಬ್ ರಸ್ತೆ, 11ನೇ ಸಿ ಅಡ್ಡರಸ್ತೆಗೆ ಹಾಜಿ ವಝೀರ್‌ಸಾಬ್‌ರಸ್ತೆ, 9ನೇ ಅಡ್ಡರಸ್ತೆ, ರೆಹ್ಮಾನಿಯಾ ಮಸೀದಿ ರಸ್ತೆಗೆ ಹಾಜಿ ಶಾಮೀರ್ ಸಾಬ್ ರಸ್ತೆ, 13ನೇ ಸಿ. ಅಡ್ಡರಸ್ತೆ ಹಾಜಿ ದಸ್ತಗೀರ್ ರಸ್ತೆ, 10ನೇ ಮುಖ್ಯ ರಸ್ತೆಗೆ ಹಾಜಿನೂರ್ ಸಾಬ್ ರಸ್ತೆ ಎಂದು ನಾಮಕರಣ ಮಾಡಲು ಬಿಬಿಎಂಪಿ ಪತ್ರಿಕಾ ಪ್ರಕಟಣೆ ಹೊರಡಿದೆ. ಆದರೆ,ಇದನ್ನು ಪ್ರಶ್ನೆ ಮಾಡಲು ಬಿಬಿಎಂಪಿಯಲ್ಲಿ ಯಾವುದೇ ಸದಸ್ಯರಿಲ್ಲ, ಆಡಳಿತಾಧಿಕಾರಿ ಬಿಬಿಎಂಪಿಯಲ್ಲಿ ಆಡಳಿತ ನಡೆಸುತ್ತಿದ್ದು, ಈ ಸಮಯದಲ್ಲಿ ಈ ರೀತಿ ನಿರ್ಣಯ ಕೈಗೊಳ್ಳುವುದು ಎಷ್ಟರ ಮಟ್ಟಿಗೆ ಸರಿ.

### ಅಂದು ಡಿಕೆಶಿ ತಂದೆ, ಇಂದು ಇಮ್ರಾನ್ ಪಾಷಾ ತಾತ

**ರಾಜರಾಜೇಶ್ವರಿ ನಗರದಲ್ಲಿ ಡಿ.ಕೆ. ಶಿವಕುಮಾರ ಅವರ ತಂದೆ ಹೆಸರಿಟ್ಟಿದ್ದ ಬಿಬಿಎಂಪಿ ಈಗ ಮಾಜಿ ಕಾರ್ಪೊರೇಟರ್ ಇಮ್ರಾನ್ ಪಾಷಾ ತಾತನ ಹೆಸರನ್ನು ರಸ್ತೆಗಿಡಲು ಮುಂದಾಗಿದೆ. ಕೊರೋನಾ ಸಮಯದಲ್ಲಿ ಪಾದರಾಯನಪುರ ವಾರ್ಡ್‌ನಲ್ಲಿ ಕ್ವಾರಂಟೈನ್ ಮಾಡಲು ಬಂದಿದ್ದ ವೈದ್ಯಕೀಯ ಸಿಬ್ಬಂದಿ ಹಾಗೂ ಪೊಲೀಸರ ಮೇಲೆ ದಾಳಿ ಮಾಡಿದವರಲ್ಲಿ ಮಾಜಿ ಕಾರ್ಪೊರೇಟರ್ ಇಮ್ರಾನ್ ಪಾಷಾ ಕಡೆಯವರು ಇದ್ದರು.** 9

ಹೊಸ ದಿಗಂತ 2
31 Dec 2020

# ಮಹಾನಗರ ಪಾಲಿಕೆಯಿಂದ ಮುಸ್ಲಿಮರ ಮೆಹರ್ಬಾನಿ!

ಅಚ್ಚರಿ ಎಂದರೆ ಈ ಹನ್ನೊಂದು ಮಂದಿ ಸಮಾಜ ಸೇವಕರು ಎಂದು ಬಿಬಿಎಂಪಿ ಸಮರ್ಥಿಸಿಕೊಂಡಿದೆ. ಆದರೆ, ಇವರಲ್ಲಿ ಕೆಲವರ ಮೇಲೆ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿವೆ. ಇಂತಹ ಹಿನ್ನೆಲೆಯುಳ್ಳವರ ಹೆಸರನ್ನು ಸಾರ್ವಜನಿಕ ರಸ್ತೆಗೆ ನಾಮಕರಣ ಮಾಡಲಾಗದು. ಒತ್ತಡಕ್ಕೆ ಮಣಿದು ಅಧಿಕಾರಿಗಳು ನಾಗರಿಕರ ವಿರೋಧ ಇದ್ದವರ ಹೆಸರನ್ನು ಇಡಲು ಮುಂದಡಿಯಿಟ್ಟಿರುವುದು ಅಚ್ಚರಿಗೆ ಕಾರಣವಾಗಿದೆ.

**ಕೊಡುಗೆಯಲ್ಲಿ ಹಿಂದೆ, ನಾಮಕರಣಕ್ಕೆ ಮುಂದು:** ಸಮಾಜಕ್ಕೆ ಸೇವಕರು ಎಂದು ಕರೆಸಿಕೊಳ್ಳಲು 10 ಮಂದಿಯಿಂದ ಬೆಂಗಳೂರಿಗೆ ಕೊಡುಗೆ ಏನು? ನಾಡು-ನುಡಿ ಕಟ್ಟಲು ಇವರ ದುಡಿಮೆ ಏನು? ಎಂಬ ಪ್ರಶ್ನೆ ಸಾರ್ವಜನಿಕರಲ್ಲಿದೆ. ಅವರ ಸಾಧನೆ ಏನು? ಎಂಬುದನ್ನಾದರೂ ಬಿಬಿಎಂಪಿ ಸಾರ್ವಜನಿಕರಿಗೆ ತಿಳಿಸಬೇಕು. ಸ್ವಾತಂತ್ರ್ಯ ನಂತರ ಪಾದರಾಯನಪುರಕ್ಕೆ ಮುಸ್ಲಿಮರನ್ನು ಬಿಟ್ಟರೆ ಬೇರೆ ಯಾರೂ ಕೊಡುಗೆಯನ್ನೇ ನೀಡಿಲ್ಲವೆ? ಮುಸ್ಲಿಮರು ಹೆಚ್ಚಿದ್ದಾರೆ ಎಂಬ ಕಾರಣಕ್ಕೆ ಅಲ್ಲಿನ ರಸ್ತೆಗಳಿಗೆಲ್ಲ ಮುಸ್ಲಿಮರ ಹೆಸರನ್ನೇ ಇಡಬೇಕು ಎಂದಾದರೆ ಹಿಂದೂಗಳು ಹೆಚ್ಚಿರುವ ಪ್ರದೇಶದಲ್ಲಿರುವ ಮುಸ್ಲಿಂ ನಾಯಕರ ಹೆಸರನ್ನು ತೆರವು ಮಾಡಿ ಎಂಬ ಬೇಡಿಕೆಯೂ ಮುಂದೆ ಕೇಳಬಹುದಲ್ಲವೆ? ಇಂತಹ ಸೂಕ್ಷ್ಮವನ್ನೆಲ್ಲ ಬಿಬಿಎಂಪಿ ಅಧಿಕಾರಿಗಳು ಮರೆತಿದ್ದಾರೆಯೇ ಎಂಬ ಅನುಮಾನ ಕಾಣುತ್ತಿದೆ.

## ಬಿಬಿಎಂಪಿ ಆಯುಕ್ತರಿಗೆ ಸಂಸದ ಹೆಗಡೆ ಪತ್ರ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ 135 ಪಾದರಾಯನಪುರ ವ್ಯಾಪ್ತಿಯಲ್ಲಿ ಬರುವ ಮುಖ್ಯ ಹಾಗೂ ಅಡ್ಡ ರಸ್ತೆಗಳಿಗೆ ಮುಸಲ್ಮಾನರ ಹೆಸರನ್ನು ನಾಮಕರಣ ಮಾಡದಂತೆ ಆಗ್ರಹಿಸಿ ಸಂಸದ ಅನಂತಕುಮಾರ್ ಹೆಗಡೆ ಅವರು ಬಿಬಿಎಂಪಿ ಆಯುಕ್ತರಿಗೆ ಪತ್ರ ಬರೆದಿದ್ದಾರೆ.

ಸಮಾಜ ಸೇವಕರ ಹೆಸರಿನಲ್ಲಿ ಕೋಮು ವೈಭವೀಕರಣ ಮಾಡುವುದು ಸರಿಯಲ್ಲ. ಪಾಲಿಕೆಯ ಈ ನಿರ್ಧಾರದಿಂದ ಸಮಾಜದಲ್ಲಿ ಕೋಮು ಸಾಮರಸ್ಯಕ್ಕೆ ಧಕ್ಕೆಯಾಗುತ್ತದೆ. ಒಂದು ಕೋಮಿನ ತುಷ್ಟೀಕರಣಕ್ಕಾಗಿ ಬಿಬಿಎಂಪಿ ಇಂತಹ ನಿರ್ಣಯ ಕೈಗೊಂಡಿದ್ದು ತಪ್ಪು. ಇದರ ಬದಲು ಸ್ವಾತಂತ್ರ್ಯಕ್ಕಾಗಿ ಹೋರಾಡಿದ ವೀರ ಯೋಧರ, ರಾಷ್ಟ್ರಕಂಡ ಮಹಾನ್ ವ್ಯಕ್ತಿಗಳ ಹೆಸರು ಇಡಲಿ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

> **ಸಮಾಜಕ್ಕೆ ಯಾವುದೇ ಕೊಡುಗೆ ನೀಡದಿರುವ ಇಮ್ರಾನ್ ಪಾಷ್ ತಾತನ ಹೆಸರಿಡಲು ಹೊರಟ್ಟಿದ್ದಾರೆ. ಬೆಂಗಳೂರನ್ನು ಪಾಕಿಸ್ತಾನ ಮಾಡಲು ನಾವು ಬಿಡುವುದಿಲ್ಲ. ಇಮ್ರಾನ್ ಪಾಷ್ ಬೆಂಗಳೂರಿನ ಓವೈಸಿಯಾಗಲು ಹೊರಟ್ಟಿದ್ದಾರೆ, ನಾಡು-ನುಡಿ, ಜಲ ಸಂಬಂಧಿಸಿದಂತೆ ಇವರ ಕೊಡುಗೆ ಏನು?**
>
> ■ ಎನ್.ಆರ್.ರಮೇಶ್,
> ಬೆಂಗಳೂರು ಜಿಲ್ಲಾ ಬಿಜೆಪಿ ಘಟಕ ಅಧ್ಯಕ್ಷ

## ಇಂದು ಇಮ್ರಾನ್ ಪಾಷಾ ತಾತ

ಈಗ ಇಮ್ರಾನ್ ತಾತನ ಹೆಸರನನ್ನು ಒಂದು ರಸ್ತೆಗೆ ಇಡಲು ಶಿಫಾರಸು ಮಾಡಲಾಗಿದೆ. ಹೆಸರು ನಾಮಕರಣ ಹಿಂದೆ ಸ್ಥಳೀಯ ಶಾಸಕ ಜಮೀರ್ ಬೆಂಬಲ, ಪ್ರೋತ್ಸಾಹವೂ ಇದೆ ಎಂದು ಮೂಲಗಳು ತಿಳಿಸಿವೆ.

ಹೊಸ ದಿಗಂತ



## ಬ್ರಿಟನ್‌ನಿಂದ ಬಂದಿರುವ ವ್ಯಕ್ತಿಗಳಿಗೆ ಮುಖ್ಯಮಂತ್ರಿ ಯಡಿಯೂರಪ್ಪ ಮನವಿ

# ಕಣ್ತಪ್ಪಿಸಿ ಓಡಾಡದೆ ಪರೀಕ್ಷೆ ಮಾಡಿಸಿಕೊಳ್ಳಿ

• ದಿಗಂತ ವರದಿ, ಬೆಂಗಳೂರು

ವಿದೇಶದಿಂದ ಕರ್ನಾಟಕಕ್ಕೆ ಬಂದಿರುವವರು ಸ್ವಯಂಪ್ರೇರಿತರಾಗಿ ಕೊರೋನಾ ಪರೀಕ್ಷೆ ಮಾಡಿಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮನವಿ ಮಾಡಿದರು.



ಬುಧವಾರ ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಬ್ರಿಟನ್‌ನಿಂದ ಕೊರೋನಾ ಸೋಂಕು ವೇಗವಾಗಿ ಹರಡುತ್ತಿದೆ. ಕಳೆದ ಎರಡು ತಿಂಗಳಿಂದೀಚೆಗೆ ಯುಕೆಯಿಂದ ಆಗಮಿಸಿರುವವರು ಕಡ್ಡಾಯವಾಗಿ ಕೋವಿಡ್ ಪರೀಕ್ಷೆಗೆ ಒಳಗಾಗಬೇಕು ಎಂದರು.

ಈಗಾಗಲೇ ಕೇಂದ್ರ ಆರೋಗ್ಯ ಇಲಾಖೆಯು ಕಟ್ಟೆಚ್ಚರ ವಹಿಸಿ, ಹೊರಗಿನಿಂದ ಬಂದವರನ್ನು ಚಾಚೂತಪ್ಪದೆ ಸರಿಯಾದ ರೀತಿ ಪರೀಕ್ಷೆ ಮಾಡಿ ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚನೆ ನೀಡಿದೆ.

ವಿದೇಶಗಳಿಂದ ಬಂದಿರುವವರು ಕಣ್ತಪ್ಪಿಸಿಕೊಂಡು ಓಡಾಡುವುದನ್ನು ಬಿಟ್ಟು, ಪರೀಕ್ಷೆ ಮಾಡಿಸಿಕೊಳ್ಳುವುದು ಒಳಿತು. ಈ ವೈರಾಣುವು ಬಹಳ ದೊಡ್ಡ ಪ್ರಮಾಣದಲ್ಲಿ ಹರಡುವ ಸಾಮರ್ಥ್ಯ ಇರುವುದರಿಂದ ತಡೆಗಟ್ಟಲು ಅನುಕೂಲ ಆಗಲಿದೆ. ಎರಡು ತಿಂಗಳಿನಿಂದ ಹೊರಗಿನಿಂದ ಬಂದವರು ಒಂದು ಬಾರಿ ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳಬೇಕು. ಇಲ್ಲದಿದ್ದರೆ ಬೇರೆಯವರಿಗೆ ತೊಂದರೆ ಆಗುತ್ತದೆ. ಅದಕ್ಕೆ ಅವಕಾಶ ಕೊಡದೆ ಕೊರೋನಾ ತಡೆಯುವುದಕ್ಕೆ ಸಹಕರಿಸಬೇಕು ಎಂದು ಮನವಿ ಮಾಡಿದರು.

**ಮಾರ್ಗಸೂಚಿ ಬದಲಾವಣೆ ಇಲ್ಲ:** ಕೊರೋನಾ ಸೋಂಕು ತಡೆ ಹಿನ್ನೆಲೆಯಲ್ಲಿ ಹಾಲಿ ಅನುಸರಿಸುತ್ತಿರುವ ಮಾರ್ಗಸೂಚಿ ಮುಂದುವರಿಯಲಿದೆ. ಸದ್ಯ ಮಾರ್ಗಸೂಚಿ ಬದಲಾವಣೆ ಇಲ್ಲ, ಕೇಂದ್ರದಿಂದ ಸೂಚನೆ ಬಂದಲ್ಲಿ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ವಿವರಿಸಿದರು.

### ಕೊರೋನಾ: 973 ಹೊಸ ಪ್ರಕರಣಗಳ ಪತ್ತೆ

ಬೆಂಗಳೂರು: ರಾಜ್ಯದಲ್ಲಿ 973 ಹೊಸದಾಗಿ ಕೋವಿಡ್ ಸೋಂಕಿತ ಪ್ರಕರಣಗಳು ಪತ್ತೆಯಾಗಿದ್ದು 1,217ಮಂದಿ ಆಸ್ಪತ್ರೆಯಿಂದ ಗುಣಮುಖರಾಗಿ ಬಿಡುಗಡೆಯಾಗಿದ್ದಾರೆ. ಇದುವರೆಗೆ ರಾಜ್ಯದಲ್ಲಿ 9,18,544 ಮಂದಿಗೆ ಕೊರೋನಾ ಸೋಂಕು ದೃಢವಾಗಿದ್ದು ಈ ಪೈಕಿ 11,610 ಸಕ್ರಿಯ ಪ್ರಕರಣಗಳಿವೆ. ಅಲ್ಲದೇ 202 ಮಂದಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಬುಧವಾರ 7 ಮಂದಿ ಕೊರೋನಾಗೆ ಬಲಿಯಾಗಿದ್ದು ಇದುವರೆಗೆ ಸಾವನಪ್ಪಿರುವವರ ಸಂಖ್ಯೆ 12,081ಕ್ಕೇರಿದೆ.

## ರಾತ್ರಿ ಕರ್ಫ್ಯೂ ಜಾರಿ ಮಾಡುವುದು ಉತ್ತಮ

ರೂಪಾಂತರ ಕೊರೋನಾ ಸೋಂಕು ಹೆಚ್ಚುತ್ತಿದ್ದು, ಇಡೀ ರಾಜ್ಯವನ್ನು ಲಾಕ್ ಡೌನ್ ಮಾಡುವ ಬದಲು ಸೋಂಕು ಹೆಚ್ಚಿರುವ ಜಿಲ್ಲೆಗಳಲ್ಲಿ ಮಾತ್ರ ರಾತ್ರಿ ಕರ್ಫ್ಯೂ ಜಾರಿ ಮಾಡಬಹುದು ಎಂದು ಕಂದಾಯ ಸಚಿವ ಆರ್.ಅಶೋಕ ಅಭಿಪ್ರಾಯಪಟ್ಟಿದ್ದಾರೆ.



ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬ್ರಿಟನ್‌ನಿಂದ ಬಂದ ಕೆಲವರಲ್ಲಿ ಬೇರೆ ಪ್ರಭೇದದ ಸೋಂಕು ಕಾಣಿಸಿಕೊಂಡಿದೆ.

ಇದು ವೇಗವಾಗಿ ಹರಡುವ ಸಾಧ್ಯತೆ ಇದೆ. ಹೀಗಾಗಿ ಜನರು ಎಚ್ಚರಿಕೆ ತೆಗೆದುಕೊಳ್ಳಬೇಕಾದ ಅಗತ್ಯವಿದೆ ಎಂದರು. ಹೊಸ ವರ್ಷಾಚರಣೆ ನೆಪದಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಸೋಂಕು ಹರಡುವ ಆತಂಕವೂ ಇದೆ. ಹಾಗೆಂದು ಇಡೀ ರಾಜ್ಯವನ್ನು ಲಾಕ್‌ಡೌನ್ ಮಾಡುವ ಪರಿಸ್ಥಿತಿ ಇಲ್ಲ.

ಯಾವ ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದ ಸೋಂಕು ಇದೆಯೋ ಅಂತಹ ಜಿಲ್ಲೆಗಳಿಗೆ ಅನ್ವಯ ಆಗುವಂತೆ ಕೊರೋನಾ ನಿಯಂತ್ರಣಕ್ಕಾಗಿ ಮತ್ತಷ್ಟು ನಿರ್ಬಂಧಗಳನ್ನು ಹೇರಬಹುದು. ರಾತ್ರಿ ಕರ್ಫ್ಯೂ ಜಾರಿಗೊಳಿಸಿದರೂ, ಕಾಟಾಚಾರಕ್ಕೆ ಮಾಡದೆ ರಿಯಲ್ ಸ್ಟೇಟ್ ಕರ್ಫ್ಯೂ ವಿಧಿಸಬೇಕು.

ಈ ಬಗ್ಗೆ ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ತೀರ್ಮಾನಿಸಲಾಗುವುದು ಎಂದರು.

**“ ರಾತ್ರಿ ಕರ್ಫ್ಯೂ ಮುಗಿದ ಅಧ್ಯಾಯ. ಈ ಸಂಬಂಧ ಸಿಎಂ ಸ್ಪಷ್ಟನೆ ನೀಡಿದ್ದಾರೆ. ಹೊಸ ವರ್ಷಾಚರಣೆಯನ್ನು ಬಿಗಿಯಾಗಿ ಮತ್ತು ಸರಳವಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಗೃಹ ಇಲಾಖೆಗೆ ಸಲಹೆ-ಸೂಚನೆ ನೀಡಲಾಗಿದೆ.**

■ ಡಾ.ಕೆ. ಸುಧಾಕರ್, ಆರೋಗ್ಯ ಸಚಿವ

## ರೂಪಾಂತರ ಕೊರೋನಾ ಸೋಂಕಿತರ ಸಂಖ್ಯೆ 7ಕ್ಕೆ ಏರಿಕೆ

• ದಿಗಂತ ವರದಿ, ಬೆಂಗಳೂರು

ರಾಜ್ಯದಲ್ಲಿ ರೂಪಾಂತರ ಕೊರೋನಾ ವೈರಾಣು ಸೋಂಕಿತರ ಸಂಖ್ಯೆ 7ಕ್ಕೇರಿದ್ದು, ಸಂಪರ್ಕಿತ ವ್ಯಕ್ತಿಗಳ ತಪಾಸಣೆ ನಡೆಸಿ ಸೀಕ್ವೆನ್ಸಿಂಗ್ ಮಾಡಲು ಆರೋಗ್ಯ ಇಲಾಖೆ ಮುಂದಾಗಿದೆ.

ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ 3 ಮಂದಿಗೆ ರೂಪಾಂತರಿ ಕೊರೋನಾ ಸೋಂಕಿದ್ದು, ಶಿವಮೊಗ್ಗದ 4 ಮಂದಿಗೆ ರೂಪಾಂತರಿ ವೈರಸ್ ಸೋಂಕಿರುವುದು ಪತ್ತೆಯಾಗಿದೆ.

ವಿದೇಶದಿಂದ ಭಾರತಕ್ಕೆ ಬಂದು ಆರ್‌ಟಿಪಿಸಿಆರ್ ಪರೀಕ್ಷೆಗೆ ಒಳಗಾದ 107 ಮಂದಿಯಲ್ಲಿ ಕೊರೋನಾ ವೈರಾಣು ಕಾಣಿಸಿಕೊಂಡಿದ್ದು, ದೇಶದ 10 ಅಧಿಕೃತ ಪ್ರಯೋಗಾಲಯಗಳಲ್ಲಿ ಜಿನೋಮಿಕ್ ಸೀಕ್ವೆನ್ಸ್ ಪರೀಕ್ಷೆಗೆ ಒಳಪಡಿಸಲಾಗಿದೆ.

ಈ ಪೈಕಿ 20 ಜನರಲ್ಲಿ ರೂಪಾಂತರ ಕೊರೋನಾ ಕಾಣಿಸಿಕೊಂಡಿದೆ. ಕರ್ನಾಟಕದಲ್ಲಿ ಕಳೆದ ಎರಡು ತಿಂಗಳಿನಿಂದ 2500 ಮಂದಿ ವಿದೇಶಗಳಿಂದ ಬಂದಿದ್ದು, 15 ದಿನದಿಂದೀಚೆಗೆ ಬಂದ 1614 ಜನರನ್ನು ಪರೀಕ್ಷೆಗೆ ಒಳಪಡಿಸಲಾಗಿದೆ.

27 ಮಂದಿಯಲ್ಲಿ ಪಾಸಿಟಿವ್ ಪತ್ತೆಯಾಗಿದ್ದು, ಬೆಂಗಳೂರಿನ ಮೂವರು ಹಾಗೂ ಶಿವಮೊಗ್ಗದ ನಾಲ್ವರಲ್ಲಿ ರೂಪಾಂತರ ಕೊರೋನಾ ಕಾಣಿಸಿಕೊಂಡಿದೆ.

**“ ರೂಪಾಂತರಗೊಂಡಿರುವ ವೈರಾಣುವಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಪ್ರತ್ಯೇಕ ಮಾರ್ಗಸೂಚಿ ಇದೆ. ಶೇ.70ರಷ್ಟು ಹರಡುವ ಗುಣ ಹೆಚ್ಚಿದೆ. ತೀವ್ರತೆ ಕಡಿಮೆ ಇರುತ್ತದೆ. ಹೀಗಾಗಿ ನಿಯಂತ್ರಿಸಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗುತ್ತಿದೆ.**

■ ಡಾ.ಕೆ. ಸುಧಾಕರ್, ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ




ಬೆಂಗಳೂರಿನಲ್ಲಿ 39 ಸಂಪರ್ಕಿತರನ್ನು ಪತ್ತೆ ಹಚ್ಚಿದ್ದು, ಎಲ್ಲರದ್ದೂ ನೆಗಟೀವ್ ಬಂದಿದೆ.

ಶಿವಮೊಗ್ಗದಲ್ಲಿ ನಾಲ್ವರು ಬಂದಿಳಿದ ಕೂಡಲೇ ಪರೀಕ್ಷೆಗೊಳಪಡಿಸಿದ್ದರಿಂದ 7 ಮಂದಿ ಮಾತ್ರ ಸಂಪರ್ಕಿತರಿದ್ದು, ಮೂವರಲ್ಲಿ ಪಾಸಿಟೀವ್ ಬಂದಿದೆ. ಇದು ರೂಪಾಂತರ ಕೊರೋನಾ ಹೌದೋ ಅಲ್ಲವೋ ಎಂಬುದಕ್ಕೆ ಜಿನೋಮಿಕ್ ಸೀಕ್ವೆನ್ಸ್ ಪರೀಕ್ಷೆ ನಡೆಯುತ್ತಿದೆ. ಅಲ್ಲದೇ ಸೋಂಕಿತರ ಪ್ರಾಥಮಿಕ ಮತ್ತು ದ್ವಿತೀಯ ಸಂಪರ್ಕಿತರನ್ನು ಸಾಂಸ್ಥಿಕ ಕ್ವಾರಂಟೈನ್ ಮಾಡಲಾಗುತ್ತಿದ್ದು, ಸಹಕರಿಸುವಂತೆ ಆರೋಗ್ಯ ಇಲಾಖೆ ಮನವಿ ಮಾಡಿದೆ.

ಹೊಸ ದಿಗಂತ

ಹೊಸ ದಿಗಂತ
12
31 Dec 2020

# ರೂಪಾಂತರ ಸೋಂಕು: ನಿಗಾಕ್ಕೆ ಸೂಚನೆ

**ಬೆಂಗಳೂರು:** ಬ್ರಿಟನ್‌ನಿಂದ ಬಂದವರ ಪೈಕಿ ನಗರದಲ್ಲಿ 18 ಮಂದಿಗೆ ಸೋಂಕು ದೃಢಪಟ್ಟಿದ್ದು, ಈ ಪೈಕಿ ಮೂರು ಮಂದಿಗೆ ರೂಪಾಂತರ ಕೊರೋನಾ ದೃಢಪಟ್ಟಿದೆ. ಈ ನಿಟ್ಟಿನಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಸೋಂಕು ಹೆಚ್ಚು ಪ್ರಮಾಣದಲ್ಲಿ ಹರಡದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತಾ ಎಲ್ಲಾ ವಲಯ ಜಂಟಿ ಆಯುಕ್ತರಿಗೆ ಸೂಚಿಸಿದ್ದಾರೆ.



ಬಿಬಿಎಂಪಿ ವ್ಯಾಪ್ತಿಯಲ್ಲಿ ರೂಪಾಂತರ ಕೊರೋನಾ ಬಂದಿರುವುದು ದೃಢಪಟ್ಟಿರುವ ಹಿನ್ನೆಲೆಯಲ್ಲಿ ಪಾಲಿಕೆ ಕೇಂದ್ರ ಕಛೇರಿಯಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ನಗರದಲ್ಲಿ ಮಂಗಳವಾರ 17 ಪ್ರಕರಣ ಹಾಗೂ ಬುಧವಾರ ಒಂದು ಪ್ರಕರಣ ಸೇರಿ 18 ಮಂದಿಗೆ ಸೋಂಕು ದೃಢಪಟ್ಟಿದ್ದು, 54 ಪ್ರಾಥಮಿಕ ಸಂಪರ್ಕಿತರು ಹಾಗೂ 92 ದ್ವಿತೀಯ ಸಂಪರ್ಕಿತರು ಪತ್ತೆಯಾಗಿದ್ದಾರೆ. ಸೋಂಕು ದೃಢಪಟ್ಟವರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಪ್ರಾಥಮಿಕ, ದ್ವಿತೀಯ ಸಂಪರ್ಕಿತರನ್ನು ಪಾಲಿಕೆ ವತಿಯಿಂದ ಗುರುತಿಸಿರುವ ಹೋಟೆಲ್ ಹಾಗೂ ರೆಸಿಡೆನ್ಸಿಗಳಲ್ಲಿ ಸಾಂಸ್ಥಿಕ ಗೃಹದಿಗ್ಬಂಧನದಲ್ಲಿರಿಸಲಾಗಿದೆ. ಬೊಮ್ಮನಹಳ್ಳಿ ಅಪಾರ್ಟ್‌ಮೆಂಟ್ ನಲ್ಲಿ ಇಬ್ಬರಿಗೆ ಸೋಂಕು ದೃಢಪಟ್ಟಿದ್ದು, ಅಪಾರ್ಟ್‌ಮೆಂಟ್ ನಲ್ಲಿಯೇ 33 ಮಂದಿಯನ್ನು ಸಾಂಸ್ಥಿಕ ಗೃಹದಿಗ್ಬಂಧನದಲ್ಲಿರಿಸಲಾಗಿದೆ ಎಂದರು.

## ಆತಂಕ ಕಡಿಮೆ ಮಾಡಿ

ರೂಪಾಂತರ ಕೊರೋನಾದಿಂದ ಜನರು ಹೆಚ್ಚು ಭಯಭೀತರಾಗಿದ್ದಾರೆ. ರೂಪಾಂತರ ಕೊರೋನಾ ತ್ವರಿತವಾಗಿ ಹರಡಲಿದೆ. ಆದರೆ ಯಾವುದೇ ಅಪಾಯವಿಲ್ಲ, ಆದ್ದರಿಂದ ಯಾರೊಬ್ಬರೂ ಭಯ ಪಡುವ ಅಗತ್ಯವಿಲ್ಲ. ಕೈಗಳಿಗೆ ಸ್ಯಾನಿಟೈಸರ್ ಹಾಕುವುದು ಹಾಗೂ ಕೈಗಳನ್ನು ತೊಳೆಯುವುದು ಮಾಡಬೇಕು. ನಾಗರಿಕರು ಆತಂಕಕ್ಕೊಳಗುವುದನ್ನು ಕಡಿಮೆ ಮಾಡುವ ಸಂಬಂಧ ಹೆಚ್ಚು ಅರಿವು ಮೂಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲು ಎಲ್ಲಾ ವಲಯ ಆರೋಗ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಹೊಸ ದಿಗಂತ

ಹೊಸ ದಿಗಂತ



31 Dec 2020

## ನಿಯಮ ಉಲ್ಲಂಘನೆಗೆ ಕಾದಿದೆ ತಕ್ಕ ಶಾಸ್ತಿ–ಪಾಲಿಕೆ ಸುತ್ತೋಲೆ

# ವರ್ಷಾಚರಣೆ: ಪಾರ್ಟಿಗೆ ಬ್ರೇಕ್

**ಬೆಂಗಳೂರು:** ನಗರದಲ್ಲಿ ರೂಪಾಂತರ ಕೊರೋನಾ ಸೋಂಕಿನ ಭೀತಿ ಹಿನ್ನೆಲೆಯಲ್ಲಿ ಈ ಬಾರಿ ಹೊಸ ವರ್ಷಾಚರಣೆ ವೇಳೆ ಜನ ಗುಂಪು ಸೇರುವುದನ್ನು ನಿರ್ಬಂಧಿಸಿ ಬಿಬಿಎಂಪಿ ಆಯುಕ್ತ ಮಂಜುನಾಥ್ ಪ್ರಸಾದ್ ಸುತ್ತೋಲೆ ಹೊರಡಿಸಿದ್ದಾರೆ.

ಹೊಸ ವರ್ಷಾಚರಣೆಯ ಸಂದರ್ಭದಲ್ಲಿ ಸಾಮೂಹಿಕ ಕೂಟ(ಪಾರ್ಟಿ) ಹಾಗೂ ದೊಡ್ಡ ಸಮಾರಂಭ ಆಚರಣೆಗಳನ್ನು ನಿಷೇಧಿಸಲಾಗಿದೆ. ಸಂಘಟನಾಕಾರರು ನಿಯಮ ಉಲ್ಲಂಘಿಸಿದರೆ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಕಾಯ್ದೆಯಡಿ ಕ್ರಮ ಕೈಗೊಳ್ಳಲಾಗುತ್ತದೆ.

ಹೋಟೆಲ್, ಕ್ಲಬ್, ಬಾರ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ವಿಶೇಷ ಸಂಘಟಿತ ಸಭೆ ಅಥವಾ ಟಿಕೆಟ್ ಪಡೆದ ಕಾರ್ಯಕ್ರಮಕ್ಕೆ ಅವಕಾಶ ಇರುವುದಿಲ್ಲ. ಮುಚ್ಚಿದ ಸ್ಥಳಗಳಲ್ಲಿ ಶೇ.50ರಷ್ಟು ಅಂದರೆ ಕೇವಲ 200 ಜನಕ್ಕೆ ಮಾತ್ರ ಅವಕಾಶ ನೀಡಬೇಕು. ಜನ ಒಟ್ಟುಗೂಡುವ ಯಾವುದೇ ರೀತಿಯ ಮನೋರಂಜನಾ ಕಾರ್ಯಕ್ರಮ ನಡೆಸುವಂತಿಲ್ಲ. ತೆರೆದ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಡಿಜೆ, ಡ್ಯಾನ್ಸ್ ಹಾಗೂ ವಿಶೇಷ ಒಟ್ಟುಗೂಡುವಿಕೆ ಕಾರ್ಯಕ್ರಮಕ್ಕೆ ನಿಷೇಧ ಹೇರಲಾಗಿದೆ. ಕ್ಲಬ್, ಬಾರ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ಪ್ರತಿನಿತ್ಯ ತೆರೆದಿರುವುದಕ್ಕೆ ಅನುಮತಿ ಇದ್ದರೂ, ಕೋವಿಡ್ ನಿಯಮಗಳ ಪಾಲನೆ ಕಡ್ಡಾಯ.



- ಸಾರ್ವಜನಿಕ ಸ್ಥಳಗಳಲ್ಲಿ ಡಿಜೆ, ಡ್ಯಾನ್ಸ್ ಮಾಡುವಂತಿಲ್ಲ
- ನಿಯಮ ಉಲ್ಲಂಘಿಸಿದರೆ ವಿಪತ್ತು ನಿರ್ವಹಣಾ ಕಾಯ್ದೆ ರೀತಿ ಕ್ರಮ
- ಒಳಾಂಗಣ ಕಾರ್ಯಕ್ರಮದಲ್ಲಿ 200 ಜನಕ್ಕೆ ಮಾತ್ರ ಅವಕಾಶ
- ಹೋಟೆಲ್‌ಗಳಲ್ಲಿ ಥರ್ಮಲ್ ಸ್ಕ್ಯಾನಿಂಗ್, ಸ್ಯಾನಿಟೈಸರ್ ಕಡ್ಡಾಯ

### ಗುಂಪು ಸೇರುವಂತಿಲ್ಲ

ಚರ್ಚ್ ಸ್ಟ್ರೀಟ್, ಎಂ.ಜಿ ರಸ್ತೆ, ಬ್ರಿಗೇಡ್ ರಸ್ತೆ ಹಾಗೂ ಈ ಪ್ರಮುಖ ರಸ್ತೆಗಳನ್ನು ಸಂಪರ್ಕಿಸುವ ಎಲ್ಲ ರಸ್ತೆಗಳ ಸಹಿತ ಕೋರಮಂಗಲ, ಇಂದಿರಾನಗರ ಹಾಗೂ ವೈಟ್‌ಫೀಲ್ಡ್ ರಸ್ತೆಗಳಲ್ಲಿ ಜನರು ಗುಂಪು ಸೇರುವಂತಿಲ್ಲ. ಕಾಂಟ್ಯಾಕ್ಟ್ ಲೆಸ್ ಸೇವೆ ಹಾಗೂ ಆನ್ ಲೈನ್ ಸೇವೆಗೆ ಒತ್ತು ನೀಡಬೇಕು. ಇ-ಟೋಕನ್ ನೀಡಬೇಕು. ಡಿ.30ರಿಂದ ಜ.2ರ ವರೆಗೆ ಎಲ್ಲ ರೀತಿಯ ವಿಶೇಷ ಸಣ್ಣ ಮತ್ತು ದೊಡ್ಡ ಔತಣ ಕೂಟ, ಕಾರ್ಯಕ್ರಮ ಹಾಗೂ ಸಭೆ-ಸಮಾರಂಭಗಳನ್ನು ಸಂಪೂರ್ಣ ನಿಷೇಧಿಸಲಾಗಿದೆ.

ಹೊಸ ದಿಗಂತ

# 765 ಸೋಂಕಿತರು ಆಸ್ಪತ್ರೆಯಿಂದ ಮನೆಗೆ

**ಬೆಂಗಳೂರು:** ನಗರದಲ್ಲಿ ಬುಧವಾರ 554 ಜನರಿಗೆ ಕೊರೋನಾ ಸೋಂಕು ದೃಢಪಟ್ಟಿದೆ. 765 ಸೋಂಕಿತರು ಆಸ್ಪತ್ರೆಯಿಂದ ಮನೆಗೆ ತೆರಳಿದ್ದು, ಐವರು ಮೃತರಾಗಿದ್ದಾರೆ. ನಗರದಲ್ಲಿ ಒಟ್ಟು 3,87,832 ಸೋಂಕಿತರು ದೃಢಪಟ್ಟಿದ್ದು, ಒಟ್ಟು 4,311 ಜನರು ಸೋಂಕಿಗೆ ಬಲಿಯಾಗಿದ್ದಾರೆ. ಇಲ್ಲಿಯವರೆಗೆ 3,75,986 ಜನರು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಕೋವಿಡ್-19ಕ್ಕೆ ಮೀಸಲಾದ ಆಸ್ಪತ್ರೆಗಳು, ಆರೋಗ್ಯ ಕೇಂದ್ರಗಳು ಹಾಗೂ ಆರೈಕೆ ಕೇಂದ್ರಗಳು ಒಳಗೊಂಡಂತೆ 7,534 ಜನ ಸಕ್ರಿಯ ಸೋಂಕಿತರು ಚಿಕಿತ್ಸೆ ಪಡೆಯುತ್ತಿದ್ದಾರೆ. ಬುಧವಾರದ ಬಿಬಿಎಂಪಿ ವರದಿಯಲ್ಲಿ 12,22,512 ಜನರನ್ನು ಪ್ರಾಥಮಿಕ ಸಂಪರ್ಕಿತರನ್ನು ಗುರುತಿಸಲಾಗಿದ್ದು, ದ್ವಿತೀಯ ಸಂಪರ್ಕಿತರನ್ನು 14,23,905

ಜನದನಿಯ ಸಾರಥಿ
ವಾರ್ತಾ ಭಾರತಿ

ವಾರ್ತಾ ಭಾರತಿ

# ರೂಪಾಂತರಿತ ಕೊರೋನ ಸೋಂಕಿನ ವೇಗ ಹೆಚ್ಚಿದೆ

ಬೆಂಗಳೂರು, ಡಿ.30: ರೂಪಾಂತರಿತ ಕೊರೋನ ಸೋಂಕಿನ ವೇಗ ಹೆಚ್ಚಿದ್ದು, ಅಧಿಕ ಮಂದಿಗೆ ಸೋಂಕು ತಗಲುವ ಸಾಧ್ಯತೆ ಇದೆ. ಹಾಗಾಗಿ, ಸೋಂಕಿತರ ಪ್ರಾಥಮಿಕ ಸಂಪರ್ಕದಲ್ಲಿದ್ದವರು ಕೂಡಲೇ ಪರೀಕ್ಷೆಗೆ ಒಳಪಡಬೇಕು ಎಂದು ಬಿಬಿಎಂಪಿ ಆಡಳಿತಾಧಿಕಾರಿ ಗೌರವ್ ಗುಪ್ತ ತಿಳಿಸಿದ್ದಾರೆ.

ಗೌರವ್ ಗುಪ್ತ



ಬುಧವಾರ ನಗರದ ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ರೂಪಾಂತರಿತ ಕೊರೋನ ಸೋಂಕಿನ ಪ್ರಕರಣ ಸಂಬಂಧ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಬ್ರಿಟನ್‌ನಿಂದ ಬೆಂಗಳೂರಿಗೆ ಆಗಮಿಸಿರುವ ಪ್ರಯಾಣಿಕರ ಪೈಕಿ ಮಂಗಳವಾರ 17 ಪ್ರಕರಣ ಬೆಳಕಿಗೆ ಬಂದರೆ, ಬುಧವಾರ ಒಂದು ಸಂಖ್ಯೆ ಹೆಚ್ಚಾಗಿದೆ. ಜತೆಗೆ, ಸೋಂಕಿತರೊಂದಿಗೆ ಪ್ರಾಥಮಿಕ ಸಂಪರ್ಕ ಹೊಂದಿದ್ದ 54 ಹಾಗೂ 92 ದ್ವಿತೀಯ ಸಂಪರ್ಕಿತರು ಪತ್ತೆಯಾಗಿದ್ದಾರೆ ಎಂದು ತಿಳಿಸಿದರು.

ಸೋಂಕು ದೃಢಪಟ್ಟವರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಪ್ರಾಥಮಿಕ, ದ್ವಿತೀಯ ಸಂಪರ್ಕಿತರನ್ನು ಪಾಲಿಕೆಯಿಂದ ಗುರುತಿಸಿರುವ  ಹೊಟೇಲ್, ರೆಸಿಡೆನ್ಸಿಗಳಲ್ಲಿ ಸಾಂಸ್ಥಿಕ ಗೃಹ ದಿಗ್ಬಂಧನದಲ್ಲಿರಿಸಲಾಗಿದೆ ಎಂದ ಅವರು, ಬೊಮ್ಮನಹಳ್ಳಿ ವಲಯದ ಅಪಾರ್ಟ್‌ಮೆಂಟ್‌ನಲ್ಲಿ  ಇಬ್ಬರಿಗೆ ರೂಪಾಂತರಿತ ಸೋಂಕು ದೃಢಪಟ್ಟಿದ್ದು, ಅಲ್ಲಿಯೂ 33 ಮಂದಿಯನ್ನು ಸಾಂಸ್ಥಿಕ ಗೃಹ ದಿಗ್ಬಂಧನದಲ್ಲಿರಿಸಲಾಗಿದೆ ಎಂದರು.

ನಗರದಲ್ಲಿ ರೂಪಾಂತರಿತ ಕೊರೋನ ಯಾವ ವಲಯದಲ್ಲಿ ಎಷ್ಟು ಪ್ರಕರಣಗಳು ಕಂಡುಬಂದಿವೆ ಎಂದು ಮಾಹಿತಿ ಪಡೆಯಲಾಗಿದ್ದು, ರಾಜ್ಯ ಸರಕಾರದ ಎಸ್‌ಒಪಿ ಪ್ರಕಾರ ನಿಯಮಗಳನ್ನು ಪಾಲನೆ ಮಾಡಿ ಸರಿಯಾಗಿ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ವಿವರಿಸಿದರು. ಈ ಸಂದರ್ಭದಲ್ಲಿ ಆರೋಗ್ಯ ವಿಭಾಗದ ವಿಶೇಷ ಆಯುಕ್ತ ರಾಜೇಂದ್ರ ಚೋಳನ್, ಜಂಟಿ ಆಯುಕ್ತರಾದ ಪಲ್ಲವಿ, ಅಶೋಕ್, ವೀರಭದ್ರಸ್ವಾಮಿ, ರಾಮಕೃಷ್ಣ, ಶಿವಸ್ವಾಮಿ, ವೆಂಕಟಾಚಲಪತಿ, ನರಸಿಂಹಮೂರ್ತಿ, ಮುಖ್ಯ ಆರೋಗ್ಯಾಧಿಕಾರಿ(ಆರೋಗ್ಯ) ಡಾ.ವಿಜೇಂದ್ರ ಸೇರಿದಂತೆ ಪ್ರಮುಖರಿದ್ದರು.

ಜನದನಿಯ ಸಾರಥಿ
ವಾರ್ತಾ ಭಾರತಿ

ಜನದನಿಯ ಸಾರಥಿ
ವಾರ್ತಾ ಭಾರತಿ

# ರಾಜ್ಯದಲ್ಲಿ 973 ಕೊರೋನ ಪ್ರಕರಣ ದೃಢ: 7 ಮಂದಿ ಸಾವು



ಬೆಂಗಳೂರು, ಡಿ.30: ರಾಜ್ಯದಲ್ಲಿ ಬುಧವಾರ 973 ಹೊಸ ಕೊರೋನ ಪ್ರಕರಣಗಳು ದೃಢವಾಗಿವೆ. 7 ಜನರು ಸೋಂಕಿಗೆ ಬಲಿಯಾಗಿದ್ದು, 1,217 ಜನರು ಗುಣಮುಖರಾಗಿದ್ದಾರೆ.

ರಾಜ್ಯದಲ್ಲಿ ಈಗಾಗಲೇ ಒಟ್ಟು ಸೋಂಕಿತರ ಸಂಖ್ಯೆ 9,18,544ಕ್ಕೆ ತಲುಪಿದ್ದು, 202 ಜನ ಸೋಂಕಿತರು ಐಸಿಯುನಲ್ಲಿದ್ದಾರೆ.

ಇಲ್ಲಿಯವರೆಗೆ ಒಟ್ಟು ಸಾವಿನ ಸಂಖ್ಯೆ 12,081ಕ್ಕೆ ತಲುಪಿದೆ. ಒಟ್ಟು ಸಕ್ರಿಯ ಕೊರೋನ ಪ್ರಕರಣ ಸಂಖ್ಯೆ 11,610ಕ್ಕೆ ಏರಿಕೆಯಾಗಿದ್ದು, ಸೋಂಕಿತರೆಲ್ಲ ಆಸ್ಪತ್ರೆ, ಕೊರೋನ ಕೇರ್ ಸೆಂಟರ್ ಹಾಗೂ ಮನೆಗಳಲ್ಲಿ ಚಿಕಿತ್ಸೆ ಮತ್ತು ಆರೈಕೆಯಲ್ಲಿದ್ದಾರೆ.

**7 ಸೋಂಕಿತರು ಬಲಿ:** ಬೆಂಗಳೂರು ನಗರ 5, ಧಾರವಾಡ 1, ಮೈಸೂರು ಜಿಲ್ಲೆಯಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ.

**ಎಲ್ಲೆಲ್ಲಿ ಎಷ್ಟು:** ರಾಜ್ಯದಲ್ಲಿ ಹೊಸದಾಗಿ 973 ಪ್ರಕರಣಗಳು ದೃಢವಾಗಿದ್ದು, ಅದರಲ್ಲಿ ಬಾಗಲಕೋಟೆ 8, ಬಳ್ಳಾರಿ 13, ಬೆಳಗಾವಿ 25, ಬೆಂಗಳೂರು ಗ್ರಾಮಾಂತರ 8, ಬೆಂಗಳೂರು ನಗರ 554, ಬೀದರ್ 7, ಚಾಮರಾಜನಗರ 12, ಚಿಕ್ಕಬಳ್ಳಾಪುರ 31, ಚಿಕ್ಕಮಗಳೂರು 8, ಚಿತ್ರದುರ್ಗ 19, ದಕ್ಷಿಣ ಕನ್ನಡ 31, ದಾವಣಗೆರೆ 8, ಧಾರವಾಡ 19, ಹಾಸನ 31, ಕಲಬುರಗಿ 17, ಕೊಡಗು 18, ಕೋಲಾರ 7, ಕೊಪ್ಪಳ 2, ಮಂಡ್ಯ 18, ಮೈಸೂರು 34, ರಾಯಚೂರು 3, ಶಿವಮೊಗ್ಗ 20, ತುಮಕೂರು 28, ಉಡುಪಿ 11, ಉತ್ತರ ಕನ್ನಡ 7, ವಿಜಯಪುರ 19, ಯಾದಗಿರಿ ಜಿಲ್ಲೆಯಲ್ಲಿ 4 ಪ್ರಕರಣ ಪತ್ತೆಯಾಗಿವೆ.

## ರಾಜಧಾನಿಯಲ್ಲಿ 554 ಕೊರೋನ ಪ್ರಕರಣ ದೃಢ

ರಾಜಧಾನಿಯಲ್ಲಿ ಬುಧವಾರ 554 ಜನರಿಗೆ ಕೊರೋನ ಸೋಂಕು ದೃಢಪಟ್ಟಿದೆ. 765 ಸೋಂಕಿತರು ಬಿಡುಗಡೆಯಾಗಿದ್ದು, 5 ಜನರು ಮೃತರಾಗಿದ್ದಾರೆ.

ನಗರದಲ್ಲಿ ಇಲ್ಲಿಯವರೆಗೆ ಒಟ್ಟು 3,87,832 ಕೊರೋನ ಸೋಂಕಿತರು ದೃಢಪಟ್ಟಿದ್ದು, 4,311 ಜನರು ಸೋಂಕಿಗೆ ಬಲಿಯಾಗಿದ್ದಾರೆ. 3,75,986 ಜನರು ಗುಣಮುಖರಾಗಿ ಬಿಡುಗಡೆಯಾಗಿದ್ದಾರೆ. ಕೋವಿಡ್ ನಿಗದಿತ ಆಸ್ಪತ್ರೆಗಳು ಹಾಗೂ ಆರೋಗ್ಯ ಕೇಂದ್ರಗಳು ಹಾಗೂ ಆರೈಕೆ ಕೇಂದ್ರಗಳಲ್ಲಿ ಸಕ್ರಿಯ ಸೋಂಕಿತರು ಚಿಕಿತ್ಸೆ ಪಡೆಯುತ್ತಿದ್ದಾರೆ.

Bengaluru Edition
Dec 31, 2020 Page No.2

ಜನದನಿಯ ಸಾರಥಿ
ವಾರ್ತಾ ಭಾರತಿ

ಜನದನಿಯ ಸಾರಥಿ
ವಾರ್ತಾ ಭಾರತಿ

# ರೂಪಾಂತರಿ ಕೊರೋನ ವೈರಸ್: ಪ್ರಯೋಗಾತ್ಮಕ ಚಿಕಿತ್ಸೆಗಳ ವಿವೇಚನಾರಹಿತ ಬಳಕೆಯ ವಿರುದ್ಧ ಐಸಿಎಂಆರ್ ಎಚ್ಚರಿಕೆ

ಹೊಸದಿಲ್ಲಿ,ಡಿ.30: ಕೋವಿಡ್-19ನ್ನು ಗುಣಪಡಿಸಲು ಪ್ರಯೋಗಾತ್ಮಕ ಚಿಕಿತ್ಸೆಗಳ ವಿವೇಚನಾರಹಿತ ಬಳಕೆಯ ವಿರುದ್ಧ ಎಚ್ಚರಿಕೆಯನ್ನು ನೀಡಿರುವ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ (ಐಸಿಎಂಆರ್)ಯು, ಅದು ವೈರಸ್‌ನ ತ್ವರಿತ ರೂಪಾಂತರಕ್ಕೆ ಕಾರಣವಾಗಬಹುದು ಎಂದು ತಿಳಿಸಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಐಸಿಎಂಆರ್ ಮಹಾ ನಿರ್ದೇಶಕ ಬಲರಾಮ ಭಾರ್ಗವ ಅವರು,'ಪ್ರತಿರಕ್ಷಣಾ ಒತ್ತಡದಿಂದ ವೈರಸ್‌ನಲ್ಲಿ ಮಾರ್ಪಾಡುಗಳಾಗಬಹುದು. ವೈರಸ್ ಮೇಲಿನ ಪ್ರತಿರಕ್ಷಣಾ ಒತ್ತಡವು ವಾತಾವರಣಕ್ಕೆ,ರೋಗಿಗೆ,ಚಿಕಿತ್ಸೆಗೆ ಅಥವಾ ಇತರ ವಿಧಿವಿಧಾನಗಳಿಗೆ ಸಂಬಂಧಿಸಿರಬಹುದು. ಆದ್ದರಿಂದ ನಾವು ವೈರಸ್‌ನ ಮೇಲೆ ಪ್ರತಿರಕ್ಷಣಾ ಒತ್ತಡವನ್ನುಂಟು ಮಾಡಬಾರದು ಎನ್ನುವುದು ವೈಜ್ಞಾನಿಕ ಸಮುದಾಯದ ಅಭಿಪ್ರಾಯಂದ'ಲ್ಲಿ ಯಂೂ ಮುಖ್ಯವಾಗಿದೆ 'ಎಂದರು.



ಪ್ರಯೋಗಾತ್ಮಕ ಚಿಕಿತ್ಸೆಗಳು ವೈರಸ್‌ನ ಮೇಲೆ ಭಾರೀ ಪ್ರತಿರಕ್ಷಣಾ ಒತ್ತಡವನ್ನುಂಟು ಮಾಡುತ್ತವೆ ಮತ್ತು ಇದು ವೈರಸ್ ಹೆಚ್ಚು ರೂಪಾಂತರಗೊಳ್ಳಲು ಕಾರಣವಾಗುತ್ತದೆ. ಹೀಗಾಗಿ ಯಶಸ್ವಿ ಎಂದು ಸಾಬೀತಾದ ಚಿಕಿತ್ಸಾ ಕ್ರಮಗಳನ್ನೇ ಕೋವಿಡ್-19 ಚಿಕಿತ್ಸೆಗೆ ಬಳಸಬೇಕು ಎಂದರು.

ಶೇ.70ರಷ್ಟು ಹೆಚ್ಚು ಸಾಂಕ್ರಾಮಿಕ ಎನ್ನಲಾಗಿರುವ ರೂಪಾಂತರಿ ಕೊರೋನ ವೈರಸ್ ಬ್ರಿಟನ್‌ನಿಂದ ಆರಂಭಗೊಂಡು ಡಝನ್‌ಗೂ ಅಧಿಕ ದೇಶಗಳಲ್ಲಿ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಭಾರ್ಗವರ ಈ ಹೇಳಿಕೆ ಹೊರಬಿದ್ದಿದೆ. ಭಾರತದಲ್ಲಿ ಈವರೆಗೆ 20 ಜನರಲ್ಲಿ ರೂಪಾಂತರಿ ಸೋಂಕು ಪತ್ತೆಯಾಗಿದೆ.

'ಕೋವಿಡ್-19ರಂತಹ ಶ್ವಾಸಕೋಶ ವೈರಸ್‌ಗಳಲ್ಲಿ ಆಗಾಗ್ಗೆ ಅಲ್ಪ ಮಾರ್ಪಾಡುಗಳು ಆಗಬಹುದು. ಇಂತ'ಹ ಹ'ಲವಾರ'ು ಮಾರ್ಪಾಡುಗಳು ಸಂಭವಿಸಿದರೆ ಅವು ಮುಖ್ಯವಾಗುತ್ತವೆ ಮತ್ತು ಈಗ ಬ್ರಿಟನ್‌ನಲ್ಲಿ ಸಂಭವಿಸಿರುವಂತೆ ಹೆಚ್ಚು ಪ್ರಸರಣ ಶಕ್ತಿಯನ್ನು ಹೊಂದಿರುವ ರೂಪಾಂತರಿ ತಳಿಗಳಾಗುತ್ತವೆ. ನಾವು ಭಾರತದಲ್ಲಿ ವೈರಸ್ ಮಾರ್ಪಾಡುಗಳಿಗಾಗಿ ಪರೀಕ್ಷೆಗಳನ್ನು ನಡೆಸುತ್ತಿದ್ದೇವೆಯಾದರೂ ಈ ವಿಷಯವು ಕಳವಳಕಾರಿಯಾಗಿದೆ'ಎಂದು ಭಾರ್ಗವ ಹೇಳಿದರು.

ರೂಪಾಂತರಿ ಕೊರೋನ ವೈರಸ್ ಅನ್ನು ನಿಭಾಯಿಸಲು ಹೆಚ್ಚಿನ ಬದಲಾವಣೆಗಳ ಅಗತ್ಯವಿಲ್ಲ. ಪ್ರಚಲಿತ ಮುನ್ನೆಚ್ಚರಿಕೆ ಕ್ರಮಗಳೇ ರೂಪಾಂತರಿ ಕೊರೋನ ವಿಷಯದಲ್ಲಿಯೂ ಕೆಲಸ ಮಾಡುತ್ತವೆ ಎಂದು ತಳಿವಿಜ್ಞಾನ ತಜ್ಞ ಹಾಗೂ ದಿಲ್ಲಿಯ ಕೌನ್ಸಿಲ್ ಆಫ್ ಸೈಂಟಿಫಿಕ್ ಆ್ಯಂಡ್ ಇಂಡಸ್ಟ್ರಿಯಲ್ ರೀಸರ್ಚ್-ಇನ್‌ಸ್ಟಿಟ್ಯೂಟ್ ಆಫ್ ಜೆನೊಮಿಕ್ಸ್ ಆ್ಯಂಡ್ ಇಂಟಿಗ್ರೇಟಿವ್ ಬಯಾಲಜಿಯ ನಿರ್ದೇಶಕ ಡಾ.ಅನುರಾಗ ಅಗರವಾಲ್ ಹೇಳಿದರೆ,ರೂಪಾಂತರಿ ಸೋಂಕಿಗಾಗಿ ಪರೀಕ್ಷೆ ಪ್ರಕ್ರಿಯೆಯಲ್ಲಿ ಯಾವುದೇ ಬದಲಾವಣೆ ಅಗತ್ಯವಿಲ್ಲ ಎಂದು ದಿಲ್ಲಿಯ ಮಣಿಪಾಲ ಆಸ್ಪತ್ರೆಯ ಕ್ಲಿನಿಕಲ್ ಮೈಕ್ರೋಬಯಾಲಜಿ ವಿಭಾಗದ ಮುಖ್ಯಸ್ಥ ಡಾ.ನವೀನ್ ಕುಮಾರ್ ತಿಳಿಸಿದರು.

ಸಂಜೆವಾಣಿ
1982

# ರಾಜ್ಯದ ಏಳು ಮಂದಿಗೆ ಬ್ರಿಟನ್ ಸೋಂಕು

## ಸೋಂಕಿತರ ಸಂಖ್ಯೆ ಹೆಚ್ಚಳ, ದೇಶ ಕಳವಳ



ಬೆಂಗಳೂರು,ಡಿ.30–ಬ್ರಿಟನ್‌ನಿಂದ ರಾಜ್ಯಕ್ಕೆ ಆಗಮಿಸಿರುವವರ ಪೈಕಿ ಇದುವರೆಗೂ 7 ಮಂದಿಯಲ್ಲಿ ರೂಪಾಂತರ ವೈರಸ್ ಇರುವುದು ದೃಢಪಟ್ಟಿದೆ. ಈ ರೂಪಾಂತರ ವೈರಸ್ ದೃಢಪಟ್ಟಿರುವವರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಹಾಗೆಯೆ ಅವರ ಸಂಪರ್ಕಿತರನ್ನು ಗುರುತಿಸಿ ಸಾಂಸ್ಥಿಕ ಕ್ವಾರಂಟೈನ್‌ಗೆ ಒಳಪಡಿಸಲಾಗಿದೆ ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ. ಕೆ. ಸುಧಾಕರ್ ಹೇಳಿದರು.

ಬ್ರಿಟನ್‌ನಿಂದ ರಾಜ್ಯಕ್ಕೆ ಬಂದವರ ಪೈಕಿ ಬೆಂಗಳೂರಿನಲ್ಲಿ 3 ಮಂದಿಗೆ, ಶಿವಮೊಗ್ಗದಲ್ಲಿ ನಾಲ್ವರಿಗೆ ರೂಪಾಂತರ ಕೊರೊನಾ ವೈರಸ್ ಇರುವುದು ದೃಢಪಟ್ಟಿದೆ. ಬೆಂಗಳೂರಿನಲ್ಲಿ ರೂಪಾಂತರ ವೈರಸ್ ದೃಢಪಟ್ಟಿರುವ ಮೂವರ ಸಂಪರ್ಕದಲ್ಲಿ 39 ಮಂದಿ ಇದ್ದು, ಇವರನ್ನೆಲ್ಲಾ ಕೊರೊನಾ ಪರೀಕ್ಷೆಗೆ ಒಳಪಡಿಸಲಾಗಿದ್ದು, ಇವರ ಕೊರೊನಾ ವರದಿ ನೆಗೆಟಿವ್ ಬಂದಿದೆ.

ಹಾಗೆಯೇ ಶಿವಮೊಗ್ಗಕ್ಕೆ ಬಂದಿದ್ದ ಬ್ರಿಟನ್ ಪ್ರಯಾಣಿಕರ ಪೈಕಿ 7 ಜನ ಸಂಪರ್ಕದಲ್ಲಿದ್ದು ಅವರನ್ನು ಸಹ ಕೊರೊನಾ ಪರೀಕ್ಷೆಗೆ ಒಳಪಡಿಸಿದಾಗ ಅವರಿಗೆ ಮೂವರಿಗೆ ಕೊರೊನಾ ದೃಢಪಟ್ಟಿದೆ ಎಂದರು.

ಈ ಕೊರೊನಾ ದೃಢಪಟ್ಟಿರುವ ಮೂವರನ್ನು ಜನೆಟಿಕ್ ಸೀಕ್ವೇನ್ಸ್ ಪರೀಕ್ಷೆಗೆ ಒಳಪಡಿಸಿ ಇವರಲ್ಲೂ ರೂಪಾಂತರ ವೈರಸ್ ಇದೆಯೇ, ಇಲ್ಲವೇ ಹಳೆಯ ವೈರಸ್ ಇದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲಾಗುವುದು ಎಂದರು.

ಸದ್ಯ ಈ ಎಲ್ಲ ಸಂಪರ್ಕಿತರನ್ನು ಸಾಂಸ್ಥಿಕ ಕ್ವಾರಂಟೈನ್‌ಗೆ ಒಳಪಡಿಸಲಾಗಿದೆ ಎಂದು ಸಚಿವ ಡಾ.ಕೆ. ಸುಧಾಕರ್ ಹೇಳಿದರು.

ಬ್ರಿಟನ್‌ನಿಂದ ರಾಜ್ಯಕ್ಕೆ ಇದುವರೆಗೂ ಬಂದಿದ್ದವರ ಪೈಕಿ 1614 ಪ್ರಯಾಣಿಕರನ್ನು ಕೊರೊನಾ ಪರೀಕ್ಷೆಗೆ ಒಳಪಡಿಸಲಾಗಿದ್ದು, ಅವರಲ್ಲಿ 26 ಮಂದಿಗೆ ಕೊರೊನಾ ಪಾಸಿಟಿವ್ ಬಂದಿತ್ತು .ಈ 26 ಮಂದಿಯನ್ನು ರೂಪಾಂತರ ವೈರಸ್ ಪತ್ತೆಗಾಗಿ ಜನೆಟಿಕ್ ಸೀಕ್ವೇನ್ಸ್ ಪರೀಕ್ಷೆಗೆ ಒಳಪಡಿಸಲಾಗಿತ್ತು. 26 ಮಂದಿಯಲ್ಲಿ 7 ಜನರಲ್ಲಿ ರೂಪಾಂತರ ವೈರಸ್ ದೃಢಪಟ್ಟಿದೆ ಎಂದರು.

(ಎರಡನೇ ಪುಟ ನೋಡಿ)

### 20 ಮಂದಿಗೆ ರೂಪಾಂತರ ಸೋಂಕು:

ಲಂಡನ್ನಿಂದ ಭಾರತಕ್ಕೆ ಬಂದ ಪ್ರಯಾಣಿಕರ ಪೈಕಿ ಸರಿಸುಮಾರು 20 ಮಂದಿಗೆ ರೂಪಾಂತರ ಕೊರೊನಾ ಸೋಂಕು ಕಾಣಿಸಿಕೊಂಡಿದೆ ಎಂದು ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ ತಿಳಿಸಿದೆ ದೆಹಲಿಯಲ್ಲಿ 8, ಕರ್ನಾಟಕದಲ್ಲಿ 7, ಕೊಲ್ಕೊತ್ತಾದಲ್ಲಿ 1, ಪುಣೆ 1, ಸಿಸಿಎಂಬಿ 2,ಐಜಿಐಬಿ 1 ಸೇರಿದಂತೆ ಒಟ್ಟು 20 ಜನರಿಗೆ ಹೊಸದಾಗಿ ರೂಪಾಂತರ ವೈರಸ್ ಸೋಂಕು ತಗುಲಿರುವುದು ದೃಢಪಟ್ಟಿದೆ.

ಸಂಜೆವಾಣಿ
1982

# ರಾಜ್ಯದ ಏಳು ಮಂದಿಗೆ ಬ್ರಿಟನ್ ಸೋಂಕು

ರೂಪಾಂತರ ವೈರಸ್ ಪ ತ್ತೆ ಂು ಾ ಗಿ ರು ವ ವ ರ ಸಂಪರ್ಕದಲ್ಲಿದ್ದವರು ಕಡ್ಡಾಯವಾಗಿ ಸಾಂಸ್ಥಿಕ ಕ್ವಾರಂಟೈನ್‌ಗೆ ಒಳಪಡಲೇಬೇಕಾಗುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ಪ್ರತಿಯೊಬ್ಬರು ಪಾಲಿಸಬೇಕು ಎಂದು ಅವರು ಹೇಳಿದರು.

ರೂಪಾಂತಾರ ವೈರಸ್ ತೀವ್ರ ಪರಿಣಾಮ ಹೊಂದಿಲ್ಲದೆ ಇದ್ದರೂ ಹರಡುವ ಪ್ರಮಾಣ ಶೇ. 70 ರಷ್ಟು ವೇಗ ಹೊಂದಿರುವುದರಿಂದ ರೋಗ ಹರಡುವುದನ್ನು ತಡೆಯಲು ಎಲ್ಲರನ್ನು ಸಾಂಸ್ಥಿಕ ಕ್ವಾರಂಟೈನ್‌ಗೆ ಒಳಪಡಿಸಲಾಗಿದೆ. ಆರಂಭದಲ್ಲೇ ರೋಗ ಹರಡುವಿಕೆಯನ್ನು ತಡೆಯಲೇಬೇಕು. ಹಾಗಾಗಿ ಅದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

ಬ್ರಿಟನ್‌ನಿಂದ ರಾಜ್ಯಕ್ಕೆ ಕಳೆದ 2 ತಿಂಗಳಲ್ಲಿ 2500 ಮಂದಿ ಬಂದಿದ್ದರು. ಇವರಲ್ಲಿ 1614 ಮಂದಿಯನ್ನು ತಪಾಸಣೆಗೆ ಒಳಪಡಿಸಲಾಗಿದೆ. ಉಳಿದವರನ್ನು ಪತ್ತೆಹಚ್ಚಿ ಅವರನ್ನು ತಪಾಸಣೆಗೆ ಒಳಪಡಿಸಿ ಎಂದು ಕೇಂದ್ರ ಸರ್ಕಾರ ಸೂಚನೆ ನೀಡಿದೆ. ಅದರಂತೆ ರಾಜ್ಯದ ಗೃಹ ಇಲಾಖೆ ಬ್ರಿಟನ್‌ನಿಂದ ಬಂದವರ ಪತ್ತೆಗೆ ಕ್ರಮ ಕೈಗೊಂಡಿದೆ. ಇಂತಹವರನ್ನು ಪತ್ತೆಹಚ್ಚಿ ಕೊರೊನಾ ತಪಾಸಣೆಗಾಗಿ ಆರೋಗ್ಯ ಇಲಾಖೆಯ ಸುಪರ್ದಿಗೆ ಒಳಪಡಿಸುವ ಕೆಲಸ ನಡೆದಿದೆ ಎಂದರು.

ಕಳೆದ 15 ದಿನಗಳಿಂದ ಬ್ರಿಟನ್‌ನಿಂದ ಬಂದವರೇ ರೂಪಾಂತರ ವೈರಸ್‌ನ್ನು ಹರಡುವವರು. ಹಾಗಾಗಿ ಮೊದಲಿಗೆ ಅವರ ಪರೀಕ್ಷೆ ನಡೆಸಿದ್ದೇವೆ. ನಂತರ ಉಳಿದವರನ್ನು ಪರೀಕ್ಷೆಗೆ ಒಳಪಡಿಸಲಾಗುವುದು ಎಂದರು.

ನೈಟ್ ಕರ್ಫ್ಯೂ ಮುಗಿದ ಅಧ್ಯಾಯ

ರಾಜ್ಯದಲ್ಲಿ ರೂಪಾಂತರ ಕೊರೊನಾ ವೈರಸ್ ಪತ್ತೆಯಾಗಿರುವುದರಿಂದ ನೈಟ್ ಕರ್ಫ್ಯೂವನ್ನು ಮತ್ತೆ ಜಾರಿ ಮಾಡುವ ಪ್ರಸ್ತಾವಗಳನ್ನು ತಳ್ಳಿ ಹಾಕಿದ ಅವರು, ನೈಟ್ ಕರ್ಫ್ಯೂ ಮುಗಿದ ಅಧ್ಯಾಯ. ಈ ಬಗ್ಗೆ ಮುಖ್ಯಮಂತ್ರಿಗಳೇ ತೀರ್ಮಾನ ತೆಗೆದುಕೊಂಡಿದ್ದಾರೆ. ಹಾಗಾಗಿ ನೈಟ್ ಕರ್ಫ್ಯೂ ಜಾರಿ ಮಾಡುವ ಪ್ರಶ್ನೆಯೇ ಇಲ್ಲ ಎಂದರು. ಹೊಸ ಪ್ರಭೇದದ ಕೊರೊನಾ ಸೋಂಕು ಕಾಣಿಸಿಕೊಂಡ ಜನರ ಪೈಕಿ ಹಲವರಿಗೆ ಮನೆಯಲ್ಲಿ ಚಿಕಿತ್ಸೆ ನೀಡುತ್ತಿದ್ದಾರೆ ಮತ್ತೆ ಕೆಲವರು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸೋಂಕಿತರು ಪತ್ತೆಯಾಗಿರುವ ಮನೆಗಳ ಸುತ್ತಮುತ್ತ ಬ್ಯಾರಿಕೇಡ್ ಹಾಕಿ ಕಟ್ಟೆಚ್ಚರ ವಿಧಿಸಲಾಗಿದೆ

ಎಚ್ಚರಿಕೆಗೆ ಸೂಚನೆ: ಇಂಗ್ಲೆಂಡ್‌ನಿಂದ ಬಂದ ಅನೇಕ ಮಂದಿಯಲ್ಲಿ ರೂಪಾಂತರ ಕೊರೊನಾ ಸೋಂಕು ಕಾಣಿಸಿಕೊಂಡಲ್ಲಿ ಅವರ ಸಂಪರ್ಕಕ್ಕೆ ಬಂದಿರುವ ಕುಟುಂಬದ ಸದಸ್ಯರು ಸ್ನೇಹಿತರು ಸೇರಿದಂತೆ ಎಲ್ಲರೂ ಎಚ್ಚರಿಕೆ ವಹಿಸುವಂತೆ ಕೇಂದ್ರ ಆರೋಗ್ಯ ಸಚಿವಾಲಯ ಸೂಚನೆ ನೀಡಿದೆ. ರೂಪಾಂತರ ಕೊರೊನಾ ಸೋಂಕು ಕಾಣಿಸಿಕೊಂಡಿರುವ ಸೋಂಕಿತರ ಸಂಪರ್ಕದಲ್ಲಿರುವ ಎಲ್ಲರೂ ಕಡ್ಡಾಯವಾಗಿ ಪರೀ–ಕ್ಷೆ ಮಾಡಿಸಿಕೊಳ್ಳುವ ಮೂಲಕ ಆರೋಗ್ಯದ ಕಡೆಗೆ ಗಮನ ವಹಿಸುವಂತೆ ಸೂಚಿಸಲಾಗಿದೆ.

ನವಂಬರ್ 25 ರಿಂದ ಡಿಸೆಂಬರ್ 23 ರವರೆಗೆ ಇಂಗ್ಲೆಂಡ್ನಿಂದ ಭಾರತಕ್ಕೆ 33 ಸಾವಿರ ಮಂದಿ ಪ್ರಯಾಣಿಕರು ಆಗಮಿಸಿದ್ದಾರೆ. ಆ ಪೈಕಿ ಬಹುತೇಕ ಜನರಿಗೆ ಪರೀಕ್ಷೆ ನಡೆಸಲಾಗಿದ್ದು ಅದರಲ್ಲಿ 20 ಮಂದಿಗೆ ಹೊಸ ಮಾದರಿ ಸೋಂಕು ಪತ್ತೆಯಾಗಿದೆ.

ಸಂಜೆವಾಣಿ
1982

# ನಗರದ ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರ ನಿರ್ಬಂಧ

ಬೆಂಗಳೂರು,ಡಿ.30–ಕೊರೊನಾ ಸೋಂಕು ಹರಡುವಿಕೆ ತಡೆಯುವ ಹಿನ್ನೆಲೆಯಲ್ಲಿ ಹೊಸ ವರ್ಷಾಚರಣೆಗೆ ಹೆಚ್ಚು ಜನ ಸೇರುತ್ತಿದ್ದ ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ, ಚರ್ಚ್ ಸ್ಟ್ರೀಟ್, ರೆಸಿಡೆನ್ಸಿ ರಸ್ತೆ, ಮ್ಯೂಸಿಯಂ ರಸ್ತೆ ಹಾಗೂ ಸೇಂಟ್ ಮಾರ್ಕ್ಸ್ ರಸ್ತೆಗಳಲ್ಲಿ ನಾಳೆ ಸಂಜೆಯಿಂದ ಜ.1ರ ಮುಂಜಾನೆಯವರೆಗೆ ವಾಹನಗಳ ಸಂಚಾರವನ್ನು ಸಂಪೂರ್ಣ ನಿರ್ಬಂಧಿಸ ಲಾಗಿದೆ.

ಕಮಿಷನರೇಟ್ ವ್ಯಾಪ್ತಿಯಲ್ಲಿ ಡಿ. 31ರಂದು ಸಂಜೆ 6 ಗಂಟೆಯಿಂದ ಜ. 1ರ ಬೆಳಿಗ್ಗೆ 6 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಅಂದು ರಾತ್ರಿ 8 ಗಂಟೆಯಿಂದ ಬೆಳಿಗ್ಗೆ 6 ಗಂಟೆಯವರೆಗೆ ಹಲವು ರಸ್ತೆಗಳಲ್ಲಿ ವಾಹನಗಳ ಸಂಚಾರ ನಿರ್ಬಂಧಿಸಲಾಗಿದ್ದು, ಕೆಲವೆಡೆ ಮಾರ್ಗ ಬದಲಾವಣೆ ಸಹ ಮಾಡಲಾಗಿದೆ ಎಂದು ಜಂಟಿ ಪೊಲೀಸ್ ಆಯುಕ್ತ (ಸಂಚಾರ) ರವಿಕಾಂತೇಗೌಡ ಅವರು ತಿಳಿಸಿದ್ದಾರೆ.

'ಹೊಸ ವರ್ಷಾಚರಣೆ ನೆಪದಲ್ಲಿ ಕೆಲವರು ವ್ಹೀಲಿಂಗ್, ಡ್ರ್ಯಾಗ್ ರೇಸ್ ಮಾಡುವ ಸಾಧ್ಯತೆ ಇದೆ. ಹೀಗಾಗಿ, ನಗರದ ಎಲ್ಲ ಮೇಲ್ಸೇತುವೆಗಳನ್ನು ಬಂದ್ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.



'ಎಂ.ಜಿ. ರಸ್ತೆ (ಕ್ವೀನ್ಸ್ ವೃತ್ತದಿಂದ ಟ್ರಿನಿಟಿ ವೃತ್ತ), ಕಬ್ಬನ್ ರಸ್ತೆ, ರೆಸಿಡೆನ್ಸಿ, ರಿಚ್ಮಂಡ್ ರಸ್ತೆ, ಇನ್ಫೆಂಟ್ರಿ ರಸ್ತೆ, ಬ್ರಿಗೇಡ್ ರಸ್ತೆ, ಅಶೋಕನಗರ ಹಳೇ ಪಿ.ಎಸ್ ವೃತ್ತ, ಚರ್ಚ್ ಸ್ಟ್ರೀಟ್, ಮ್ಯೂಸಿಯಂ ರಸ್ತೆ, ರೆಸ್ಟ್ ಹೌಸ್ ರಸ್ತೆ, ಸೇಂಟ್ ಮಾರ್ಕ್ಸ್ ರಸ್ತೆ ಹಾಗೂ ಇಂದಿರಾನಗರ 100 ಅಡಿ ರಸ್ತೆಯಲ್ಲಿ ವಾಹನಗಳ ನಿಲುಗಡೆಯನ್ನೂ ನಿಷೇಧಿಸಲಾಗಿದೆ.

ಯಾರಾದರೂ ನಿಯಮ ಉಲ್ಲಂಘಿಸಿದರೆ, ಅಂಥವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು' ಎಂದು ಎಚ್ಚರಿಕೆ ನೀಡಿದ್ದಾರೆ.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

## • ರಾಜ್ಯದಲ್ಲಿ ಏಳು ಜನರಿಗೆ

# ರೂಪಾಂತರಿ ವೈರಸ್

## ಶಿವಮೊಗ್ಗದ ಒಂದೇ ಕುಟುಂಬದ ನಾಲ್ವರಿಗೆ ಸೋಂಕು

ಬೆಂಗಳೂರು/ನವದೆಹಲಿ, ಡಿ.30- ಚೀನಾದ ಮಹಾಮಾರಿ ಕೋವಿಡ್-19 ನಿಯಂತ್ರಣಕ್ಕೆ ಬಂದಿದೆ ಎಂದು ನಿಟ್ಟುಸಿರು ಬಿಡುತ್ತಿರುವಾಗಲೇ ಬ್ರಿಟನ್‌ನಿಂದ ಆಗಮಿಸಿದ್ದ 7 ಮಂದಿಗೆ ರೂಪಾಂತರಿ ಕೊರೊನಾ ವೈರಸ್(ಸಾರ್ಸ್-ಕೋ-2) ಪತ್ತೆಯಾಗಿದೆ.

ಇನ್ನೊಂದು ಆಘಾತಕಾರಿ ಎಂದರೆ ಕರ್ನಾಟಕದಲ್ಲಿ ನಾಲ್ಕು ಮಂದಿಗೆ ಬ್ರಿಟನ್ ಮಾದರಿಯ ಸೋಂಕು ಕಾಣಿಸಿಕೊಂಡಿದ್ದು ಒಟ್ಟು ಪ್ರಕರಣಗಳ ಸಂಖ್ಯೆ 7ಕ್ಕೆ ಏರಿದೆ. ...ಪುಟ 2

## ನಿಯಮ ಪಾಲಿಸದಿದ್ದರೆ



ವಾರ್ತಾ ಇಲಾಖೆಯ ಹೊಸ ವಿನ್ಯಾಸದ ಜನಪದ ಸಂಚಿಕೆಯನ್ನು ಸಿಎಂ ಯಡಿಯೂರಪ್ಪ ಬಿಡುಗಡೆ ಮಾಡಿದರು. ಪ್ರಧಾನ ಕಾರ್ಯದರ್ಶಿ ಅಂಜುಂ ಪರ್ವೇಜ್, ಆಯುಕ್ತ ಡಾ. ಹರ್ಷ, ಸಿಎಂ ಸಲಹೆಗಾರ ಲಕ್ಷ್ಮೀನಾರಾಯಣ ಮತ್ತಿತರ ಅಧಿಕಾರಿಗಳು ಜತೆಗಿದ್ದರು.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

## ನಿಯಮ ಪಾಲಿಸದಿದ್ದರೆ ಅಪಾಯ ಖಚಿತ

**ಬೆಂಗಳೂರು,ಡಿ.30 –** ರಾಜ್ಯದಲ್ಲಿ ಬ್ರಿಟನ್ ಮಾದರಿಯ ಸೋಂಕು ಕಾಣಿಸಿಕೊಂಡಿ ರುವುದರಿಂದ ಪ್ರತಿಯೊಬ್ಬರು ಕಡ್ಡಾಯವಾಗಿ ಕೋವಿಡ್ ನಿಯಮಗಳನ್ನು ಪಾಲನೆ ಮಾಡಬೇಕು.

ಇಲ್ಲದಿದ್ದರೆ ಅಪಾಯ ಕಟ್ಟಿಟ್ಟ ಬುತ್ತಿ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಆತಂಕ ವ್ಯಕ್ತಪಡಿಸಿದ್ದಾರೆ. ...ಪುಟ 2

## ಬ್ರಿಟನ್‌ನಿಂದ ಬಂದವರು ಪತ್ತೆಯಾದರು!

**ಬೆಂಗಳೂರು, ಡಿ.30 –** ಬ್ರಿಟನ್‌ನಿಂದ ಬಂದು ನಾಪತ್ತೆಯಾಗಿದ್ದ 202 ಮಂದಿಯನ್ನು ಪತ್ತೆಹಚ್ಚುವಲ್ಲಿ ಬಿಬಿಎಂಪಿ ಕಡೆಗೂ ಸಫಲವಾಗಿದೆ.

ಕಳೆದ ವಾರ ಬ್ರಿಟನ್‌ನಿಂದ ಆಗಮಿಸಿದ್ದ ಪ್ರಯಾಣಿಕರು ತಪ್ಪು ವಿಳಾಸ ಕೊಟ್ಟು ನಗರದ ಬೇರೆಡೆ ವಾಸವಾಗಿದ್ದರು. ಅವರ ಪತ್ತೆಗೆ ಆರೋಗ್ಯ ಇಲಾಖೆ ಮತ್ತು ಪಾಲಿಕೆ ಹರಸಾಹಸ ಪಟ್ಟಿದ್ದವು. ಪೊಲೀಸ್ ಇಲಾಖೆ ಸಹಾಯದಿಂದ ಬಹುತೇಕ ಮಂದಿಯನ್ನು ಪಾಲಿಕೆ ಅಧಿಕಾರಿಗಳು ಪತ್ತೆಹಚ್ಚಿದ್ದಾರೆ. ...ಪುಟ 2

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

# ಲಾಕ್‌ಡೌನ್ ಅಗತ್ಯವಿಲ್ಲ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬ್ರಿಟನ್ ಸೋಂಕು ನಮ್ಮಲ್ಲಿ ಕಾಣಿಸಿಕೊಂಡಿದ್ದರೂ ಅದರ ಬಗ್ಗೆ ಸರ್ಕಾರ ಎಲ್ಲ ರೀತಿಯ ತುರ್ತು ಕ್ರಮಗಳನ್ನು ಕೈಗೊಂಡಿದೆ. ಆದರೆ ಸದ್ಯಕ್ಕಂತೂ ನಮ್ಮ ಮುಂದೆ ಲಾಕ್‌ಡೌನ್ ಮಾಡುವ ಯಾವುದೇ ಪ್ರಸ್ತಾವನೆ ಇಲ್ಲ ಎಂದು ಪುನರುಚ್ಚರಿಸಿದರು.

ಬ್ರಿಟನ್ ಮಾದರಿಯ ಸೋಂಕು ಕಾಣಿಸಿಕೊಂಡಿರುವುದರಿಂದ ಶಾಲಾಕಾಲೇಜುಗಳನ್ನು ಪುನರಾರಂಭಿಸುವ ಕುರಿತಂತೆ ಮುಖ್ಯಮಂತ್ರಿ ಯಡಿಯೂರಪ್ಪನವರೊಂದಿಗೆ ಚರ್ಚಿಸಿ ಸಾರ್ವಜನಿಕರಿಗೆ ಉಂಟಾಗಿರುವ ಗೊಂದಲಗಳನ್ನು ನಿವಾರಣೆ ಮಾಡಲಿದ್ದಾರೆ ಎಂದಿದ್ದಾರೆ.

ಜ.1ರಿಂದ 10ನೇ ಮತ್ತು ದ್ವಿತೀಯ ಪಿಯುಸಿ ಹಾಗೂ ಜನವರಿ 15ರಿಂದ 6 ಮತ್ತು 9ನೇ ತರಗತಿಯವರಿಗೆ ವಿದ್ಯಾಗಮ ಪಾರಂಭವಾಗಲಿದೆ. ಕಳೆದ ಎರಡು ದಿನಗಳಿಂದ ರಾಜ್ಯದಲ್ಲಿ ಬ್ರಿಟನ್ ಮಾದರಿಯ ಸೋಂಕು ಕಾಣಿಸಿಕೊಂಡಿರುವುದರಿಂದ ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸಬೇಕೆ ಬೇಡವೆ ಎಂಬುದರ ಬಗ್ಗೆ ಪೋಷಕರು ಗೊಂದಲಕ್ಕೆ ಸಿಲುಕಿರುವುದು ನಿಜ ಎಂದು ಹೇಳಿದರು.

ಈ ಸಂಬಂಧ ಮುಖ್ಯಮಂತ್ರಿಗಳು, ಸಚಿವ ಸುರೇಶ್ ಕುಮಾರ್ ಹಾಗೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಶೀಘ್ರದಲ್ಲೇ ಸಭೆ ನಡೆಸಿ ತೀರ್ಮಾನ ಕೈಗೊಳ್ಳುತ್ತಾರೆ. ಈಗ ಉಂಟಾಗಿರುವ ಗೊಂದಲಗಳಿಗೆ ಮುಖ್ಯಮಂತ್ರಿಗಳಿಗೆ ಸ್ಪಷ್ಟ ತೀರ್ಮಾನ ಹೊರಡಿಸುತ್ತಾರೆ ಎಂದರು.

ಶಾಲಾಕಾಲೇಜುಗಳ ಪುನರಾರಂಭಕ್ಕೆ ಎರಡು ರೀತಿಯ ಪ್ರತಿಕ್ರಿಯೆಗಳು ವ್ಯಕ್ತವಾಗಿವೆ. ಕೆಲವರು ಬೇಡ ಎನ್ನುತ್ತಿದ್ದರೆ ಇನ್ನು ಕೆಲವರು ಆರಂಭಿಸಿ ಎಂದು ಹೇಳುತ್ತಿದ್ದಾರೆ. ಬೇರೆ ಬೇರೆ ರಾಜ್ಯಗಳಲ್ಲಿ ಆರಂಭವಾಗಿವೆ. ಎಲ್ಲ ಗೊಂದಲಗಳಿಗೆ ಇತಿಶ್ರೀ ಹಾಡಲಿದ್ದೇವೆ ಎಂದರು.

ಬ್ರಿಟನ್ ವೈರಸ್ ಯಾವ ರೀತಿ ಹಬ್ಬಿದೆ ಎಂಬುದನ್ನು ನೋಡಿಕೊಂಡು ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಜೊತೆ ಸಭೆ ನಡೆಸಲಾಗುವುದು. ಯಾವುದೇ ತೀರ್ಮಾನ ಕೈಗೊಂಡರೂ ಅದು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಹಿತದೃಷ್ಟಿಗೆ ಒಳಪಟ್ಟಿರುತ್ತದೆ ಎಂದು ಹೇಳಿದರು.

ಗ್ರಾಮಪಂಚಾಯ್ತಿ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಎಲ್ಲ ಕಡೆ ಗೆಲುವು ಸಾಧಿಸುತ್ತಿದ್ದಾರೆ. ನಮ್ಮ ಪಕ್ಷದ ಶಕ್ತಿ ಎಲ್ಲೆಡೆ ಎದ್ದು ಕಾಣುತ್ತಿದೆ. ಈ ಫಲಿತಾಂಶವು ಜನರ ಪರವಾಗಿದೆ ಎಂಬುದಕ್ಕೆ ನಿದರ್ಶನವಾಗಿದೆ. ನಾವು ಇನ್ನಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡುತ್ತೇವೆ. ಜನರ ದನಿಯಾಗಿ ಅವರಿಗೆ ಸ್ಪಂದಿಸುವುದು ನಮ್ಮ ಕರ್ತವ್ಯ ಎಂದರು.

ಗ್ರಾಪಂ ಮಟ್ಟದಲ್ಲೂ ಬಿಜೆಪಿ ಹಿಡಿತ ಸಾಧಿಸುತ್ತಿದೆ. ಕಾಂಗ್ರೆಸ್ ನೆಲಕಚ್ಚಿದೆ ಎಂದು ಹೇಳಿದರು.

ಉಪಸಭಾಪತಿ ಧರ್ಮೆಗೌಡರ ಆತ್ಮಹತ್ಯೆ ಪ್ರಕರಣ ರಾಜಕಾರಣಿಗಳಿಗೆ ಒಂದು ಎಚ್ಚರಿಕೆ ಪಾಠವಾಗಬೇಕು. ಅವರು ಸಭಾಪತಿ ಸ್ಥಾನದಲ್ಲಿ ಕೂತಿದ್ದರೆ ಆಕಾಶ ಕಳಚಿ ಬೀಳುತ್ತಿರಲಿಲ್ಲ. ತನಿಖೆ ನಂತರ ಎಲ್ಲವೂ ಗೊತ್ತಾಗಲಿದೆ.

ಡೆತ್‌ನೋಟ್‌ನಲ್ಲಿ ಎರಡು ಅಂಶಗಳನ್ನು ಪ್ರಸ್ತಾಪಿಸಿದ್ದಾರೆ. ಅದರಲ್ಲಿ ಪರಿಷತ್‌ನಲ್ಲಿ ನಡೆದ ಗಲಾಟೆ ತಮಗೆ ನೋವು ತಂದಿದೆ ಎಂದು ಹೇಳಿದ್ದಾರೆ. ಒಂದು ವೇಳೆ ಸಭಾಪತಿ ಪೀಠದ ಮೇಲೆ ಕುಳಿತಿದ್ದರೆ ಆಕಾಶ ಬೀಳುತ್ತಿತ್ತಾ ಎಂದು ಕಿಡಿಕಾರಿದರು.

ಈ ಹಿಂದೆ ಸಭಾಪತಿಯಾಗಿದ್ದ ಡಿ.ಎಚ್.ಶಂಕರಮೂರ್ತಿ ಅವರ ಮೇಲೆ ಆರೋಪಗಳು ಕೇಳಿಬಂದಾಗ ಸ್ವಯಂಪ್ರೇರಿತರಾಗಿ ಅವರೇ ಪೀಠದಿಂದ ಕೆಳಗೆ ಕುಳಿತು ಸದನ ನಡೆಸಿಕೊಟ್ಟಿದ್ದರು. ಈಗ ಮಾತನಾಡಿ ಪ್ರಯೋಜನವಿಲ್ಲ. ಇಂತಹ ಘಟನೆ ನಡೆಯಬಾರದಿತ್ತು ಎಂದು ಅಶೋಕ್ ವಿಷಾಧಿಸಿದರು.

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

# ರೂಪಾಂತರಿ ವೈರಸ್

ದೆಹಲಿ 8, ಕೋಲ್ಕತ್ತಾ 1, ಪುಣೆ 1, ಬೆಂಗಳೂರು 4, ಉತ್ತರಪ್ರದೇಶ 1 ಸೇರಿದಂತೆ

ಒಟ್ಟು ನಿನ್ನೆಯಿಂದ ಈವರೆಗೆ 20 ಪ್ರಬೇಧಗಳು ಪತ್ತೆಯಾಗಿವೆ ಎಂದು ಮಾಹಿತಿ ನೀಡಿದೆ.

ಬೆಂಗಳೂರಿನಲ್ಲಿ 03 ಹಾಗೂ ಶಿವಮೊಗ್ಗದಲ್ಲಿ ಒಂದೇ ಕುಟುಂಬದ ನಾಲ್ವರಿಗೆ ಈ ಸೋಂಕು ಕಾಣಿಸಿಕೊಂಡಿದೆ. ಕಳೆದ ಡಿ.23ರಂದು ಬ್ರಿಟನ್‌ನಿಂದ ಇವರು ಸ್ವದೇಶಕ್ಕೆ ಹಿಂತಿರುಗಿದ್ದರು.

ಸದ್ಯಕ್ಕೆ ದೇಶದಲ್ಲಿ 20 ಮಂದಿಗೆ ಬ್ರಿಟನ್ ರೂಪಾಂತರಿ ಕೊರೊನಾ (ಸಾರ್ಸ್-ಕೋ-2) ಕಾಣಿಸಿಕೊಂಡಿದ್ದು, ತಕ್ಷಣವೇ ಎಲ್ಲಾ ರಾಜ್ಯ ಸರ್ಕಾರಗಳು ಇನ್ನಷ್ಟು ಬಿಗಿಯಾದ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಕೇಂದ್ರ ಸರ್ಕಾರ ಎಲ್ಲ ರಾಜ್ಯಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ಕೊಟ್ಟಿದೆ.

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬಿಡುಗಡೆ ಮಾಡಿರುವ ಪ್ರಕಟಣೆಯಲ್ಲಿ ಉತ್ತರಪ್ರದೇಶದಲ್ಲಿ ಎರಡು ವರ್ಷದ ಮಗು ಸೇರಿದಂತೆ ದೇಶಾದ್ಯಂತ ಇಂದು 7 ಹೊಸ ಪ್ರಬೇಧಗಳು ಪತ್ತೆಯಾಗಿವೆ.

ಐಸಿಎಂಆರ್ ಬಿಡುಗಡೆ ಮಾಡಿರುವ ಮಾಹಿತಿಯಂತೆ ಬ್ರಿಟನ್‌ನಿಂದ ಬಂದ 107 ವಿದೇಶಿಗರನ್ನು ಕೋವಿಡ್ ಟೆಸ್ಟ್‌ಗೆ ಒಳಪಡಿಸಲಾಗಿತ್ತು . ಇವರಲ್ಲಿ 20 ಮಂದಿಗೆ ರೂಪಾಂತರ ಕೊರೊನಾ ಕಾಣಿಸಿಕೊಂಡಿದೆ.

ಉತ್ತರ ಪ್ರದೇಶದಲ್ಲಿ ಮೊಟ್ಟಮೊದಲ ರೂಪಾಂತರಿ ವೈರಸ್ ಪತ್ತೆಯಾಗಿದ್ದು, ಬ್ರಿಟನ್‌ನಿಂದ ಇತ್ತೀಚೆಗೆ ಮೀರತ್‌ಗೆ ಬಂದಿದ್ದ ಎರಡು ವರ್ಷದ ಮಗುವಿನಲ್ಲಿ ಹೊಸ ಪ್ರಭೇಧದ ವೈರಸ್ ಪತ್ತೆಯಾಗಿದೆ.

ರೂಪಾಂತರ ವೈರಸ್, ಕೊರೋನ ವೈರಸ್‌ಗಿಂತ ಶೇಕಡ 70ರಷ್ಟು ಕ್ಷಿಪ್ರವಾಗಿ ಹರಡುವ ಸಾಮರ್ಥ್ಯ ಹೊಂದಿದ್ದು, ಬ್ರಿಟನ್‌ನಿಂದ ಆಗಮಿಸಿರುವ ಎಲ್ಲ ಪ್ರಯಾಣಿಕರ ಮೇಲೆ ನಿಗಾ ಇರಿಸಲಾಗಿದೆ ಆರ್ಟಿ-ಪಿಸಿಆರ್ ಪರೀಕ್ಷೆ ನಡೆಸಲಾಗುತ್ತಿದೆ.

ಸಂಜಯ್ ನಗರದ ನಿವಾಸಿಯೊಬ್ಬರು ಬ್ರಿಟನ್‌ನಿಂದ ಆಗಮಿಸಿದ್ದರು. ಪರೀಕ್ಷೆ ನಡೆಸಿದ ಇವರ ವರದಿ ಹೊರಬಿದ್ದಿದ್ದು ಪಾಸಿಟಿವ್ ಎಂದು ದೃಢಪಟ್ಟಿದೆ.

ಡಿಸೆಂಬರ್ 18ರಂದು ಬ್ರಿಟನ್‌ನಿಂದ ನಗರಕ್ಕೆ ಬಂದಿದ್ದ 34 ವರ್ಷದ ಮಹಿಳೆ ಮತ್ತು ಅವರ ಮಗು ಸೇರಿ ಮೂವರಿಗೆ ಬ್ರಿಟನ್ ರೂಪಾಂತರಿ ವೈರಸ್ ತಗಲಿರುವುದು ನಿನ್ನೆ ದೃಢಪಟ್ಟಿತ್ತು. ಈ ಹಿನ್ನೆಲೆಯಲ್ಲಿ ತಾಯಿ ಮತ್ತು ಮಗು ನೆಲೆಸಿದ್ದ ವಸಂತಪುರ ವಾರ್ಡ್‌ನ ವಿಠ್ಠಲನಗರದಲ್ಲಿನ ಅಪಾರ್ಟ್‌ಮೆಂಟ್‌ನ್ನು ಬಿಬಿಎಂಪಿ ಸೀಲ್‌ಡೌನ್ ಮಾಡಿದೆ.

ಇವರನ್ನು ಆಸ್ಪತ್ರೆಯ ಐಸೋಲೇಷನ್ ವಾರ್ಡ್‌ನಲ್ಲಿಟ್ಟು ಚಿಕಿತ್ಸೆ ನೀಡಲಾಗುತ್ತಿದೆ. ಸೋಂಕಿತರೊಂದಿಗೆ ಪ್ರಾಥಮಿಕ ಮತ್ತು ದ್ವಿತೀಯ ಸಂಪರ್ಕಕ್ಕೆ ಬಂದವರನ್ನು ಕ್ವಾರಂಟೈನ್ಗೆ ಒಳಪಡಿಸಲಾಗಿದೆ. ಬ್ರಿಟನ್ ರೂಪಾಂತರಿತ ಸೋಂಕು ತಗುಲಿದ ತಾಯಿ ಮತ್ತು ಮಗುವಿನೊಂದಿಗೆ ಪ್ರಾಥಮಿಕ ಸಂಪರ್ಕದಲ್ಲಿದ್ದ ಇಬ್ಬರು, ದ್ವಿತೀಯ ಸಂಪರ್ಕ ಹೊಂದಿದ್ದ 35 ಮಂದಿ ವಾಸವಿದ್ದ ಅಪಾರ್ಟ್‌ಮೆಂಟ್ ಸೀಲ್ ಡೌನ್ ಮಾಡಲಾಗಿದೆ.

ಇಲ್ಲಿನ ನಿವಾಸಿಗಳು ಸಾಂಸ್ಥಿಕ ಕ್ವಾರಂಟೈನ್ ಕೇಂದ್ರಗಳಿಗೆ ತೆರಳಲು ನಿರಾಕರಿಸಿದ್ದರಿಂದಾಗಿ ಪಾಲಿಕೆಯು ಈ ಕ್ರಮ ಕೈಗೊಂಡಿದೆ. ಎಲ್ಲ ನಿವಾಸಿಗಳ ಗಂಟಲು ದ್ರವದ ಮಾದರಿ ಸಂಗ್ರಹಿಸಿ ಆರ್ಟಿಪಿಸಿಆರ್ ಪರೀಕ್ಷೆಗೆ ಕಳುಹಿಸಲಾಗಿದೆ. ಸದ್ಯ ಕೊರೊನಾ ಲಸಿಕೆ ಸಿಗಲಿದೆ ಎನ್ನುವ ಸಮಯದಲ್ಲೇ ಬ್ರಿಟನ್ ವೈರಸ್ ಸೋಂಕು ಜನರಲ್ಲಿ ಆತಂಕ ಮೂಡಿಸಿದೆ.

ಆರಂಭದಲ್ಲಿ ಸೋಂಕು ದೃಢಪಟ್ಟಿದ್ದ ನಾಲ್ವರು ಬ್ರಿಟನ್ ಪ್ರವಾಸಿಗರಿಗೆ ಮಾತ್ರ ವಂಶವಾಹಿ ಪರೀಕ್ಷೆ ನಡೆಸಲಾಗಿತ್ತು. ಇದರಲ್ಲಿ ಮೂವರಿಗೆ ರೂಪಾಂತರಿ ಕೊರೋನಾ ವೈರಸ್ ದೃಢಪಟ್ಟಿದ್ದರೆ, ಮತ್ತೊಬ್ಬರಿಗೆ ಮಾತ್ರ ನೆಗೆಟಿವ್ ಬಂದಿದೆ.

ಇನ್ನು ಜೆಪಿನಗರದ ಮತ್ತೊಬ್ಬ ವ್ಯಕ್ತಿಯ ಸಂಪರ್ಕಕ್ಕೆ ಬಂದಿದ್ದ ಆತನ ಕುಟುಂಬದ ಪತ್ನಿ, ಮಗ ಸೇರಿ ಒಟ್ಟು 9 ಮಂದಿಯನ್ನು ಮನೆಯಲ್ಲಿಯೇ ಕ್ವಾರಂಟೈನ್‌ಗೆ ಒಳಪಡಿಸಲಾಗಿದೆ. 60 ವರ್ಷ ಮೇಲ್ಪಟ್ಟ ಹಾಗೂ ಅನ್ಯ ಕಾಯಿಲೆಗಳಿಂದ ಬಳಲುತ್ತಿರುವ ಸಂಪರ್ಕಿತರನ್ನು ಹೈರಿಸ್ಕ್ ಎಂದು ಪರಿಗಣಿಸಿ ಅವರನ್ನು ಆಸ್ಪತ್ರೆಯಲ್ಲಿಟ್ಟು ನಿಗಾವಹಿಸಲಾಗಿದೆ .

ಸಮಸ್ತ ಕನ್ನಡಿಗರ ನಂ.1 ಸಂಜೆ ದಿನಪತ್ರಿಕೆ
ಈ ಸಂಜೆ

# ಅಪಾಯ ಖಚಿತ

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಹೊಸ ವರ್ಷಾಚರಣೆ ಸಂದರ್ಭದಲ್ಲಿ ಕೋವಿಡ್ ನಿಯಮಗಳನ್ನು ಉಲ್ಲಂಘನೆ ಮಾಡುವುದು ಸರಿಯಲ್ಲ. ಈ ಹೊತ್ತಿನಲ್ಲಿ ಸಾಂಕ್ರಾಮಿಕರೋಗದ ಬಗ್ಗೆ ನಿರ್ಲಕ್ಷ್ಯ ಸಲ್ಲದು ಎಂದಿದ್ದಾರೆ. ಸಾರ್ವಜನಿಕ ಬಂಧುಗಳೇ, ಕೊರೋನಾ ಅಪಾಯ ಇನ್ನೂ ತಗ್ಗಿಲ್ಲ. ಹೊಸ ವರ್ಷಕ್ಕೆ ಕಾಲಿಡುತ್ತಿರುವ ಈ ಹೊತ್ತಿನಲ್ಲಿ ಸಾಂಕ್ರಾಮಿಕದ ಬಗ್ಗೆ ಕಿಂಚಿತ್ತೂ ನಿರ್ಲಕ್ಷ್ಯ ಸಲ್ಲದು. ಸರ್ಕಾರದ ಮಾರ್ಗಸೂಚಿ ನಿಯಮಗಳನ್ನು ಪಾಲಿಸಿ, ಎಲ್ಲ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡು ಸಹಕರಿಸಿ, ಸುರಕ್ಷಿತವಾಗಿರಿ ಎಂದು ಟ್ವೀಟ್ ಮೂಲಕ ಬಿಎಸ್‌ವೈ ಮನವಿ ಮಾಡಿದ್ದಾರೆ.

ರಾಜ್ಯದಲ್ಲಿ ಬ್ರಿಟನ್ ರೂಪಾಂತರಿ ಕೊರೋನಾ ವೈರಸ್ ಸೋಂಕಿತರ ಸಂಖ್ಯೆ 7ಕ್ಕೆ ಏರಿದೆ. ಬ್ರಿಟನ್ ನಿಂದ ಬಂದ 15 ಸೋಂಕಿತರ ಪ್ರಯೋಗಾಲಯ ಮಾದರಿಯನ್ನು ನಿಮ್ಹಾನ್ಸ್‌ನಲ್ಲಿ ಪರೀಕ್ಷೆ ನಡೆಸಿ 7 ಮಂದಿಗೆ ಸೋಂಕು ತಗುಲಿರುವುದು ದೃಢಪಟ್ಟಿರುವ ಹಿನ್ನೆಲೆಯಲ್ಲಿ ಸಿಎಂ ಸಾರ್ವಜನಿಕರಲ್ಲಿ ಎಚ್ಚರಿಕೆ ವಹಿಸುವಂತೆ ಕೋರಿದ್ದಾರೆ.

# ಪತ್ತೆಯಾದರು!

ಪತ್ತೆ ಹಚ್ಚಿರುವ ಬಹುತೇಕ ಮಂದಿಯು ಸ್ವಾಬ್ ಟೆಸ್ಟ್‌ಗೆ ಮುಂದಾಗಿದ್ದು, ಅವರ ಮನೆಗಳ ಬಳಿಗೇ ತೆರಳಿ ಸ್ವಾಬ್ ಟೆಸ್ಟ್ ಮಾಡಲಾಗುತ್ತಿದ್ದು, ಸಂಜೆ ವೇಳೆಗೆ ಇದರ ವರದಿ ಬರಲಿದೆ.

ನಾಪತ್ತೆಯಾಗಿದ್ದವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕೆ, ನಾಪತ್ತೆಯಾಗಿದ್ದುದು ಯಾವ ಕಾರಣಕ್ಕೆ ಎಂಬುದನ್ನು ಪಾಲಿಕೆ ಅಧಿಕಾರಿಗಳು ಅವರನ್ನು ಪ್ರಶ್ನಿಸಲಿದ್ದಾರೆ.